ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 162 ಸಂಚಿಕೆ- 162 | PAGE-8 ಪುಟ-8 | ಗುರುವಾರ 07.08.2025 | RS.2/- ಬೆಲೆ 2/-

# ಜನರಿಗೆ ಧ್ವನಿ ತಂದು ಕೊಟ್ಟ ಶಕ್ತಿ ಮಾಧ್ಯಮಗಳಿಗೆ ಸಲ್ಲುತ್ತದೆ: ಈಶ್ವರ ಖಂಡ್ರೆ

ಮಲ್ಲಮ್ಮನುಡಿ ವಾರ್ತೆ ಬೀದರ.ಅ.06 : ಜನರಿಗೆ ಧ್ವನಿ ತಂದು ಕೊಟ್ಟ ಶಕ್ತಿ ಮಾಧ್ಯಮಗಳಿಗೆ ಸಲ್ಲುತ್ತದೆ ಎಂದು ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರು ಹೇಳಿದರು.

ನಗರದ ಮೈಲೂರು ರಸ್ತೆಯಲ್ಲಿರುವ ಜಿ.ಎನ್.ಡಿ ಕಾಲೇಜು ಕ್ಯಾಂಪಸ್ ನ ಗುರುನಾನಕ ಭವನ ಅವರಣದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಸಹಯೋಗದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪತ್ರಕರ್ತರಿಗೆ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿರುವ ಅವರು, ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗಗಳ ಸಂದೇಶವನ್ನು ಸಾರ್ವಜನಿಕರಿಗೆ ತಲುಪಿಸುವುದರ ಜೊತೆಗೆ ಈ ಅಂಗಗಳ ನ್ಯೂನ್ಯತೆಯನ್ನು ಎತ್ತಿ ಹಿಡಿಯುವ, ಪ್ರಗತಿದಾಯಕ ಕಾರ್ಯ ಮಾಡಿದರೆ ಅವನ್ನು ಪ್ರಶಂಸಿಸುವ ಕಾರ್ಯ ಮಾಧ್ಯಮಗಳು ಮಾಡುತ್ತವೆ ಎಂದರು.

ಜಾಗತಿಕ ಆರೋಗ್ಯ ಸುಧಾರಣೆ, ಮಳೆ ಬೀಳಲು, ಪ್ರಕೃತಿ ವಿಕೋಪ ತಪ್ಪಿಸುವ ಕೀರ್ತಿ ಗಿಡ, ಮರಗಳಿಗೆ ಸಲ್ಲುತ್ತದೆ. ಪ್ರಕೃತಿಯನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಈ ದೇಶದ ಪ್ರತಿಯೊಬ್ಬ ಪ್ರಜೆಗಳದ್ದು. ಆಮ್ಲಜನಿಕ ನಮ್ಮ ಪಾಲಿನ ಸಂಜೀವಿನಿ. ಕೋವಿಡ ಸಂದರ್ಭದಲ್ಲಿ ಆಮ್ಲಜನಿಕ ಕೊರತೆಯಿಂದ ಸಾವಿರಾರು ಜನರು ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಮುಂದಿನ ಪಿಳಿಗೆಗೆ ಆಮ್ಲಜನಿಕದ ಕೊರತೆ ಆಗದಂತೆ ತಡೆಯಲು ರಾಜ್ಯದಲ್ಲಿ 15 ಕೋಟಿ ಸಸಿಗಳನ್ನು ನೆಡಲಾಗಿದೆ. ಬೀದರ್ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ 35 ಲಕ್ಷ ಸಸಿಗಳನ್ನು ನೆಡಲಾಗಿದೆ. ಬಳ್ಳಾರಿ ಹಾಗೂ ವಿಜಯನಗರ ಹೊರತುಪಡಿಸಿ ಕಲ್ಯಾಣ ಕರ್ನಾಟಕ ಭಾಗದ ಉಳಿದ ಐದು ಜಿಲ್ಲೆಗಳಲ್ಲಿ ಹಸಿರು ಹೊದಿಕೆ ಹೆಚ್ಚಳಕ್ಕೆ ಕ್ರಮ ವಹಿಸಲಾಗಿದೆ. ಪ್ಲಾಸ್ಟಿಕ್ ಮುಕ್ತ ರಾಜ್ಯವನ್ನಾಗಿಸಲು ಎಲ್ಲರು ಕೈಜೋಡಿಸಬೇಕೆಂದು ಕರೆ ನೀಡಿದರು. ಶರಣರು, ಸಂತರ ನಾಡು ಈ ಬೀದರ್ ನಲ್ಲಿ ಅಕಾಡೆಮಿ ಕಾರ್ಯಕ್ರಮ ಆಯೋಜನೆ ಮಾಡಿದ್ದು ಸಂತಸದ ಸಂಗತಿ. ಮಧ್ಯಮ ಆಡಳಿತದ ನಾಲ್ಕನೇ ಅಂಗ, ಅದನ್ನು ತಿದ್ದುವ ಕೆಲಸ ಮಾಧ್ಯಮ ರಂಗ ಮಾಡುತ್ತದೆ. ಜನಾಭಿಪ್ರಾಯ ಮೂಡಿಸುವ ಕಾರ್ಯ ಮಾಧ್ಯಮ ರಂಗ ಮಾಡುತ್ತಾ ಬಂದಿದೆ. ಇದು ಶ್ರೇಷ್ಠ ಸೇವಾ ಕಾರ್ಯ. ಅನೇಕರು ಮಾಧ್ಯಮ ರಂಗದಲ್ಲಿ ಸೇವೆ ಮಾಡಿದ್ದಾರೆ. ಮಾಧ್ಯಮದಲ್ಲಿ ನಾವು ಎಂದಿಗೂ ಮುಂದೆ

ಲೇಖನಿ ಖಡ್ಗಗಿಂತ ಹರಿತವಾದದ್ದು ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ನಾವು ಇವತ್ತು ನೋಡುತ್ತೇವೆ. ಸತ್ಯ ಮರೆಮಾಚದೆ ಉತ್ತಮ ಕಾರ್ಯ ಮಾಡಬೇಕು ಮುದ್ರಣ ಮಾಧ್ಯಮ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ. ಜಗತ್ತಿನಲ್ಲಿ ಯಾರೂ ಪರಿಪೂರ್ಣ ಅಲ್ಲ ಅದಕ್ಕಾಗಿ ನೀವು ನಿತ್ಯ ಅಧ್ಯಯನ ಮಾಡುವ ಅವಶ್ಯಕತೆ ಇದೆ. ಕೃತಕ ಬುದ್ಧಿ ಮತ್ತೆಯಿಂದ ಅನೇಕ ಆತಂಕಗಳು ಇವೆ ನಿರುದ್ಯೋಗ ಸಮಸ್ಯೆ ಆಗುವುದೇ ಎಂದು ಭಯ ಇದೆ ಆದರೆ ಅದು ಆಗುವುದಿಲ್ಲ. ನಮ್ಮ ದೇಶದ ಬುದ್ಧಿಮತ್ತಿಗೆ ಬಹಳ ಬೆಲೆ ಇದೆ.



ಸುದ್ದಿಯಲ್ಲಿ ನಿಖರತೆ ಇರುವುದು ಮುಖ್ಯವಾಗಿದೆ, ಬರೆಯುವ ಮುಂಚೆ ಸತ್ಯಸತ್ಯತೆ ತಿಳಿದುಕೊಂಡು ಬರೆದರೆ ವಿಶ್ವಾಸಾರ್ಹತೆ ಬೆಳೆಯುತ್ತದೆ. ನಮ್ಮ ಸಂಹವನ ಉತ್ತಮವಾಗಿ ಮಾಡಿದರೆ ಸುದ್ದಿ ಹೆಕ್ಕಿ ತೆಗೆಯಲು ಸಾಧ್ಯ ಆಗುತ್ತದೆ.

ಜಿಲ್ಲೆಯಲ್ಲಿ ಮಾಧ್ಯಮ ತರಬೇತಿ ಕೇಂದ್ರ ಸ್ಥಾಪನೆಗೆ ಒತ್ತು ನೀಡಿದಲ್ಲಿ ನಿವೇಶನ ನೀಡಿ ತರಬೇತಿ ಕೇಂದ್ರ ಸ್ಥಾಪನೆ ಮಾಡಲು ಅನುಕೂಲವಾಗಿ ಇಲ್ಲಿನ ಪತ್ರಕರ್ತರ ಕೌಶಲ್ಯ ಅಭಿವೃದ್ಧಿಗೆ ಸಹಕಾರಿ ಆಗುತ್ತದೆ ಎಂದು ತಿಳಿಸಿದರು ಪರಿಸರ ಸಂರಕ್ಷಣೆ, ಸೇರಿದಂತೆ ಹತ್ತು ಹಲವು ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯ ಮಾಧ್ಯಮ ರಂಗ ಮಾಡುತ್ತಾ ಬರುತ್ತಿದೆ. ಇವತ್ತು ನಾವು ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ಅನಾಹುತಗಳ ಬಗ್ಗೆ ಜನರ ಗಮನಕ್ಕೆ ತರಬೇಕು. ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ಜಿಲ್ಲೆ, ರಾಜ್ಯ ಮಾಡಬೇಕಾಗಿದೆ. ಗಣೇಶ ಚತುರ್ಥಿಗೆ ಪಿಓಪಿ ಗಣೇಶ ಬಳಸದೆ ಮಣ್ಣಿನ ಪರಿಸರ ಸ್ನೇಹಿ ಗಣೇಶ ಕೂರಿಸುವ ಕೆಲಸ ಮಾಡಬೇಕು. ಧಾರ್ಮಿಕ ವಿಚಾರಗಳನ್ನು ಉಳ್ಳವರು ಸಹ ಅನೇಕ ಜನ ಮಣ್ಣಿನ ಗಣಪತಿ ಬಳಸುತ್ತಾರೆ, ಜನರಿಗೆ ಮಾರಕ ಆಗಿರುವ ಪಿಓಪಿ ಗಣಪತಿ ಬಳಸದೆ ಮಣ್ಣಿನ ಗಣಪತಿ ಕೂರಿಸಿ ಪರಿಸರ ಸ್ನೇಹಿ ಗಣೇಶ ಉತ್ಸವ ಆಚರಣೆ ಮಾಡಬೇಕು ಎಂದು ತಿಳಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಶಾ ಖಾನಂ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ನಾಡಿನ ಕಿರೀಟ ಹತ್ತಾರು ಸಾಂಪ್ರದಾಯಿಕ ಸಾಂಸ್ಕೃತಿಕ ಮಿಲನ ಈ ಬೀದರ್, ಇಲ್ಲಿನ ನಾಯಕತ್ವ ವಿಶಿಷ್ಟವಾಗಿದೆ, ಇಲ್ಲಿನ ನಾಯಕರು ಸಹ ಈ ಭಾಗದ ಅಭಿವೃದ್ಧಿಗೆ ಪಣ ತೊಟ್ಟಿದ್ದಾರೆ. ಈ ಕಾರ್ಯಕ್ರಮದ ಉದ್ದೇಶ ಪತ್ರಕರ್ತರ ಮಾಧ್ಯಮ ಮಿತ್ರರಿಗೆ ಪ್ರೇರಣೆ ನೀಡುವ ಕೆಲಸ ಮಾಡುವುದು, ಹೊಸ ತಾಂತ್ರಿಕ ಯುಗದಲ್ಲಿ.

ಗ್ರಾಮೀಣ ಪತ್ರಕರ್ತರು ನಿಜವಾದ ಸುದ್ದಿಗಳನ್ನು ಬಿಡುತ್ತಾರೆ. ಧ್ವನಿ ಇಲ್ಲದವರಿಗೆ ಧ್ವನಿ ಕೊಡುತ್ತಾರೆ ಅಂತಹವರಿಗೆ ತರಬೇತಿ ನೀಡುವ ಕಾರ್ಯ ಅಕಾಡೆಮಿ ಮಾಡುತ್ತಿದೆ.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಮಾಧ್ಯಮದ ಪಾತ್ರ ಏನು ಎನ್ನುವುದು ತಿಳಿಯುವುದು ಅತ್ಯವಶ್ಯಕವಾಗಿದೆ, ಆ ಸಂಬಂಧ ಕಾರ್ಯಕ್ರಮ ಆಯೋಜಿಸಲಾಗಿದೆ.

(2ನೇ ಪುಟ ನೋಡಿ)

## ವೈದ್ಯರು ರೋಗಿಗಳನ್ನು ಸಹಾನುಭೂತಿಯಿಂದ ಕಾಣಬೇಕು:ಸಿಎಂ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಆ. 06:ವೈದ್ಯರು ರೋಗಿಗಳನ್ನು ಸಹಾನುಭೂತಿಯಿಂದ ಕಾಣಬೇಕು. ಉಚಿತ ಚಿಕಿತ್ಸೆ ಇರುವುದರಿಂದ ಒತ್ತಡವೂ ಹೆಚ್ಚಿರುತ್ತದೆ. ವೈದ್ಯರು ಸಹನೆಯಿಂದ ಕೆಲಸ ಮಾಡಬೇಕು. ಯಾರಬಳಿಯೂ ಹಣ ಪಡೆಯಬಾರದು ಎಂದು ವೈದ್ಯರಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಕೊಪ್ಪಳ ಕಾರ್ಯಕ್ರಮ ಇಂದು ಮಳೆ ಕಾರಣದಿಂದ ತೆರಳಲಿಲ್ಲ. ಆದ್ದರಿಂದ ವಿಕ್ಟೋರಿಯಾ ಆಸ್ಪತ್ರೆಗೆ ಇಂದು ಅನಿರೀಕ್ಷಿತ ಭೇಟಿ ನೀಡಲಾಗಿದೆ ಆಸ್ಪತ್ರೆಯಲ್ಲಿ ವಾಹನ ನಿಲುಗಡೆಗೆ ಹಣ ಪಡೆಯುತ್ತಿರುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

ಸರ್ಕಾರದ 108 ಆಂಬ್ಯುಲೆನ್ಸ್

(2ನೇ ಪುಟ ನೋಡಿ)

## 6 ವರ್ಷದ ಬಳಿಕ ಚೀನಾಗೆ ಮೋದಿ ಭೇಟಿ



ಮಲ್ಲಮ್ಮನುಡಿ ವಾರ್ತೆ ನವದೆಹಲಿ:.6: ಪ್ರಧಾನಿ ನರೇಂದ್ರ ಮೋದಿ ಅವರು 6 ವರ್ಷದ ಬಳಿಕ ಚೀನಾಗೆ ಭೇಟಿ ನೀಡಲಿದ್ದಾರೆ.

ಈ ತಿಂಗಳು ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಗಾಗಿ ಮೋದಿ ಚೀನಾ ಪ್ರವಾಸ ಕೈಗೊಳ್ಳಲಿದ್ದಾರೆ. 2020 ರಲ್ಲಿ ಭಾರತ ಮತ್ತು ಚೀನಾ ಸೈನಿಕರ ನಡುವೆ ಗಲ್ವಾನ್ ಘರ್ಷಣೆಯ ನಂತ ಮೊದಲ ಚೀನಾ ಪ್ರವಾಸ ಇದಾಗಿದೆ. ಆಗಸ್ಟ್ 30, ಸೆಪ್ಟೆಂಬರ್ 1 ರಂದು ಶಾಂಘೈ ಸಹಕಾರ ಸಂಸ್ಥೆಯ ಸಭೆ ಆಯೋಜನೆಗೊಂಡಿದೆ.

ಈ ಭೇಟಿಯ ಸಂದರ್ಭದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭೇಟಿಯಾಗುವ ಸಾಧ್ಯತೆಯಿದೆ. ಪ್ರಧಾನಿ ಮೋದಿ ಎರಡು ದಿನಗಳ ಭೇಟಿಗಾಗಿ ಚೀನಾಕ್ಕೆ ತೆರಳುವ ಮೊದಲು ಆಗಸ್ಟ್ 30 ರಂದು ಜಪಾನ್‌ಗೆ ಭೇಟಿ ನೀಡಲಿದ್ದಾರೆ.

## ರೆಪೊ ದರ ಶೇ. 5.5 ಯಥಾಸ್ಥಿತಿ ಮುಂದುವರಿಕೆ

ಮಲ್ಲಮ್ಮನುಡಿ ವಾರ್ತೆ ಚೆನ್ನೈ:ಅ.6: ಭಾರತೀಯ ರಿಸರ್ವ್ ಬ್ಯಾಂಕಿನ ಹಣಕಾಸು ನೀತಿ ಸಮಿತಿ ಬುಧವಾರ ಪ್ರಮುಖ ರೆಪೊ ದರವನ್ನು ಶೇಕಡಾ 5.5ರಲ್ಲಿ ಯಥಾಸ್ಥಿತಿಯಲ್ಲಿ ಇರಿಸಿದೆ. ಅಮೆರಿಕದೊಂದಿಗೆ ನಡೆಯುತ್ತಿರುವ ವ್ಯಾಪಾರ ಮತ್ತು ಸುಂಕ ವಿವಾದದ ಬಗ್ಗೆ ಅನಿಶ್ಚಿತತೆಯ ನಡುವೆಯೂ ತನ್ನ ತಟಸ್ಥ ನೀತಿ ನಿಲುವನ್ನು ಆರ್ ಬಿಐ ಕಾಯ್ದುಕೊಂಡಿದೆ. ತನ್ನ ತ್ರೈಮಾಸಿಕ ವಿತ್ತೀಯ ನೀತಿಯನ್ನು ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಕೇಂದ್ರಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದ ಜಿಡಿಪಿ ಬೆಳವಣಿಗೆಯ ಮುನ್ಸೂಚನೆಯನ್ನು ಶೇಕಡಾ 6.5ರಲ್ಲಿಯೇ ಉಳಿಸಿಕೊಳ್ಳಲಿದೆ ಎಂದು ಹೇಳಿದರು, ಅಪಾಯಗಳು ಸಮವಾಗಿ ಸಮತೋಲನದಲ್ಲಿರುತ್ತವೆ, ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ದೇಶದ ಆರ್ಥಿಕತೆ ಮೇಲೆ ಪರಿಣಾಮ ಬೀರುತ್ತವೆ ಎಂದರು. ನಿರೀಕ್ಷೆಗಳಿಗೆ



ಅನುಗುಣವಾಗಿ ಪ್ರಮುಖ ಹಣದುಬ್ಬರವು ಶೇಕಡಾ 4ರಲ್ಲಿ ಸ್ಥಿರವಾಗಿದೆ. ಎಂಪಿಸಿ ತನ್ನ ಜೂನ್ ನೀತಿ ಪರಿಶೀಲನೆಯಲ್ಲಿ ನಿರೀಕ್ಷೆಗಿಂತ ಹೆಚ್ಚಿನ 50 ಬೇಸಿಸ್ ಪಾಯಿಂಟ್ ದರ ಹೆಚ್ಚಳವನ್ನು ಘೋಷಿಸಿತ್ತು. ಭಾರತೀಯ ರಿಸರ್ವ್ ಬ್ಯಾಂಕಿನ ಗವರ್ನರ್ ಸಂಜಯ್ ಮಲ್ಹೋತ್ರಾ ಪ್ರಸಕ್ತ ಆರ್ಥಿಕ ವರ್ಷದ ಮೂರನೇ ದ್ವೈಮಾಸಿಕ ಆರ್ಥಿಕ ನೀತಿಯನ್ನು ಇಂದು ಘೋಷಿಸಿದ್ದಾರೆ. ಆರು ಸದಸ್ಯರ ಹಣಕಾಸು ಸಮಿತಿ ಆರ್ಥಿಕ ವರ್ಷ 2026ರ ಮೂರನೇ ದ್ವೈಮಾಸಿಕ ನೀತಿಯನ್ನು ಪ್ರಕಟಿಸಿದೆ. ಭಾರತದ ಆಮದುಗಳ ಮೇಲೆ ಶೇ. 25ರಷ್ಟು ಅಮೆರಿಕಾದ ಸುಂಕದ ನಿರ್ಧಾರ, ಆಗಸ್ಟ್ ಏಳರಿಂದ ಅನ್ವಯವಾಗುವಂತೆ ಜಾರಿಗೆ ಬರಲಿದೆ. ರಷ್ಯಾ ಜೊತೆಗಿನ ವ್ಯವಹಾರವನ್ನು ಮುಂದುವರಿಸಿಕೊಂಡು ಹೋಗುವ ಭಾರತದ ನಿರ್ಧಾರದಿಂದಾಗಿ, ಇನ್ನಷ್ಟು ಹೆಚ್ಚುವರಿ ಸುಂಕವನ್ನು ವಿಧಿಸುವುದಾಗಿ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ. ಈ ಹಿನ್ನಲೆಯಲ್ಲಿ ರೆಪೊ ದರ ಶೇ. 5.5ರಲ್ಲಿ ಯಾವುದೇ ಬದಲಾವಣೆಯಿಲ್ಲ ಎಂದು ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ.

ರೆಪೊ ದರ

ವಾಣಿಜ್ಯ ಬ್ಯಾಂಕುಗಳು ರಿಸರ್ವ್ ಬ್ಯಾಂಕ್ ನಿಂದ ಹಣವನ್ನು ಪಡೆದಾಗ, ವಿಧಿಸುವ ಬಡ್ಡಿದರವನ್ನು ರೆಪೊದರ ಎಂದು ಕರೆಯಲಾಗುತ್ತದೆ. ಬ್ಯಾಂಕುಗಳು, ತಮ್ಮ ಹೆಚ್ಚುವರಿ ಹಣವನ್ನು ಠೇವಣಿ ಮಾಡಿದಾಗ ನೀಡುವ ಬಡ್ಡಿದರಕ್ಕೆ ರಿವರ್ಸ್ ರೆಪೊ ದರ ಎನ್ನಲಾಗುತ್ತದೆ.

## ಜನೌಷಧಿ ಕೇಂದ್ರ ಮುಚ್ಚಿಸಿಲ್ಲ, ಸರ್ಕಾರಿ ಆಸ್ಪತ್ರೆ ಆವರಣಗಳಲ್ಲಿ ಮಾತ್ರ ನಿರ್ಬಂಧಿಸಲು ನಿರ್ಧಾರ: ದಿನೇಶ್ ಗುಂಡೂರಾವ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.6: ರಾಜ್ಯದಲ್ಲಿ ಜನೌಷಧಿ ಕೇಂದ್ರಗಳನ್ನು ಮುಚ್ಚಿಸಿಲ್ಲ. ಸರ್ಕಾರಿ ಆಸ್ಪತ್ರೆ ಆವರಣಗಳಲ್ಲಿ ಮಾತ್ರ ನಿರ್ಬಂಧಿಸಲು ನಿರ್ಧರಿಸಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.



ಜನೌಷಧಿ ಕೇಂದ್ರಗಳನ್ನು ತೆರವುಗೊಳಿಸುವ ರಾಜ್ಯ ಸರ್ಕಾರದ ನಿರ್ಧಾರ ಕುರಿತು ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರಿಗೆ ಸ್ಪಷ್ಟನೆ ನೀಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಮಾತ್ರ ಜನೌಷಧಿ ಕೇಂದ್ರಗಳನ್ನ ನಿರ್ಬಂಧಿಸಲು ನಿರ್ಧರಿಸಲಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಜನಸಾಮಾನ್ಯರಿಗೆ ಉಚಿತ ಔಷಧಿಗಳನ್ನು ನಿರಾಕರಿಸುವ ಸಾಧ್ಯತೆಗಳನ್ನು ತಡೆಯುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ದೇಶದಲ್ಲಿಯೇ ಕರ್ನಾಟಕ ಜನೌಷಧಿ ಕೇಂದ್ರಗಳನ್ನು ಹೊಂದಿರುವ ರಾಜ್ಯಗಳಲ್ಲಿ ಅಗ್ರಸ್ಥಾನದಲ್ಲಿದೆ. ರಾಜ್ಯದಲ್ಲಿ 1,417 ಕ್ಕೂ ಹೆಚ್ಚು ಜನೌಷಧಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ದೇಶದಲ್ಲಿಯೇ ಅಗ್ರಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಔಷಧಿಗಳು ಲಭ್ಯವಾಗುವಂತೆ ಮಾಡುವ ನಿಮ್ಮ ಕಾಳಜಿಯನ್ನು ನಾನು ಶ್ಲಾಘಿಸುತ್ತೇನೆ. ಕರ್ನಾಟಕ ಸರ್ಕಾರವು ಎಲ್ಲಾ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಅಗತ್ಯ ಔಷಧಗಳ ಪಟ್ಟಿಯ ಪ್ರಕಾರ ಎಲ್ಲಾ ಅಗತ್ಯ ಔಷಧಿಗಳನ್ನು ಉಚಿತವಾಗಿ ಪೂರೈಸುತ್ತಿದೆ ಎಂಬುದನ್ನು ನಾನು ಗೌರವಪೂರ್ವಕವಾಗಿ ಸ್ಪಷ್ಟಪಡಿಸಲು ಬಯಸುತ್ತೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಸಾರ್ವಜನಿಕ ಆರೋಗ್ಯ ಸೇವೆಗಳನ್ನು ಸರಳಗೊಳಿಸಲು ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತವಾಗಿ ಸಿಗುವ ಔಷಧಿಗಳನ್ನು ನಿರಾಕರಿಸುವ ಯಾವುದೇ ಸಾಧ್ಯತೆಯನ್ನು ತಪ್ಪಿಸಲು, ರಾಜ್ಯ ಸರ್ಕಾರವು ಸರ್ಕಾರಿ ವೈದ್ಯರು ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಸುವ ಔಷಧಿಗಳಿಗೆ ಮಾತ್ರ ಪ್ರಿಸ್ಕ್ರಿಪ್ಷನ್‌ಗಳನ್ನು ಸೀಮಿತಗೊಳಿಸುವಂತೆ ನಿರ್ದೇಶಿಸಿದೆ. ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ರೋಗಿಗಳನ್ನು ಔಷಧಿಗಳನ್ನು ಖರೀದಿಸಲು ವಾಣಿಜ್ಯ ಮಳಿಗೆಗಳಿಗೆ ಕಳುಹಿಸುವ ಮತ್ತು ಅವರಿಗೆ ಉಚಿತವಾಗಿ ಪೂರೈಸಲಾಗುವ ಔಷಧಿಗಳನ್ನು ನಿರಾಕರಿಸುವ ಯಾವುದೇ ಸಾಧ್ಯತೆಗಳನ್ನು ತಡೆಯುವ ಉದ್ದೇಶದಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಔಷಧಾಲಯಗಳಿಂದ ಔಷಧಿಗಳನ್ನು ಖರೀದಿಸಲು ರೋಗಿಗಳು ಭರಿಸುವ ವೆಚ್ಚವನ್ನು ಕಡಿಮೆ ಮಾಡುವುದು ಸರ್ಕಾರದ ನಿರ್ಧಾರವಾಗಿದೆ. ಇದು ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಸೇವೆಗಳನ್ನು ಪಡೆಯುವ ಬಡ ಮತ್ತು ಹಿಂದುಳಿದ ರೋಗಿಗಳಿಗೆ ಅನುಕೂಲಕರವಾಗುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಆದೇಶವು ಸರ್ಕಾರಿ ಆಸ್ಪತ್ರೆಗಳ ಆವರಣಗಳ ಹೊರಗೆ ಜನೌಷಧಿ

(2ನೇ ಪುಟ ನೋಡಿ)

## ಬಿಜೆಪಿಯಿಂದ ಪ್ರಿಯಾಂಕಾ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.6: ಚೀನಾ ವಿಚಾರಕ್ಕೆ ಸಂಬಂಧಿಸಿದಂತೆ ರಾಹುಲ್ ಗಾಂಧಿ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದ ಸುಪ್ರೀಂ ಕೋರ್ಟ್ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ್ದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸುವುದಾಗಿ ಬಿಜೆಪಿ ಬುಧವಾರ ತಿಳಿಸಿದೆ.

ಪ್ರಿಯಾಂಕಾ ಗಾಂಧಿಯವರ ಸಾರ್ವಜನಿಕ ಹೇಳಿಕೆಯು ನ್ಯಾಯಾಂಗ ನಿಂದನೆಗೆ ಸಮಾನವಾಗಿದೆ ಎಂದು ಬಿಜೆಪಿ ಸಂಸದ ಮತ್ತು ಹಿರಿಯ ವಕೀಲ ಮನನ್ ಕುಮಾರ್ ಮಿಶ್ರಾ ಆರೋಪಿಸಿದ್ದಾರೆ.

ಮಿಶ್ರಾ, "ಅವರು ಮಾಧ್ಯಮಗಳ ಮುಂದೆ ಹಲವು ಹೇಳಿಕೆಗಳನ್ನು ನೀಡುವ ಮೂಲಕ ನ್ಯಾಯಾಂಗ ನಿಂದನೆ ಮಾಡಿದ್ದಾರೆ. ಇಂತಹ ಬೇಜವಾಬ್ದಾರಿ ಹೇಳಿಕೆ ನೀಡಿದ ಅವರ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಲಿದ್ದೇವೆ. ವಕೀಲರು ಅರ್ಜಿಯನ್ನು ಸಲ್ಲಿಸುತ್ತಾರೆ. ಈ ದೇಶದ ಜನ ಇಂತಹ ಬೇಜವಾಬ್ದಾರಿ ಹೇಳಿಕೆಗಳನ್ನು ಸಹಿಸುವುದಿಲ್ಲ" ಎಂದಿದ್ದಾರೆ.

ಚೀನಾ ಭಾರತದ ಭೂಮಿಯನ್ನು ಆಕ್ರಮಿಸಿಕೊಂಡಿದೆ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ರಾಹುಲ್ ಗಾಂಧಿ ಅವರನ್ನು ತರಾಟೆಗೆ ತೆಗೆದುಕೊಂಡಿತ್ತು ಮತ್ತು ನೀವು ನಿಜವಾದ ಭಾರತೀಯ ಆಗಿದ್ದರೆ ಈ ರೀತಿ ಹೇಳಿಕೆ ನೀಡುತ್ತಿರಲಿಲ್ಲ ಎಂದು ಹೇಳಿತ್ತು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದ ಪ್ರಿಯಾಂಕಾ ಗಾಂಧಿ, ಯಾರು ನಿಜವಾದ ಭಾರತೀಯ ಎಂದು ಸುಪ್ರೀಂಕೋರ್ಟ್ ನ್ಯಾಯಾಧೀಶರು ನಿರ್ಧರಿಸಲು ಸಾಧ್ಯವಿಲ್ಲ ಮತ್ತು ಇದು ಅವರ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದ್ದರು.

## ಉತ್ತರಾಖಂಡ ಮೇಘಸ್ಫೋಟ ಐವರ ಸಾವು ; 150 ಜನರ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ ಡೆಹ್ರಾಡೂನ್:ಅ.6: ಉತ್ತರಕಾಶಿಯ ಧರಾಲೀಯಲ್ಲಿ ಸಂಭವಿಸಿದ ಮೇಘಸ್ಫೋಟದಿಂದ ಪ್ರವಾಹದಲ್ಲಿ ಸಿಲುಕಿಕೊಂಡವರ ರಕ್ಷಣಾ ಕಾರ್ಯವನ್ನ ಭಾರತೀಯ ಸೇನೆ , ಐಟಿಬಿಪಿ ಹಾಗೂ ಎನ್‌ಡಿಆರ್‌ಎಫ್ ತಂಡಗಳು ಆರಂಭಿಸಿವೆ. ಭಾರೀ ಮಳೆಯ ನಡುವೆಯೂ 150 ಮಂದಿಯನ್ನ ರಕ್ಷಿಸಲಾಗಿದೆ. ಇನ್ನೂ 150ಕ್ಕೂ ಹೆಚ್ಚು ಮಂದಿಯನ್ನು ಪ್ರವಾಹಪೀಡಿತ ಸ್ಥಳದಿಂದ ರಕ್ಷಿಸಲಾಗಿದೆ.

ಅಲ್ಲದೇ ಪ್ರವಾಹದಿಂದಾಗಿ ಈವರೆಗೆ ಐವರು ಸಾವನ್ನಪ್ಪಿರುವುದು ದೃಢವಾಗಿದೆ. ಐವರ ಮೃತದೇಹಗಳನ್ನೂ ಹೊರತೆಗೆಯಲಾಗಿದೆ. ಕೇರಳದ 28 ಪ್ರವಾಸಿಗರೂ ಸೇರಿ 100ಕ್ಕೂ ಅಧಿಕ ಮಂದಿ ನಾಪತ್ತೆಯಾಗಿದ್ದಾರೆ. ನಾಪತ್ತೆಯಾದವರಿಗಾಗಿ ಹುಡುಕಾಟ ನಡೆಯುತ್ತಿದೆ. ವೈಮಾನಿಕ ಸಮೀಕ್ಷೆ ನಡೆಸಿದ ಸಿಎಂ

ಇನ್ನೂ ಮೇಘಸ್ಫೋಟದಿಂದ ಪ್ರವಾಹ ಸಂಭವಿಸಿದ ಸ್ಥಳವನ್ನ ಉತ್ತರಾಖಂಡ ಸಿಎಂ ಪುಷ್ಕರ್ ಸಿಂಗ್ ಧಾಮಿ ವೈಮಾನಿಕ ಸಮೀಕ್ಷೆ ನಡೆಸಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಕೂಡ ಹಂಚಿಕೊಂಡಿದ್ದು, ಸಮರೋಪಾದಿಯಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಗಳನ್ನ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಮಾಧ್ಯಮಗಳಿಗೆ ಸಲ್ಲುತ್ತದೆ: ಈಶ್ವರ ಖಂಡ್ರೆ

ಫ್ಯಾಕ್ಟ್ ಸರ್ಚ್ ಆಗಬೇಕು ಫೇಕ್ ನ್ಯೂಸ್ ಗಳು ಮಾಧ್ಯಮಕ್ಕೆ ವಿಷಯವಾಗಿ ಕಾರ್ಯ ಮಾಡುತ್ತದೆ. ಆದ್ದರಿಂದ ಮಾಧ್ಯಮ ಮಿತ್ರರು ಜವಾಬ್ದಾರಿ ಹೊತ್ತು ಸುದ್ದಿ ಬಿತ್ತರಿಸುವ ಕಾರ್ಯ ಮಾಡಬೇಕಾಗಿದೆ ಎಂದರು.

ಎಐ ಮಾರಕ ಅಲ್ಲ ಅದು ಪೂರಕವಾಗಿ ಕೆಲಸಮಾಡುತ್ತದೆ. ಪತ್ರಕರ್ತರು ಗುಂಪು ಗಳಾಗಿ ಒಡೆದು ಹೋಗಿದ್ದೇವೆ ನಾವುಗಳು ಒಗ್ಗೂಡುವ ಕಾರ್ಯವಾಗಬೇಕಾಗಿದೆ, ವೃತ್ತಿ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಕೆಲಸ ಆಗಬೇಕು. ತರಬೇತಿ ನೀಡುವ ಮೂಲಕ ಮಾಧ್ಯಮ ಅಕಾಡೆಮಿ ತರಬೇತಿ ಯೋಜನೆಗಳನ್ನು ರೂಪಿಸಿ ಕೌಶಲ್ಯ ಅಭಿವೃದ್ಧಿ ಮಾಡಲು ಪಣ ತೊಟ್ಟಿದೆ.

ಜರ್ನಲಿಸಂ ಅಂದ್ರೆ ಕೇವಲ ಅಂಕಣ ಬರೆಯುವುದು ಅಲ್ಲ ಅದು ಒಂದು ರೀತಿಯ ನಾಯಕತ್ವ, ಯುವ ಪತ್ರಕರ್ತರು ತರಬೇತಿ ಹೊಂದಿ ಕೌಶಲ್ಯ ಬೆಳೆಸಿಕೊಳ್ಳಬೇಕು, ಮಾಧ್ಯಮ ವೃತ್ತಿ ಶ್ರೇಷ್ಠ ವೃತ್ತಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿ.ಪಂ ಸಿಇಒ ಗಿರೀಶ್ ಬದೋಲೆ, ಗುರುದ್ವಾರಾ ಪ್ರಬಂಧಕಸಮಿತಿ ಅಧ್ಯಕ್ಷ ಡಾ.ಸರ್ದಾರ ಬಲಬೀರಸಿಂಗ್, ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಸಹನಾ, ಸದಸ್ಯರಾದ ರಶ್ಮಿ, ಅಬ್ಬಾಸ್ ಮುಲ್ಲಾ,ವಾರ್ತಾಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ, ಮಂಜುನಾಥ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಕಲ್ಯಾಣ ಕರ್ನಾಟಕದ ಭಾಗದ ಬೀದರ್, ಕಲಬುರಗಿ, ಯಾದಗಿರಿ,ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಸುಮಾರು 200 ಕ್ಕೂ ಅಧಿಕ ಪತ್ರಕರ್ತರು ತರಬೇತಿಯಲ್ಲಿ ಭಾಗವಹಿಸಿದ್ದರು.

## ಸಹಾನುಭೂತಿಯಿಂದ ಕಾಣಬೇಕು:ಸಿಎಂ

ಲಭ್ಯ:ಖಾಸಗಿ ಆಂಬ್ಯುಲೆನ್ಸ್ ಅವರ ದಂಧೆ ನಡೆಯುತ್ತಿದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಸರ್ಕಾರದ 108 ಆಂಬ್ಯುಲೆನ್ಸ್ ದೊರೆಯುತ್ತದೆ ಎಂದರು.

ದಿನಕ್ಕೆ 40 ಕ್ಕೂ ಹೆಚ್ಚು ಹೆರಿಗೆಗಳು :

ವಾಣಿ ವಿಲಾಸ ಆಸ್ಪತ್ರೆ ಹಾಗೂ ಟ್ರಾಮಾ ಸೆಂಟರ್ ಗೆ ಸಹ ಭೇಟಿ ನೀಡಿದ್ದು, ವಾಣಿ ವಿಳಾಸದಲ್ಲಿ ಒಂದು ದಿನಕ್ಕೆ 40 ಕ್ಕೂ ಹೆಚ್ಚು ಹೆರಿಗೆಗಳಾಗುತ್ತವೆ. ಬೇರೆ ಬೇರೆ ರಾಜ್ಯದ ಜನರು ಇಲ್ಲಿ ಚಿಕಿತ್ಸೆಗಾಗಿ ಬರುತ್ತಾರೆ. ಜನ ದಟ್ಟಣೆ ಹೆಚ್ಚಿರುವುದರಿಂದ ಆಸ್ಪತ್ರೆಯ ಹಾಸಿಗೆಗಳನ್ನು ಹೆಚ್ಚು ಮಾಡಬೇಕಿದೆ. ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಹಲವಾರು ರೋಗಿಗಳನ್ನು ಭೇಟಿ ಮಾಡಿ ಮಾತನಾಡಿಸಿದೆ. ಡಾಕ್ಟರ್ ಗಳು ಚೆನ್ನಾಗಿ ನೋಡಿಕೊಳ್ಳುತ್ತಿದ್ದಾರೆ, ಊಟ ಚೆನ್ನಾಗಿದೆ ಎಂದು ಹೇಳಿದರು. ಗ್ಯಾಸ್ಟ್ರೋ ಎಂಟ್ರಾಲಜಿ ವಿಭಾಗಕ್ಕೆ ಭೇಟಿ ನೀಡಿದ್ದೇನೆಂ ಅಂಗಾಂಗ ದಾನಕ್ಕೆ ಹೊರಗೆ 30 ರಿಂದ 40 ಲಕ್ಷ ವೆಚ್ಚವಾಗುತ್ತದೆ. ಇಲ್ಲಿ ಉಚಿತವಾಗಿ ಮಾಡಲಾಗುತ್ತದೆ ಎಂದರು.

300 ಹಾಸಿಗೆಗಳ ಆಸ್ಪತ್ರೆ: ಪ್ರಸ್ತಾವನೆಯನ್ನು ಪರಿಗಣಿಸಲಾಗುವುದು:

120 ಹಾಸಿಗೆಗಳ ಆಸ್ಪತ್ರೆಯನ್ನು 300 ಹಾಸಿಗೆಗಳಿಗೆ ಹೆಚ್ಚಿಸುವ ಬಗ್ಗೆ ಬೇಡಿಕೆಯಿದೆ. ಈ ಕುರಿತ ಪ್ರಸ್ತಾವನೆ ಸರ್ಕಾರದ ಮುಂದಿದ್ದು ಇದನ್ನು ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಆಸ್ಪತ್ರೆಯಲ್ಲಿ ಸಮಸ್ಯೆಗಳು ಕಂಡುಬರಲಿಲ್ಲವೇ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಜನರು ಸಮಸ್ಯೆಗಳನ್ನು ಹೇಳಲಿಲ್ಲ. ಕೆಲವರು ಆಸ್ಪತ್ರೆಗೆ ದಾಖಲಾಗಬೇಕೆಂದು ತಿಳಿಸಿದರು ಎಂದರು.

## ಮಾತ್ರ ನಿರ್ಬಂಧಿಸಲು ನಿರ್ಧಾರ: ದಿನೇಶ್ ಗುಂಡೂರಾವ್

ಕೇಂದ್ರಗಳ ಕಾರ್ಯನಿರ್ವಹಣೆಯನ್ನು ನಿರ್ಬಂಧಿಸುವುದಿಲ್ಲ. ರಾಜ್ಯದಲ್ಲಿ 1417 ಜನೌಷಧಿ ಕೇಂದ್ರಗಳಲ್ಲಿ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ 184 ಜನೌಷಧಿ ಕೇಂದ್ರಗಳಿವೆ. ಉಳಿದವು ಸರ್ಕಾರಿ ಆಸ್ಪತ್ರೆಗಳ ಆವರಣದ ಹೊರಗೆ ಕಾರ್ಯನಿರ್ವಹಿಸುತ್ತಿವೆ. ಮತ್ತು ನಾಗರಿಕರು ತಮ್ಮ ಆಯ್ಕೆಯಂತೆ ಖಾಸಗಿ ವಲಯದಲ್ಲಿ ಅವುಗಳನ್ನು ಪ್ರವೇಶಿಸಲು ಸ್ವತಂತ್ರರಾಗಿದ್ದಾರೆ. ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತದ ಮೂಲಕ ಎಲ್ಲಾ ಅಗತ್ಯ ಔಷಧಿಗಳನ್ನು ಸರ್ಕಾರಿ ಆಸ್ಪತ್ರೆಗಳಿಗೆ ನಿಯಮಿತವಾಗಿ ಪೂರೈಸಲಾಗುತ್ತಿದೆ. ಇದರ ಜೊತೆಗೆ, ಆಸ್ಪತ್ರೆಗಳಿಗೆ ಸಾಕಷ್ಟು ಅನುದಾನವನ್ನು ಒದಗಿಸಲಾಗಿದ್ದು, ಯಾವುದೇ ಔಷಧಿಗಳ ಕೊರತೆ ಉಂಟಾದಲ್ಲಿ ಆ ಅನುದಾನವನ್ನು ಸ್ಥಳೀಯವಾಗಿ ಔಷಧಿಗಳನ್ನು ಖರೀದಿಸಲು ಬಳಸಿಕೊಳ್ಳುವಂತೆ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಸರ್ಕಾರಿ ಸೌಲಭ್ಯಗಳಿಗೆ ಭೇಟಿ ನೀಡುವ ರೋಗಿಗಳಿಗೆ ಅಗತ್ಯ ಔಷಧಿಗಳು ಸಂಪೂರ್ಣವಾಗಿ ಉಚಿತವಾಗಿ ಲಭ್ಯವಾಗುವಂತೆ ಮಾಡುವುದು ಈ ಪ್ರಯತ್ನದ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಗೌರವಾನ್ವಿತ ದೆಹಲಿ ಹೈಕೋರ್ಟ್‌ನ ಫ.ಕ.ಅ 3903/2017 ರಲ್ಲಿ ಉಲ್ಲೇಖಿಸಲಾದ ನಿರ್ದೇಶನಗಳು ಉಓಅಖಿಆ ಮತ್ತು ಂಖಖಓಖ ನವದೆಹಲಿಗೆ ಸಂಬಂಧಿಸಿವೆ ಎಂದು ಸಹ ಗಮನಿಸಲಾಗಿದೆ. ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಪರಿಯೋಜನಾ ಯೋಜನೆಯ ಪ್ರಕಾರ, ಜನೌಷಧಿ ಔಷಧಿಗಳ ಬೆಲೆಗಳು ಮುಕ್ತ ಮಾರುಕಟ್ಟೆಯಲ್ಲಿ ಲಭ್ಯವಿರುವ ಬ್ರಾಂಡ್ ಔಷಧಿಗಳ ಬೆಲೆಗಳಿಗಿಂತ 50%–80% ಕಡಿಮೆ ಇವೆ. ಈ ಯೋಜನೆಯನ್ನು ಸೊಸೈಟೀಸ್ ರಿಜಿಸ್ಟ್ರೇಷನ್ ಆಕ್ಟ್ ಅಡಿಯಲ್ಲಿ ನೋಂದಾಯಿಸಲಾದ ಸಂಸ್ಥೆಯಾದ ಫಾರ್ಮಾ ಮತ್ತು ಮೆಡಿಕಲ್ ಬ್ಯೂರೋ ಆಫ್ ಇಂಡಿಯಾ (ಬ್ಯೂರೋ ಆಫ್ ಫಾರ್ಮಾ ಕಖಗ ಆಫ್ ಇಂಡಿಯಾ (ಃಕಕಖ)) ಕಾರ್ಯಗತಗೊಳಿಸುತ್ತಿದೆ ಎಂದು ತಿಳಿಸಿದ್ದಾರೆ.

ಈ ಔಷಧಿಗಳನ್ನು ಜನೌಷಧಿ ಕೇಂದ್ರಗಳಿಗೆ ಪೂರೈಸುವ ದರದಲ್ಲಿಯೇ ರಾಜ್ಯ ಆರೋಗ್ಯ ಇಲಾಖೆಗೆ ಪೂರೈಸುವಂತೆ ಅವರಿಗೆ ನಿರ್ದೇಶನ ನೀಡಬೇಕೆಂದು ಕೋರಲಾಗಿದೆ. ಇದು ಕರ್ನಾಟಕ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಔಷಧ ಪೂರೈಕೆಗೆ ಬಹಳಷ್ಟು ಸಹಾಯ ಮಾಡುತ್ತದೆ. ಕರ್ನಾಟಕದ ಎಲ್ಲಾ ನಾಗರಿಕರಿಗೆ ಕೈಗೆಟುಕುವ ಮತ್ತು ಗುಣಮಟ್ಟದ ಆರೋಗ್ಯ ಸೇವೆಗಳು ಲಭ್ಯವಾಗುವಂತೆ ಮಾಡಲು ನಾವು ಬದ್ಧರಾಗಿದ್ದೇವೆ. ಸಾರ್ವಜನಿಕ ವ್ಯವಸ್ಥೆಯಲ್ಲಿ ನಮ್ಮ ಪೂರೈಕೆ ಸರಪಳಿ, ಲಭ್ಯತೆ ಮತ್ತು ಔಷಧಿಗಳ ವೈಜ್ಞಾನಿಕ ಬಳಕೆಯನ್ನು ನಿರಂತರವಾಗಿ ಬಲಪಡಿಸುತ್ತಿದ್ದೇವೆ. ಸಾರ್ವಜನಿಕ ಆರೋಗ್ಯದ ಕುರಿತಾದ ನಿಮ್ಮ ಕಾಳಜಿಯನ್ನು ನಾವು ಸಂಪೂರ್ಣವಾಗಿ ಗೌರವಿಸುತ್ತೇವೆ. ಜನರ ಒಳಿತಿಗಾಗಿ ನಮ್ಮ ಸಮಾನ ಬದ್ಧತೆಯನ್ನು ಮತ್ತೆ ಸ್ಪಷ್ಟಪಡಿಸುತ್ತೇವೆ ಎಂದಿದ್ದಾರೆ.

## ಐವರ ಸಾವು ; 150 ಜನರ ರಕ್ಷಣೆ

ಕೈಗೊಳ್ಳಲಾಗುತ್ತಿದೆ. ಸಂತ್ರಸ್ತರಿಗೆ ತ್ವರಿತ ಸಹಾಯವನ್ನೂ ನೀಡುತ್ತಿದ್ದೇವೆ ಎಂದು ಪುಷ್ಕರ್ ಸಿಂಗ್ ಧಾಮಿ ತಿಳಿಸಿದ್ದಾರೆ. ಪ್ರಧಾನಿ ಮೋದಿ ಜೊತೆಗೆ ಮಾತುಕತೆ

ಈ ನಡುವೆ ಉತ್ತರಾಖಂಡ ಸಿಎಂ ಪುಷ್ಕರ್ ಸಿಂಗ್ ಧಾಮಿ ಜೊತೆಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದಾರೆ. ಧರಾಲಿ ಪ್ರದೇಶದಲ್ಲಿ ಇತ್ತೀಚೆಗೆ ಸಂಭವಿಸಿದ ವಿಪತ್ತು ಮತ್ತು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳ ಮಾಹಿತಿ ಪಡೆದಿದ್ದಾರೆ. ರಾಜ್ಯ ಸರ್ಕಾರವು ಸಂಪೂರ್ಣ ಸಿದ್ಧತೆಯೊಂದಿಗೆ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳಲ್ಲಿ ತೊಡಗಿಸಿಕೊಂಡಿದೆ, ನಿರಂತರ ಭಾರೀ ಮಳೆಯಿಂದಾಗಿ, ಕೆಲವು ಪ್ರದೇಶಗಳಲ್ಲಿ ತೊಂದರೆಗಳಿವೆ ಎಲ್ಲಾ ಸಂಬಂಧಪಟ್ಟ ಸಂಸ್ಥೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಇದರಿಂದ ಸಂತ್ರಸ್ತರಿಗೆ ತ್ವರಿತ ಸಹಾಯ ಸಿಗುತ್ತದೆ ಎಂದು ಮೋದಿ ಅವರಿಗೆ ಧಾಮಿ ಮಾಹಿತಿ ನೀಡಿದ್ದಾರೆ. ಈ ವೇಳೆ ಕೇಂದ್ರ ಸರ್ಕಾರದಿಂದ ಸಾಧ್ಯವಿರುವ ಎಲ್ಲಾ ಸಹಾಯವನ್ನು ಭರವಸೆ ನೀಡಿದ್ದಾರೆ.

ಉತ್ತರಾಖಂಡ ಬಿಜೆಪಿ ಸಂಸದರಿಂದ ಮೋದಿ ಭೇಟಿ

ಈ ಎಲ್ಲ ಬೆಳವಣಿಗೆಗಳ ನಡುವೆ ಉತ್ತರಾಖಂಡದ ಬಿಜೆಪಿ ಸಂಸದರನ್ನು ಭೇಟಿಯಾದ ಪ್ರಧಾನಿ ಮೋದಿ, ಉತ್ತರಕಾಶಿ ಉಂಟಾದ ಮೇಘಸ್ಫೋಟ ಘಟನೆ ಕುರಿತು ಚರ್ಚಿಸಿದ್ದಾರೆ. ಉತ್ತರಾಖಂಡದ ಸಂಸದರಾದ ಅಜಯ್ ಭಟ್, ಮಾಲಾ ರಾಜ್ಯ ಲಕ್ಷ್ಮಿ ಶಾ, ತ್ರಿವೇಂದ್ರ ಸಿಂಗ್ ರಾವತ್ ಮತ್ತು ಅನಿಲ್ ಬಲುನಿ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ.

100ಕ್ಕೂ ಅಧಿಕ ಮಂದಿ ಮಿಸ್ಸಿಂಗ್

ಇನ್ನೂ ಉತ್ತರಕಾಶಿ ಜಿಲ್ಲೆಯ ಧರಾಲಿ ಗ್ರಾಮ ನೈಸರ್ಗಿಕ ವಿಕೋಪಕ್ಕೆ ಸಿಲುಕಿದ್ದು, ಭಾರೀ ಮೇಘಸ್ಫೋಟದಿಂದ ವಿನಾಶವೇ ಸೃಷ್ಟಿಯಾಗಿದೆ. ಧರಾಲಿ ಗ್ರಾಮದ ಬಳಿಯಿರುವ ಖೀರ್ ಗಡ್ ಪ್ರದೇಶದಲ್ಲಿ ಪ್ರವಾಹದಿಂದಾಗಿ ಹಠಾತ್ ನೀರಿನ ಹರಿವು ಹೆಚ್ಚಾದ ಪರಿಣಾಮ ದಿಢೀರ್ ಪ್ರವಾಹ ಉಂಟಾಗಿದೆ. ನೋಡನೋಡುತ್ತಿದ್ದಂತೆ ನದಿಯಲ್ಲಿ ರೌದ್ರಾವತಾರ ತಾಳಿ ಹರಿದು ಬಂದ ಭಾರೀ ಪ್ರಮಾಣದ ಕಪ್ಪು ಬಣ್ಣದ ನೀರಿನಿಂದ 25ಕ್ಕೂ ಹೆಚ್ಚು ಹೋಟೆಲ್, ಹೋಂಸ್ಟೇಗಳು ಕೊಚ್ಚಿಹೋಗಿವೆ. ಘಟನೆಯಲ್ಲಿ ಸುಮಾರು ಹತ್ತು ಮಂದಿ ಮೃತಪಟ್ಟಿದ್ದು, ನೂರಕ್ಕೂ ಅಧಿಕ ಜನರು ಕಾಣೆಯಾಗಿದ್ದಾರೆ. ಈ ಪ್ರದೇಶಗಳಲ್ಲಿ ನಾಪತ್ತೆಯಾದವರ ರಕ್ಷಣಾ ಕಾರ್ಯ ಆರಂಭವಾಗಿದೆ. ಭಾರತೀಯ ಸೇನೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ರಾಜ್ಯ ವಿಪತ್ತು ನಿರ್ವಹಣಾ ಪಡೆ, ಐಟಿಬಿಪಿ ಮತ್ತು ಸ್ಥಳೀಯ ಆಡಳಿತದ ತಂಡಗಳು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿಕೊಂಡಿವೆ. ಇದುವರೆಗೆ 150 ಜನರನ್ನ ರಕ್ಷಿಸಲಾಗಿದೆ. ಸುಮಾರು 150 ಜನರನ್ನ ಸುರಕ್ಷಿತ ಸ್ಥಳಗಳಿಗೆ ಕರೆದೊಯ್ಯಲಾಗಿದೆ.

## ಸಾಲ ಬಾಧೆ: ರಟಕಲ್ ರೈತ ನೇಣಿಗೆ ಶರಣು



ಕಲಬುರಗಿ:ಅ.6: ಸಾಲ ಬಾಧೆಯಿಂದ ಬೇಸತ್ತು ರೈತನೋರ್ವ ತನ್ನ ಸ್ವಂತ ಹೊಲದಲ್ಲಿ ಬುಧವಾರ ಮಧ್ಯಾಹ್ನ ಮೂರು ಗಂಟೆಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡ ಕುರಿತು ವರದಿಯಾಗಿದೆ. ಮೃತನಿಗೆ ನಾಗಣ್ಣ ತಂದೆ ಚಂದ್ರಶೆಟ್ಟಿ (58) ಎಂದು ಗುರುತಿಸಲಾಗಿದೆ. ಮೃತ ರೈತ ಪತ್ನಿ ರೇಣುಕಾ, ಪುತ್ರರಾದ ರೇವಣಸಿದ್ದಪ್ಪ,ಅಭಿಷೇಕ್, ಪುತ್ರಿಯರಾದ ಚಂದ್ರಕಲಾ, ವಿಜಯಲಕ್ಷ್ಮೀ ಅವರನ್ನು ಬಿಟ್ಟು ಅಗಲಿದ್ದಾರೆ.ರೈತನು ತನ್ನ ಹೊಲದ ಸರ್ವೆ ನಂಬರ್ 186, 187, 188ಮತ್ತು 189ರಲ್ಲಿ ಒಟ್ಟು 39 ಎಕರೆ ಹೊಲದಲ್ಲಿ ತೊಗರಿ ಬಿತ್ತನೆ ಮಾಡಿದ್ದ.ರಟಕಲ್‌ನ ಕೃಷ್ಣಾ ಗ್ರಾಮೀಣ ಬ್ಯಾಂಕ್‌ನಲ್ಲಿ ಒಂದು ಲಕ್ಷ ರೂಗಳ ಬೆಳೆ ಸಾಲ ಪಡೆದಿದ್ದ.ಖಾಸಗಿಯಾಗಿ ಸುಮಾರು ಏಳು ಲಕ್ಷ ರೂ.ಗಳನ್ನು ಪಡೆದಿದ್ದ. ಈ ಕುರಿತು ರಟಕಲ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗೋವಿಂದರಾವ್ ಸಮಿತಿ ಮಲತಾಯಿ ಧೋರಣೆ ವಿರುದ್ಧ ದಿಟ್ಟ ಕ್ರಮಕ್ಕೆ ದಸ್ತಿ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಅ.6: ಕಲ್ಯಾಣ ಕರ್ನಾಟಕಕ್ಕೆಮಲತಾಯಿಧೋರಣೆ ಆಗದಂತೆ ಗೋವಿಂದರಾವ್ ಸಮಿತಿ ವರದಿ ದಿಟ್ಟತನದ ಧೋರಣೆ ಅನುಸರಿಸಬೇಕು ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಅಧ್ಯಕ್ಷ ಡಾ. ಲಕ್ಷ್ಮಣ್ ದಸ್ತಿ ಅವರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಅವರು,ನಂಜುಂಡಪ್ಪ ವರದಿ ಮಾನದಂಡದಂತೆ, ಪ್ರಸ್ತುತ ಕಾಲಘಟ್ಟಕ್ಕೆ ಅನುಗುಣವಾಗಿ ನೂತನವಾಗಿ ರಚನೆಯಾಗಿರುವ ಪ್ರೊ. ಎಂ. ಗೋವಿಂದರಾವ್ ನೇತೃತ್ವದ ಪ್ರಾದೇಶಿಕ ಅಸಮತೋಲನಾ ನಿವಾರಣೆ ಸಮಿತಿಯ ವರದಿಗೆ ಸರ್ಕಾರ ಬದ್ಧತೆ ಪ್ರದರ್ಶಿಸಬೇಕು. ಭವಿಷ್ಯದಲ್ಲಿ ನಂಜುಂಡಪ್ಪ ವರದಿ ಶಿಫಾರಸ್ಸುಗಳಿಗೆ ಗಾಳಿಗೆ ತೂರಿದಂತೆ ಗೋವಿಂದರಾವ್ ವರದಿಗೂ ಸಹ ಮಲತಾಯಿ ಧೋರಣೆ ಆಗದಂತೆ ವರದಿಯಲ್ಲಿ ಕಟ್ಟುನಿಟ್ಟಾದ ಎಚ್ಚರಿಕೆಗಳನ್ನು ಸರ್ಕಾರಕ್ಕೆ ನೀಡುವ ಮೂಲಕ ಕಾಲಮಿತಿಯಲ್ಲಿ ಕಲ್ಯಾಣ ಕರ್ನಾಟಕದ ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ಸ್ಪಷ್ಟ ನಿರ್ದೇಶನಗಳು ನೀಡಿ ಪಾಲಿಸುವಂತೆ ಹೊಸ ಆಯೋಗದ ವರದಿ ಸರಕಾರಕ್ಕೆ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

2002ರಲ್ಲಿ ಕರ್ನಾಟಕ ರಾಜ್ಯದ ಒಟ್ಟು 175 ತಾಲ್ಲೂಕುಗಳಲ್ಲಿ ಅತ್ಯಂತ ಹಿಂದುಳಿದ 39 ಅತೀ ಹಿಂದುಳಿದ 40, ಹಿಂದುಳಿದ 35 ತಾಲ್ಲೂಕುಗಳಲ್ಲಿ ಕಲ್ಯಾಣದ 31 ತಾಲ್ಲೂಕುಗಳಲ್ಲಿ 28 ತಾಲ್ಲೂಕುಗಳು ಅತ್ಯಂತ ಹಿಂದುಳಿದ, ಅತಿ ಹಿಂದುಳಿದ ಮತ್ತು ಹಿಂದುಳಿದ ಪಟ್ಟಿಗೆ ಸೇರಿದ್ದವು. ಕೇವಲ ಮೂರು ತಾಲ್ಲೂಕುಗಳು ಮಾತ್ರ ಮುಂದುವರೆದಿದ್ದವು. ಕಲ್ಯಾಣ ಕರ್ನಾಟಕದ ಹಿಂದುಳಿಯುವಿಕೆ ಹೋಗಲಾಡಿಸಲು ನಂಜುಂಡಪ್ಪ ವರದಿಯಲ್ಲಿ ಶಿಫಾರಸ್ಸು ಮಾಡಿದ್ದ ಯೋಜನೆಗಳನ್ನು ಬೇರೆ ಕಡೆಗೆ ಸ್ಥಳಾಂತರಿಸಿ ಮಲತಾಯಿ ಧೋರಣೆ ಮಾಡಲಾಗಿತ್ತು. ಪ್ರಸ್ತುತ ಗೋವಿಂದರಾವ್ ನೇತೃತ್ವದ ಪ್ರಾದೇಶಿಕ ಅಸಮತೋಲನೆ ನಿವಾರಣೆ ಸಮಿತಿ ವರದಿಗೆ ಸರ್ಕಾರ ಶಾಸನಬದ್ಧವಾಗಿ ಪರಿಗಣಿಸಿ ಕಲ್ಯಾಣ ಕರ್ನಾಟಕದ ಅಸಮತೋಲನೆ ನಿವಾರಣೆಗೆ ಕಾಲಮಿತಿಯ ಕ್ರಮ ಕೈಗೊಳ್ಳಲು ಬದ್ಧತೆ ಪ್ರದರ್ಶಿಸುವುದು ಅತಿ ಅವಶ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

2002ರ ನಂಜುಂಡಪ್ಪ ವರದಿಯ ಮಾನದಂಡದಂತೆ, ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ರಾಜ್ಯ ಸರ್ಕಾರದಿಂದ ಮತ್ತು ವಿಶೇಷ ಅಭಿವೃದ್ಧಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಕೈಗೊಂಡ ಅಭಿವೃದ್ಧಿಗಳು ನಿರೀಕ್ಷೆಗೆ ತಕ್ಕಂತೆ ಫಲಶೃತಿ ತಂದಿಲ್ಲ, ಇದಕ್ಕೆ ಮುಖ್ಯಕಾರಣ ಮಂಡಳಿಯಿಂದ ದೂರದೃಷ್ಟಿಕೋನದ 5 ಅಥವಾ 10 ವರ್ಷಗಳ ಗಡುವಿನ ಅಸಮತೋಲನೆ ನಿವಾರಣೆಗೆ ವೈಜ್ಞಾನಿಕ ಕ್ರಿಯಾ ಯೋಜನೆ ರಚಿಸದೇ ಇರುವುದು ಸ್ಪಷ್ಟವಾಗಿ ಕಂಡು ಬರುತ್ತದೆ. ಸರ್ಕಾರ ಗೋವಿಂದರಾವ ನೇತೃತ್ವದಲ್ಲಿ ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ರಚನೆ ಮಾಡಿರುವ ನೂತನ ಸಮಿತಿಗೆ ಸ್ವಾಗತಿಸುತ್ತದೆ ಎಂದು ಅವರು ಹೇಳಿದರು.

ನಗರ ಪ್ರದೇಶದ ಸಮಸ್ಯೆಗಳು ಮತ್ತು ಗ್ರಾಮೀಣ ಪ್ರದೇಶದ ಸಮಸ್ಯೆಗಳಲ್ಲಿ ಬಹಳ ವ್ಯತ್ಯಾಸಗಳಿರುವುದರಿಂದ ಈ ಬಗ್ಗೆ ಗಂಭೀರವಾಗಿ ಪರಿಗಣಿಸಿ, ತಾಲ್ಲೂಕಾ ಘಟಕ ಮಾಡಿಕೊಂಡರೂ, ಸಮತೋಲನ ಅಭಿವೃದ್ಧಿಗೆ ನಿಗಾವಹಿಸುವಂತೆ, ಮೂಲಭೂತ ಸೌಕರ್ಯಗಳು, ಆರೋಗ್ಯ ಸೇವೆಗಳು, ಕೃಷಿ, ಕೈಗಾರಿಕೆ, ವ್ಯಾಪಾರ, ವಾಣಿಜ್ಯ, ಅರಣ್ಯ ಸಂಪತ್ತು, ನೀರಾವರಿ, ಸಾಮಾಜಿಕ ಸೌಕರ್ಯಗಳು, ರಸ್ತೆಸಾರಿಗೆ, ಶಿಕ್ಷಣ, ಸಾಮಾಜಿಕ ಮೂಲ ಸೌಕರ್ಯಗಳು, ತಲಾ ಆದಾಯ, ಕೃಷಿ, ಕೃಷಿಯೇತರ, ಉದ್ಯೋಗ, ಭೂಪರಿಸರ, ಜನರ ಸಹಭಾಗಿತ್ವ, ಸಾಮಾಜಿಕ ಆರ್ಥಿಕ ನ್ಯಾಯ ಸೇರಿದಂತೆ ಪ್ರಸ್ತುತ ವಾಸ್ತವಿಕ ನೆಲೆಗಟ್ಟಿನ ಅಂಶಗಳನ್ನು ಸೂಚಕಗಳನ್ನಾಗಿ ಮಾಡಿಕೊಳ್ಳುವಂತೆ ಅವರು ಒತ್ತಾಯಿಸಿದರು. ನಂಜುಂಡಪ್ಪ ವರದಿಯಂತೆ ಅವಿಭಜಿತ ಕಲಬುರ್ಗಿ ಜಿಲ್ಲೆಯ 10 ತಾಲ್ಲೂಕುಗಳಲ್ಲಿ 9 ಅತ್ಯಂತ ಹಿಂದುಳಿದ, ಒಂದು ಹಿಂದುಳಿದ ಪಟ್ಟಿಗೆ ಸೇರಿತ್ತು. ಈಗ ಕಲಬುರ್ಗಿ ಮತ್ತು ಯಾದಗಿರ ಎರಡು ಜಿಲ್ಲೆಗಳದರೂ ಸಹ ಹೊಸ ತಾಲ್ಲೂಕುಗಳನ್ನೊಳಗೊಂಡಂತೆ, ಯಥಾ ಸ್ಥಿತಿ ಇರುವುದನ್ನು ಗಮನದಲ್ಲಿಟ್ಟುಕೊಂಡು ಕಲಬುರ್ಗಿ ಜಿಲ್ಲೆ ಸೇರಿದಂತೆ ಕಲ್ಯಾಣದ ಸಮಗ್ರ ಅಭಿವೃದ್ಧಿಗೆ ವೈಜ್ಞಾನಿಕ ಮಾನದಂಡದಂತೆ, ಸೂಚ್ಯಂಕಗಳನ್ನು ಪರಿಗಣಿಸುವುದು ಅವಶ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

371ನೇ(ಜೆ) ಕಲಂ ಅನುಷ್ಠಾನ ಆಶಯ ಸಂಪೂರ್ಣ ಈಡೇರಬೇಕು, ಭವಿಷ್ಯದಲ್ಲಿ ವಿಶಾಲಕರ್ನಾಟಕದಲ್ಲಿ ಅಭಿವೃದ್ಧಿ ವಿಷಯಕ್ಕೆ ಸಂಬಂಧಿಸಿ ನಿರ್ಲಕ್ಷತನದಿಂದ ಪ್ರತ್ಯೇಕತೆ ಕೂಗು ಬರದಂತೆ ಸಮಗ್ರ ಸಮತೋಲನ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಒತ್ತಾಯಿಸಿದ ಅವರು, ಕೇಂದ್ರ ಸರ್ಕಾರದಿಂದ ಸರೀನ್ ಕಮಿಟಿಯ ಶಿಫಾರಸ್ಸಿನಂತೆ ರೈಲ್ವೆ ವಿಭಾಗೀಯ ಕಚೇರಿ ಕಲಬುರ್ಗಿಯಲ್ಲಿ ಸ್ಥಾಪನೆ, ಹಿಂದುಳಿದ ಕಲ್ಯಾಣ ಕರ್ನಾಟಕದಲ್ಲಿ ಏಮ್ಸ್ ಮತ್ತು ಐಐಟಿ. ಸ್ಥಾಪನೆ, ಕಾಲಮಿತಿಯ ಅಭಿವೃದ್ಧಿಗೆ ಕೇಂದ್ರದಿಂದ ವಿಶೇಷ ಪ್ಯಾಕೇಜ್ ಹಣ ನೀಡಬೇಕು, ಬೀದರ, ಬಳ್ಳಾರಿ ರಾಷ್ಟ್ರೀಯ ಹೆದ್ದಾರಿಗಳು ಮತ್ತು ಕಲ್ಯಾಣ ಪಥ ರಸ್ತೆಗಳು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ನಿರ್ದೇಶನ ನೀಡಬೇಕು. ಕೃಷ್ಣಾಯೋಜನೆಯು ರಾಷ್ಟ್ರೀಯ ಯೋಜನೆಯಾಗಿ ಪರಿಗಣಿಸಬೇಕು. ಕಲಬುರಗಿ ಸೇರಿದಂತೆ, ಕಲ್ಯಾಣ ಕರ್ನಾಟಕದಲ್ಲಿ ಕೈಗಾರಿಕೆಗಳ ಸ್ಥಾಪನೆ ಮಾಡಬೇಕು ಎಂದು ಆಗ್ರಹಿಸಿದರು. ಕೇಂದ್ರ ಸರ್ಕಾರ ವಿಶೇಷ ಸ್ಥಾನಮಾನ ಪಡೆದಿರುವ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಯೋಜನೆಗಳಡಿ ಸೇರ್ಪಡೆ ಮಾಡಿ, ಕೃಷಿ, ಕೃಷಿಯೇತರದಲ್ಲಿ ಉದ್ಯೋಗ ಸೃಷ್ಟಿ ಮತ್ತು ಬೃಹತ್ ಯೋಜನೆಗಳು ಕಲ್ಯಾಣಕ್ಕೆ ಮಂಜೂರು ಮಾಡಬೇಕು.

## ಬಿಎಸ್ಸಿ ಪದವೀಧರೆ ನಾಪತ್ತೆ: ಲವ್ ಜಿಹಾದ್ ಆರೋಪ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಆ.6: ಕಳೆದ ಜುಲೈ 30ರಂದು ನಗರದಲ್ಲಿ ಅಫಜಲಪುರ ತಾಲ್ಲೂಕಿನ ಗೊಬ್ಬೂರ್ ಗ್ರಾಮದ ಜೈನ ಸಮುದಾಯದ ಬಿಎಸ್ಸಿ ಪದವೀಧರೆ ನಾಪತ್ತೆಯಾಗಿದ್ದ ಪ್ರಕರಣದಲ್ಲಿ ಲವ್ ಜಿಹಾದ್ ಆರೋಪ ಕೇಳಿ ಬಂದಿದೆ. ಆ ಹಿನ್ನೆಲೆಯಲ್ಲಿ ಹಿಂದೂ ಸಂಘಟನೆಗಳಿಂದ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಅಫಜಲಪುರ ತಾಲ್ಲೂಕಿನ ಗೊಬ್ಬುರ ಗ್ರಾಮದ ಮಹಾವೀರ ಜೈನ್ ಎಂಬುವರ ಪುತ್ರಿ ಪಲ್ಲವಿ (20) ನಾಪತ್ತೆಯಾಗಿದ್ದಾರೆ. ವಿದ್ಯಾರ್ಥಿನಿ ನಗರದ ಕೋಹಿನೂರ್ ಪದವಿ ಕಾಲೇಜಿನಲ್ಲಿ ಬಿಎಸ್ಸಿ ಮೂರನೇ ಸೆಮ್‌ನಲ್ಲಿ ವ್ಯಾಸಂಗ ಮಾಡುತ್ತಿದ್ದಳು. ಕಳೆದ ಜುಲೈ 30ರಂದು ಬಿಎಸ್ಸಿ ಪರೀಕ್ಷೆ ಬರೆಯಲು ಕಾಲೇಜಿಗೆ ಬಂದಿದ್ದ ಯುವತಿ ಮನೆಗೆ ಹಿಂದಿರುಗದೇ ನಾಪತ್ತೆಯಾಗಿದ್ದಾಳೆ ಎಂದು ವರದಿಯಾಗಿತ್ತು. ನಾಪತ್ತೆಯಾಗಿರುವ ಯುವತಿ ಗೊಬ್ಬೂರ್ ಗ್ರಾಮದ ಮಶಾಕ್ ಎಂಬಾತನೊಂದಿಗೆ ಮೆಸೇಜ್ ಮಾಡ್ತಿದ್ದಳು ಎನ್ನಲಾಗಿದೆ. ಅನ್ಯಕೋಮಿನ ಯುವಕನೊಂದಿಗೆ ಮೆಸೇಜ್ ಮಾಡ್ತಿದ್ದಕ್ಕೆ ಮಗಳಿಗೆ ಬೈದು ಕಾಲೇಜು ಬಿಡಿಸಿ, ಪರೀಕ್ಷೆ ಬರೆಯೋದಕ್ಕೆ ಮಾತ್ರ ಪೋಷಕರು ಕಳುಹಿಸಿದ್ದರು. ಈಗ ಯುವತಿ ಅದೇ ಗ್ರಾಮದ ಅನ್ಯಕೋಮಿನ ಯುವಕನ ಜೊತೆ ಪರಾರಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಲವ್ ಜಿಹಾದ್ ಆರೋಪ ಕೇಳಿ ಬಂದಿದೆ. ಪರೀಕ್ಷೆ ಬರೆಯಲು ಮನೆಯವರು ವಿದ್ಯಾರ್ಥಿನಿಯ ದೊಡ್ಡಪ್ಪನ ಪುತ್ರ ಪ್ರಮೋದ್ ಹಾಗೂ ತಂಗಿ ಸನ್ಮತಿ ಜೊತೆಗೆ ಕಳೆದ ಕಳೆದ 29ರಂದು ಬೆಳಿಗ್ಗೆ ಪರೀಕ್ಷೆ ಬರೆಯಲು ಬಂದಿದ್ದು, ಪರೀಕ್ಷೆಯ ಸಂದರ್ಭದಲ್ಲಿ ಸನ್ಮತಿ ಮತ್ತು ಪ್ರಮೋದ್ ಅವರಿಬ್ಬರೂ ಸಾಯಿ ಮಂದಿರದಲ್ಲಿ ಕುಳಿತಿದ್ದು, ಸಂಜೆ 4ಕ್ಕೆ ಕೋಹಿನೂರ್ ಕಾಲೇಜಿಗೆ ಹೋದಾಗ ಪಲ್ಲವಿ ಇರಲಿಲ್ಲ. ಪ್ರಿನ್ಸಿಪಾಲರನ್ನು ಕೇಳಿದಾಗ 4ಕ್ಕಿಂತ ಮುಂಚೆಯೇ ಪೇಪರ್ ಕೊಟ್ಟು ಹೋಗಿದ್ದಾಳೆ ಎಂದು ತಿಳಿಸಿದರು. ಎಲ್ಲ ಕಡೆಗೆ ಹುಡುಕಾಡಿದರೂ ಸಹ ಯುವತಿ ಪತ್ತೆಯಾಗಲಿಲ್ಲ. ಈ ಕುರಿತು ಯುವತಿಯ ತಂದೆ ಮಹಾವೀರ ಶಾಂತಪ್ಪ ಬಸ್ಮೆ ಅವರು ದೂರು ಸಲ್ಲಿಸಿದ್ದು ವಿಶ್ವವಿದ್ಯಾಲಯ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯುವತಿ ನಾಪತ್ತೆಯಾದ ದಿನದಂದೇ ಮಶಾಕ್ ಸಹ ನಾಪತ್ತೆಯಾಗಿದ್ದಾನೆನ್ನಲಾಗಿದೆ. ಯುವತಿಯ ಮೊಬೈಲ್ ಹಾಗೂ ಮಶಾಕ್ ಮೊಬೈಲ್ ಸ್ವಿಚ್ಡ್ ಆಫ್ ಆಗಿದ್ದು, ಆತನೇ ಅಪಹರಿಸಿಕೊಂಡು ಹೋಗಿರುವ ಶಂಕೆಯನ್ನು ಮನೆಯವರು ವ್ಯಕ್ತಪಡಿಸಿದ್ದಾರೆ.

## ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಹಿರೋಷಿಮಾ ದಿನ ಆಚರಣೆ




ಕಲಬುರಗಿ,ಆ.06– ಕಲಬುರಗಿ ನಗರದ ಸಾರ್ವಜನಿಕ ಉದ್ಯಾನವನದಲ್ಲಿರುವ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಬುಧವಾರ ಹಿರೋಷಿಮಾ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ಮಹಾಗಾಂವ ಕ್ರಾಸ್‌ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಡಾ. ಚಿವುಕುಲ್ ಶ್ರೀಕಾಂತ ಅವರು, ಹಿರೋಷಿಮಾ ಡೇ ಹಾಗೂ ನ್ಯೂಕ್ಲಿಯರ್ ಎನರ್ಜಿ ಕುರಿತು ವಿದ್ಯಾರ್ಥಿಗಳಿಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಹಮ್ಮಿಕೊಂಡ ಓಪನ್ ಹೌಸ್ ಕ್ವಿಜ್‌ದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನ ಪಡೆದರು. ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ಶಿಕ್ಷಣಾಧಿಕಾರಿ ಪೊನ್ನರಸನ್ ಸ್ವಾಗತಿಸಿದರು. ಸಚಿನಕಂಟೆಗೋಳ ಕಾರ್ಯಕ್ರಮ ನಿರೂಪಿಸಿದರು.

## ಅಗ್ನಿವೀರ ಸೇನಾ ನೇಮಕಾತಿ ರ್‍ಯಾಲಿ: ವಸತಿ ವ್ಯವಸ್ಥೆಗೆ ಸ್ಥಾನಿಕ ವೀಕ್ಷಕರ ನೇಮಕ

ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಆ 06 : ಇಲ್ಲಿನ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಆಗಸ್ಟ್ 08ರಿಂದ ಆಗಸ್ಟ್ 26ರವರೆಗೆ ನಡೆಯುವ ಅಗ್ನಿವೀರ್ ಸೇನಾ ರ್‍ಯಾಲಿಗೆ ಸ್ಥಾನಿಕ ವೀಕ್ಷಕರನ್ನು ನೇಮಿಸಲಾಗಿದೆ.

ಈ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುವ ರಾಜ್ಯದ ವಿವಿಧ ಜಿಲ್ಲೆಯ ಅಭ್ಯರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸೂಚನೆ ನೀಡಿದ್ದರಿಂದಾಗಿ ಈ ಅಭ್ಯರ್ಥಿಗಳಿಗೆ ಸಂತೋಷ ಹಬ್‌ನಲ್ಲಿ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಗಾಂಧೀ ವೃತ್ತದಲ್ಲಿರುವ ಸಂತೋಷ ಹಬ್‌ನಲ್ಲಿ ಅಭ್ಯರ್ಥಿಗಳಿಗೆ ವಸತಿ ವ್ಯವಸ್ಥೆಯನ್ನು ಒದಗಿಸಿದ ಬಗ್ಗೆ ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಮತ್ತು ಸಾರಿಗೆ ಇಲಾಖೆ ಇವರೊಂದಿಗೆ ಸಮನ್ವಯ ಸಾಧಿಸಿ ಅಭ್ಯರ್ಥಿಗಳಿಗೆ ಮಾರ್ಗದರ್ಶನ ನೀಡಲು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು, ತಮ್ಮ ಇಲಾಖೆಯ ವಿವಿಧ ವಸತಿ ನಿಲಯಗಳ ನಿಲಯಪಾಲಕರಿಗೆ ಸ್ಥಾನಿಕ ವೀಕ್ಷಕರನ್ನಾಗಿ ನೇಮಿಸಿದ್ದಾರೆ.

ಸ್ಥಾನಿಕ ವೀಕ್ಷಕರ ವಿವರ: ಆಗಸ್ಟ್ 7 ರಿಂದ 8ರವರೆಗೆ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ (ಉನ್ನತೀಕರಿಸಿದ) ಬಾಲಕರ ವಸತಿ ನಿಲಯದ ನಿಲಯಪಾಲಕರಾದ ಶಾಮಣ್ಣ ದೂರವಾಣಿಸಂಖ್ಯೆ:9741199211, ಆಗಸ್ಟ್ 10 ರಿಂದ 12ರವರೆಗೆ ರಾಯಚೂರಿನ ಜಹೀರಾಬಾದ್ ಅಲ್ಪಸಂಖ್ಯಾತರ ಮೆಟ್ರಿಕ್‌ನಂತರದ ಬಾಲಕರ ವಸತಿ ನಿಲಯದ ನಿಲಯಪಾಲಕರಾದ ರವಿ ಮೊಬೈಲ್‌ಸಂಖ್ಯೆ:9845763768, ಆಗಸ್ಟ್ 13 ರಿಂದ 15ವರೆಗೆ ಬೋಳಮಾನದೊಡ್ಡಿ ರಸ್ತೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನಿಲಯಪಾಲಕರಾದ ರೇವಣ್ಣ ಸಿದ್ದಪ್ಪ ಮೊಬೈಲ್ ಸಂಖ್ಯೆ 8904118926, ಆಗಸ್ಟ್ 16ರಿಂದ 18ವರೆಗೆ ರಾಯಚೂರಿನ ಡಾ.ಎಪಿಜೆ ಅಬ್ದುಲ್ ವಸತಿ ಶಾಲೆಯ ನಿಲಯಪಾಲಕರಾದ ಆದೇಶ ಮೊಬೈಲ್ ಸಂಖ್ಯೆ: 9964757896, ಆಗಸ್ಟ್ 19ರಿಂದ 21ವರೆಗೆ ಗಿಲ್ಲೇಸೂಗೂರು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನಿಲಯಪಾಲಕರಾದ ವಿಶ್ವನಾಥ ಮೊಬೈಲ್‌ಸಂಖ್ಯೆ:9916679390, ಆಗಸ್ಟ್ 22ರಿಂದ 23ವರೆಗೆ ಯರಮರಸ್ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನಿಲಯಪಾಲಕರಾದ ಗಂಗಣ್ಣ ಮೊಬೈಲ್ ಸಂಖ್ಯೆ: 9900494048, ಆಗಸ್ಟ್ 24ರಿಂದ 25ವರೆಗೆ ಸಿಂಧನೂರಿನ ಅಲ್ಪಸಂಖ್ಯಾತರ ಮೆಟ್ರಿಕ್‌ನಂತರದ ಬಾಲಕರ ವಸತಿ ನಿಲಯದ ನಿಲಯಪಾಲಕರಾದ ಚನ್ನರೆಡ್ಡಿ ಮೊಬೈಲ್‌ಸಂಖ್ಯೆ:9108296944, ಆಗಸ್ಟ್ 26ರಂದು ಮಾನವಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಹೆಚ್ಚುವರಿ ನಿಲಯಪಾಲಕರಾದ ರಮೇಶ ಮೊಬೈಲ್ ಸಂಖ್ಯೆ: 9632779401 ಇವರು ಸ್ಥಾನಿಕ ವೀಕ್ಷಕರಾಗಿದ್ದಾರೆ. ಈ ಸಿಬ್ಬಂದಿಯು ಸೂಚಿಸಿದ ದಿನಾಂಕದಂದು ಜಿಲ್ಲಾ ಕಚೇರಿಯಿಂದ ರಜಿಸ್ಟರ್ ಪಡೆದು ಅಭ್ಯರ್ಥಿಗಳ ನೋಂದಣಿ ಕಾರ್ಯ ಮಾಡಬೇಕು. ಈ ಕುರಿತು ಒಂದು ಕೌಂಟರ್ ಸ್ಥಳ ನಿಗದಿಪಡಿಸಲಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕರಾದ ಬಸನಗೌಡ ದದ್ದಲ್ ಗ್ರಾಮೀಣ ಪ್ರದೇಶದಲ್ಲಿ ಸಂಚಾರ; ಏತ ನೀರಾವರಿ ಕಾಮಗಾರಿ ವೀಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 06–: ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 6ರಂದು ರಾಯಚೂರ ಗ್ರಾಮೀಣ ಭಾಗದಲ್ಲಿ ಸಂಚಾರ ನಡೆಸಿದರು.



ಗುಂಜಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಶಾಸಕರು, 146 ಕೋಟಿ ರೂ ನಲ್ಲಿ ಗುಂಜಳ್ಳಿ ಬಸಪ್ಪ ಕೆರೆ ಹಾಗೂ ಸುತ್ತಲಿನ ಗ್ರಾಮಗಳ 9 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸುವ ಯೋಜನೆಯಾದ ಏತ ನೀರಾವರಿಯ ಕಾಮಗಾರಿ ವೀಕ್ಷಣೆ ನಡೆಸಿದರು.

ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ಚಿಕ್ಕಮಂಚಾಲಿ, ಬುಳ್ಳಪೂರ ಗ್ರಾಮದ ಹತ್ತಿರ ತುಂಗಭದ್ರಾ ನದಿ ತಟಕ್ಕೆ ಭೇಟಿ ನೀಡಿದ ಶಾಸಕರು, ಏತ ನೀರಾವರಿ ಕಾಮಗಾರಿಯ ಸಮಗ್ರ ವೀಕ್ಷಣೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಈ ವೇಳೆ ಶಾಸಕರು ಮಾತನಾಡಿ, ಈಗಾಗಲೇ ಕೃಷ್ಣನದಿಯಿಂದ ಬಂಗಾರಪ್ಪ ಕೆರೆ ತುಂಬಿಸುವ ಯೋಜನೆಯಿಂದಾಗಿ ರೈತರ ಹೊಲಗಳಿಗೆ, ಕೆರೆಗಳಿಗೆ ಹಾಗೂ ಕುಡಿವ ನೀರಿಗೆ ಅನುಕೂಲ ಮಾಡಲಾಗಿದೆ. ಅದೇ ರೀತಿಯಾಗಿ ತುಂಗಭದ್ರಾ ನದಿಯಿಂದ ಗುಂಜಳ್ಳಿ ಬಸಪ್ಪ ಕೆರೆ ಹಾಗೂ ಸುತ್ತಲಿನ 9 ಗ್ರಾಮಗಳಾದ ಗುಂಜಳ್ಳಿ ಕೆರೆ, ಗೋಡಿಹಾಳ್ ಕೆರೆ, ಯರಗೇರಾ1 ಕೆರೆ, ಯರಗೇರಾ2 ಕೆರೆ, ಕೆರೆಬೂದುರ ಕೆರೆ, ಕಮಲಾಪೂರ ಕೆರೆ, ಮಂಜರ್ಲಾ, ಗಧಾರ ಕೆರೆ, ಮಿಡಗಲದಿನ್ನಿ ಕೆರೆಗಳನ್ನು ತುಂಬಿಸುವ ಈ ಯೋಜನೆ ಯಶ ಕಂಡಲ್ಲಿ ಅಂತರ್ಜಲ ಮಟ್ಟ ಉತ್ತಮವಾಗಿ ಕುಡಿಯುವ ನೀರು ಹಾಗೂ ರೈತರ ಹೊಲಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು. ರಾಯಚೂರ ಗ್ರಾಮೀಣ ಕ್ಷೇತ್ರದ ಎಲ್ಲ ಪ್ರದೇಶವನ್ನು ಸಂಪೂರ್ಣ ನೀರಾವರಿ ಮಾಡುವುದು ತಮ್ಮ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ ಶಾಸಕರು, ಈ ನಿಟ್ಟಿನಲ್ಲಿ ಈ ಭಾಗದಲ್ಲಿ ಬೇರೆ ಬೇರೆ ನೀರಾವರಿ ಯೋಜನೆಗಳನ್ನು ಅನುಷ್ಠಾನ ಮಾಡಲು ನಾನಾ ಯೋಜನೆಗಳಿಗೆ ಡಿಪಿಆರ್ ಗೆ ಕಳುಹಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಿಲ್ಲೇಸೂಗುರ ಬ್ಲಾಕ್ ಅಧ್ಯಕ್ಷರು, ಚಿಕ್ಕಮಂಚಾಲಿ, ಬುಳ್ಳಪೂರ, ಗುಂಜಳ್ಳಿ ಸೇರಿದಂತೆ ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ಗ್ರಾಮಸ್ಥರು, ನಾಮನಿರ್ದೇಶಿತ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಶಾಸಕರಾದ ಬಸನಗೌಡ ದದ್ದಲ್ ಗ್ರಾಮೀಣ ಪ್ರದೇಶದಲ್ಲಿ ಸಂಚಾರ; ಏತ ನೀರಾವರಿ ಕಾಮಗಾರಿ ವೀಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 06: ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 6ರಂದು ರಾಯಚೂರ ಗ್ರಾಮೀಣ ಭಾಗದಲ್ಲಿ ಸಂಚಾರ ನಡೆಸಿದರು.

ಗುಂಜಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಶಾಸಕರು, 146 ಕೋಟಿ ರೂ ನಲ್ಲಿ ಗುಂಜಳ್ಳಿ ಬಸಪ್ಪ ಕೆರೆ ಹಾಗೂ ಸುತ್ತಲಿನ ಗ್ರಾಮಗಳ 9 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸುವ ಯೋಜನೆಯಾದ ಏತ ನೀರಾವರಿಯ ಕಾಮಗಾರಿ ವೀಕ್ಷಣೆ ನಡೆಸಿದರು.

ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ಚಿಕ್ಕಮಂಚಾಲಿ, ಬುಳ್ಳಪೂರ ಗ್ರಾಮದ ಹತ್ತಿರ ತುಂಗಭದ್ರಾ ನದಿ ತಟಕ್ಕೆ ಭೇಟಿ ನೀಡಿದ ಶಾಸಕರು, ಏತ ನೀರಾವರಿ ಕಾಮಗಾರಿಯ ಸಮಗ್ರ ವೀಕ್ಷಣೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಈ ವೇಳೆ ಶಾಸಕರು ಮಾತನಾಡಿ, ಈಗಾಗಲೇ ಕೃಷ್ಣನದಿಯಿಂದ ಬಂಗಾರಪ್ಪ ಕೆರೆ ತುಂಬಿಸುವ ಯೋಜನೆಯಿಂದಾಗಿ ರೈತರ ಹೊಲಗಳಿಗೆ, ಕೆರೆಗಳಿಗೆ ಹಾಗೂ ಕುಡಿವ ನೀರಿಗೆ ಅನುಕೂಲ ಮಾಡಲಾಗಿದೆ. ಅದೇ ರೀತಿಯಾಗಿ ತುಂಗಭದ್ರಾ ನದಿಯಿಂದ ಗುಂಜಳ್ಳಿ ಬಸಪ್ಪ ಕೆರೆ ಹಾಗೂ ಸುತ್ತಲಿನ 9 ಗ್ರಾಮಗಳಾದ ಗುಂಜಳ್ಳಿ ಕೆರೆ, ಗೋಡಿಹಾಳ್ ಕೆರೆ, ಯರಗೇರಾ1 ಕೆರೆ, ಯರಗೇರಾ2 ಕೆರೆ, ಕೆರೆಬೂದುರ ಕೆರೆ, ಕಮಲಾಪೂರ ಕೆರೆ, ಮಂಜರ್ಲಾ, ಗಧಾರ ಕೆರೆ, ಮಿಡಗಲದಿನ್ನಿ ಕೆರೆಗಳನ್ನು ತುಂಬಿಸುವ ಈ ಯೋಜನೆ ಯಶ ಕಂಡಲ್ಲಿ ಅಂತರ್ಜಲ ಮಟ್ಟ ಉತ್ತಮವಾಗಿ ಕುಡಿಯುವ ನೀರು ಹಾಗೂ ರೈತರ ಹೊಲಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ರಾಯಚೂರ ಗ್ರಾಮೀಣ ಕ್ಷೇತ್ರದ ಎಲ್ಲ ಪ್ರದೇಶವನ್ನು ಸಂಪೂರ್ಣ ನೀರಾವರಿ ಮಾಡುವುದು ತಮ್ಮ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ ಶಾಸಕರು, ಈ ನಿಟ್ಟಿನಲ್ಲಿ ಈ ಭಾಗದಲ್ಲಿ ಬೇರೆ ಬೇರೆ ನೀರಾವರಿ ಯೋಜನೆಗಳನ್ನು ಅನುಷ್ಠಾನ ಮಾಡಲು ನಾನಾ ಯೋಜನೆಗಳಿಗೆ ಡಿಪಿಆರ್ ಗೆ ಕಳುಹಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಿಲ್ಲೇಸೂಗುರ ಬ್ಲಾಕ್ ಅಧ್ಯಕ್ಷರು, ಚಿಕ್ಕಮಂಚಾಲಿ, ಬುಳ್ಳಪೂರ, ಗುಂಜಳ್ಳಿ ಸೇರಿದಂತೆ ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ಗ್ರಾಮಸ್ಥರು, ನಾಮನಿರ್ದೇಶಿತ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಎದೆ ಹಾಲುಣಿಸಿದ ತಾಯಿ ದೇವರಿಗೆ ಸಮಾನ: ಡಾ.ಶಿವಶಂಕರ ಬಿ.

ಮಲ್ಲಮ್ಮ ನುಡಿ ವಾರ್ತೆ




ಬೀದರ: ಶಿಶುವಿನ ಬೆಳವಣಿಗೆಗೆ ತಾಯಿಯ ಎದೆಹಾಲು ಅಮೃತಕ್ಕೆ ಸಮಾನವಾದದು ಎಂದು ಬೀದರ ಆರ್.ಸಿ.ಹೆಚ್.ಅಧಿಕಾರಿ ಡಾ॥ ಶಿವಶಂಕರ.ಬಿ ರವರು ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರ ನೂರು ಹಾಸಿಗೆ ಆಸ್ಪತ್ರೆ ಬೀದರನಲ್ಲಿ "ವಿಶ್ವ ಸ್ತನ್ಯಪಾನ ದಿನ" ವನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ತಾಯಿ ಮಗುವಿನ ಸಂಬಂಧ ಗರ್ಭದಿಂದಲೇ ಆರಂಭವಾಗುತ್ತದೆ. ಎದೆಹಾಲುಣಿಸಿದ ತಾಯಿ ದೇವರಿಗೆ ಸಮಾನ. ತಾಯಿಗೆ ನಮ್ಮ ದೇಶದಲ್ಲಿ ದೈವಿಕ ಸ್ಥಾನಮಾನವಿದೆ. ಮಕ್ಕಳ ಆರೋಗ್ಯಕ್ಕೆ ತಾಯಿಯ ಎದೆಹಾಲು ಬಹಳ ಮುಖ್ಯವಾಗಿದೆ ಎಂದರು.


ದೇಶಾದ್ಯಂತ ಸ್ತನ್ಯಪಾನದ ಮಹತ್ವವನ್ನು ತಿಳಿಸಲು ಹಾಗೂ ಶಿಶುಗಳ ಮತ್ತು ತಾಯಂದಿರ ಆರೋಗ್ಯ ಸುಧಾರಣೆಗಾಗಿ ಸ್ತನ್ಯಪಾನವನ್ನು ಮುಂದುವರೆಸಲು, ಉತ್ತೇಜಿಸಲು ಮತ್ತು ಬೆಂಬಲಿಸಲು "ವಿಶ್ವ ಸ್ತನ್ಯಪಾನ ಸಪ್ತಾಹ" ವನ್ನು 2025 ಆಗಸ್ಟ್ 01 ರಿಂದ 07ನೇ ದಿನಾಂಕದವರೆಗೆ "ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ (Investinbreastfeeding, investinfuture)" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ "ವಿಶ್ವಸ್ತನ್ಯಪಾನಸಪ್ತಾಹ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಎಲ್ಲೆಡೆ ಜಾಗತಿಕ ಅಭಿಯಾನವಾಗಿ ಆಚರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಬೀದರ ಸ್ತ್ರೀರೋಗ ತಜ್ಞರಾದ ಡಾ॥ ಸರೋಜ ಪಾಟೀಲ ಮಾತನಾಡಿ, ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರ ನೂರು ಹಾಸಿಗೆ ಆಸ್ಪತ್ರೆ ಜಿಲ್ಲೆಯ ಎಲ್ಲಾ ಆರೋಗ್ಯ ಸಂಸ್ಥೆಯ ಅಂ–ದರೆ ಸಾರ್ವಜನಿಕ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಎಸ್.ಎನ್.ಸಿ.ಯು, ಎಸ್.ಬಿ.ಎಸ್.ಯು, ಎನ್.ಆರ್.ಸಿ, ಪಿ.ಎನ್.ಸಿ.ಯು, ಮಕ್ಕಳ ವಾರ್ಡ್ ಕಾರ್ಯತಂತ್ರದ ಸ್ಥಳಗಳಲ್ಲಿ ವಿಶೇಷವಾಗಿ ಸ್ತನ್ಯಪಾನಕ್ಕಾಗಿ ಒಂದು ಕೊಠಡಿ ಮೀಸಲಿದೆ ಎಂದರು.

ಬೀದರ ಮಕ್ಕಳ ತಜ್ಞರಾದ ಡಾ॥ ವರ್ಷಾ ತೊಂಡಾರೆ ಮಾತನಾಡಿ, ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರ ನೂರು ಹಾಸಿಗೆ ಆಸ್ಪತ್ರೆ ಬೀದರ ರವರು ಮಾತನಾಡಿ ಮಗು ಜನಿಸಿದ ಒಂದು ಗಂಟೆಯೊಳಗೆ ಸ್ತನ್ಯಪಾನ ಮಾಡಿಸುವುದು ಕೊಲೊಸ್ಟ್ರೋಮ್ ಸೇವನೆಯ ಪ್ರಾಮುಖ್ಯತೆ ಹಾಗೂ ಮೊದಲ ಆರು ತಿಂಗಳ ವರೆಗೆ ಕಡ್ಡಾಯ ಸ್ತನ್ಯಪಾನ ಮಾಡುವುದರಿಂದ ಆರಂಭಿಕ ಬಾಲ್ಯದ ಬೆಳವಣಿಗೆ ಹೆಚ್ಚಿಸಲು ಮತ್ತು ಪೌಷ್ಟಿಕಾಂಶವನ್ನು ಸುಧಾರಿಸಲು ಹಾಗೂ ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡಲು ಸ್ತನ್ಯಪಾನ ಮಾಡಿಸುವುದು ಬಹಳ ಮುಖ್ಯವಾಗಿರುತ್ತದೆ. ಎಲ್ಲರೂ ಎಚ್ಚೆತ್ತುಕೊಂಡು ಎದೆಹಾಲಿನ ಮಹತ್ವದ ಬಗ್ಗೆ ಅರಿತುಕೊಂಡು ಎಲ್ಲಾ ತಾಯಂದಿರು ಹಾಗೂ ಗರ್ಭಿಣಿಯರು ಕನಿಷ್ಟ ಎರಡು ವರ್ಷ ದವರೆಗೆ ಸ್ತನ್ಯಪಾನ ಮಾಡಿಸುವಂತೆ ಕೋರಲಾಗಿದೆ.

ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಶಿವಶಂಕರ ಬೇಮಳಗಿ ಮಾತನಾಡಿ, ಈ ಕಾರ್ಯಕ್ರಮದ ಸಪ್ತಾಹದ ಬಗ್ಗೆ ಎಲ್ಲಾ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಆರೋಗ್ಯ ಸಂಸ್ಥೆಗಳ ಉಪಕೇಂದ್ರಗಳ ಗುಂಪು ಸಭೆಗಳಲ್ಲಿ, ಗ್ರಾಮ ಆರೋಗ್ಯ & ನೈರ್ಮಲ್ಯ ಪೌಷ್ಠಿಕ ಸಮಿತಿ ಸಭೆಯಲ್ಲಿ ಸಭೆಗಳಲ್ಲಿ ಸ್ತನ್ಯಪಾನದ ಮಹತ್ವದ ಬಗ್ಗೆ ತಾಯಂದಿರು ಹಾಗೂ ಗರ್ಭಿಣಿಯರು ಮಾಹಿತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಾರ್ವಜನಿಕರಲ್ಲಿ ವಿನಂತಿಸಿದರು ಹಾಗೂ ಎಲ್ಲಾ ಗರ್ಭಿಣಿ ಮತ್ತು ಬಾಣಂತಿಯರಿಗೆ ಎದೆಹಾಲಿನ ಮಹತ್ವ ಕುರಿತು ಅರಿವು ಮೂಡಿಸಲಾಗುವುದು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಡಾ॥ ಗೌಸ್ ಪಾಶಾ ಮಕ್ಕಳ ತಜ್ಞರು, ಡಾ॥ ಪ್ರೀತಿ ಬಿರಾದರ ಸ್ತ್ರೀರೋಗ ತಜ್ಞರು, ಶ್ರೀಮತಿ. ಭಾಗ್ಯಲಕ್ಷ್ಮಿ ಪ್ರ.ಡಿ.ಎನ್.ಓ., ಶ್ರೀಮತಿ. ಸಂಗೀತಾ ಡಿ.ಸಿ.ಎಂ, ಶ್ರೀ. ರವಿ. ಡಿ.ಡಿ.ಎಂ, ಶ್ರೀಮತಿ. ಅನಿತಾ ಪಿ.ಹೆಚ್.ಸಿ.ಓ, ಶ್ರೀ. ಅವಿನಾಶ ಹೆಚ್.ಐ.ಓ, ರವರು ಉಪಸ್ಥಿತರಿದ್ದರು.



ಬಸವಕಲ್ಯಾಣ :– ಭಾಲ್ಕಿ ತಾಲೂಕಿನ ಭಾತಾಂಬ್ರಾ ಗ್ರಾಮದ ಶ್ರೀ ಹಾರಕೂಡ ಮಂಗಲ ಮಂಟಪದಲ್ಲಿ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಹಾರಕೂಡದ ಲಿಂ. ಚನ್ನಬಸವ ಶಿವಯೋಗಗಳ ಮೂರ್ತಿ ಅನಾವರಣ ಗೊಳಿಸಿದರು.

ಭತಾಂಬ್ರಾದ ಪೂಜ್ಯ ಶಿವಯೋಗಿ ಶ್ವರ ಮಹಾಸ್ವಾಮಿಗಳು, ಮಲ್ಲಿನಾಥ ಹಿರೇಮಠ ಹಾರಕೂಡ ಮಾಧುರಾವ ಗುಬ್ಬೆ, ಸಂಜುಕುಮಾರ ಪಾಟೀಲ, ಕಾಶಿನಾಥ ಲದ್ದೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಹುಚ್ಚು ನಾಯಿ ಕಡಿತ; ನಾಲ್ಕು ಮಕ್ಕಳಿಗೆ ಗಂಭೀರ ಗಾಯ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲ್ಲೂಕಿನ ಮನ್ನಾಎಖ್ಖೇಳ್ಳಿ ಗ್ರಾಮದಲ್ಲಿ ಹುಚ್ಚುನಾಯಿಯೊಂದು ನಾಲ್ಕು ಮಕ್ಕಳ ಮೇಲೆ ದಾಳಿ ನಡೆಸಿ ಗಂಭೀರ ಗಾಯಗೊಳಿಸಿದ ಘಟನೆ ಜರುಗಿದೆ. ಹುಚ್ಚು ನಾಯಿ ಕಡಿತದಿಂದ 4 ಮಕ್ಕಳಿಗೆ ತೀವ್ರವಾಗಿ ಗಾಯಗೊಂಡಿದ್ದ ಘಟನೆ ಬುಧವಾರ ಜರುಗಿದೆ. ಮಗುವಿನ ಚೀರಾಟ ಕೇಳಿದ ತಕ್ಷಣ ಅಕ್ಕ ಪಕ್ಕದವರು ಬಂದು ನಾಯಿಯನ್ನು ಹೊಡೆದೊಡಿಸಿದ್ದಾರೆ. ಇಲ್ಲದಿದ್ದರೆ ಬಾಲಕ ನಾಯಿಯ ದಾಳಿಗೆ ಬಲಿಯಾಗುತ್ತಿತ್ತು ಎಂದು ಜನರು ಮಾತನಾಡು ಕೊಳ್ಳುತ್ತಿದ್ದರು ಎನ್ನಲಾಗಿದೆ. ಗಾಯಗೊಂಡ ಮಕ್ಕಳಿಗೆ ಮನ್ನಾಖೇಳ್ಳಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಕಳುಹಿಸಲಾಗಿದೆ ಎಂದು ತಿಳಿದು ಬಂದಿದೆ.

ಹುಚ್ಚು ನಾಯಿಗಳು ಗ್ರಾಮದ ಸುತ್ತಮುತ್ತ ಇನ್ನೂ ಓಡಾಡಿ–ಕೊಂಡಿದ್ದು ಗ್ರಾಮದ ಜನರು ಭಯಭೀತರಾಗಿದ್ದಾರೆ. ತಕ್ಷಣ ಸಂಬಂಧಪಟ್ಟವರು ಕ್ರಮಕೈಗೊಳ್ಳುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:8971850542


# ದೇಹ ಗಟ್ಟಿದ್ದಾಗ ಲಿಂಗಪೂಜೆ ಮಾಡಬೇಕು



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 6– ದೇಹ ಗಟ್ಟಿ ಇದ್ದಾಗ ಲಿಂಗಪೂಜೆ ಮಾಡಬೇಕು ದೃಷ್ಟಿ ಇದ್ದಾಗ ಅದನ್ನು ನೋಡಬೇಕು ಎಂದು ಅನುಭವ ಮಂಟಪದ ಸಂಚಾಲಕರಾದ ಪೂಜ್ಯಶ್ರೀ ಶಿವಾನಂದ ಸ್ವಾಮಿಗಳು ತಿಳಿಸಿದರು ಅವರು ವಿಶ್ವ ಪ್ರಸಿದ್ಧಿ ಪಡೆದ ಅನುಭವ ಮಂಟಪದಲ್ಲಿ 2025ರ ಶ್ರಾವಣ ಮಾಸದ ನಿಮಿತ್ಯ ಅಮರಗಣಂಗಳ ಆತ್ಮಚರಿತ್ರೆ ಪ್ರವಚನ ನಿಮಿತ್ಯವಾಗಿ ಶರಣ, ತ್ರೈಲೋಚನ ಮನೋಹರ ಮಾಣಿಕೇಶ್ವರ ಲಿಂಗ ಎಂಬ ವಿಷಯದ ಕುರಿತು ಅನುಭವ ನೀಡಿದ ಪೂಜ್ಯರು ದೃಷ್ಟಿ ಇದ್ದಾಗ ನೋಡಬೇಕು ಸಿರಿ ಇದ್ದಾಗ ದಾಸೋಹ ಮಾಡಬೇಕು ಅದು ಸಹ ಯೋಗ್ಯರಿಗೆ ಸಲ್ಲಬೇಕು ಹೊರತು ಕೆಟ್ಟವರಿಗೆ ಬೇಡ ಅಲ್ಲದೆ ಕೊಟ್ಟಿರುವುದನ್ನು ಮರೆಯಬೇಕು ಎಂದರು ಶರಣೆ ಹಾಲಮ್ಮತಾಯಿ ಅನಿಲ್ ಮಹಾರಾಜ್ ಅಶೋಕ ಕುಂಬಾರ್ ಚಂದ್ರಪ್ಪ ಗುಂಗೆ ಮಾಹದೇವಪ್ಪಾ ಇಜಾರೆ ವೀರಭದ್ರಪ್ಪ ಹಡಪದ ದಿಲೀಪ್ ಶಿಂದೆ ವೀರೇಶ್ ಕುಂಬಾರ ಶಂಕರ್ ಕೌಟೆ ರಾಣಿ ವೀರೇಶ್ ವಡ್ಡೆ ಕಸ್ತೂರ ಬಾಯಿ. ದಸ್ತಾಪೂರೆ ಶಾಂತಾಬಾಯಿ ಡೊಂಗರೆ ಝುರೇಪ್ಪ ಕುಂಬಾರ, ಪ್ರವಚನ ಸಮಿತಿ ಅಧ್ಯಕ್ಷರಾದ ಶಿವಪುತ್ರಪ್ಪ ಅವಸೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು..



ಬಸವಕಲ್ಯಾಣ :– ನಿವೃತ್ತ ಸಹ ಶಿಕ್ಷಕರಾದ ಶಿವಕುಮಾರ ಬಿರಾದಾರ ರವರ ಗೃಹ ಪ್ರವೇಶ ಮತ್ತು ಪ್ರಸಾದಿಕರಣ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರಿಗೆ ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಹಿರಿಯ ವರದಿಗಾರರಾದ ನಾಗಪ್ಪ ನಿಣ್ಣೆ ಮಾನವ ಬಂಧುತ್ವ ವೇದಿಕೆ ತಾಲೂಕಾ ಸಂಚಾಲಕ ಪಿಂಟು ಕಾಂಬಳೆ, ಸಮತಾ ಸೈನಿಕ ದಳದ ದತ್ತಾತ್ರೇಯ ಸೂರ್ಯವಂಶಿ, ಪ್ರದೀಪ ಭೈರನಳ್ಳಿಕರ್ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)


# ಭೋಸಗಾ ಸರಕಾರಿ ಪ್ರೌಢ ಶಾಲೆಯಲ್ಲಿ ಎಸ್ ಡಿ ಎಂ ಸಿ ರಚನೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಜು 6 ತಾಲೂಕಿನ ಭೋಸಗಾ ಸರಕಾರಿ ಪ್ರೌಢಶಾಲೆಯಲ್ಲಿ ಎಸ್ ಡಿ ಎಂ ಸಿ ರಚನೆ ಮತ್ತು ಆಯ್ಕೆಯಾದ ಅಧ್ಯಕ್ಷರಿಗೆ ಮತ್ತು ಸದಸ್ಯರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಯಿತು. ಶಾಲೆಯ ಮುಖ್ಯ ಗುರುಗಳಾದ ವಿಜಯಲಕ್ಷ್ಮಿ ಹುಡಗೆ. ಮತ್ತು, ಎಸ್ ಡಿಎಂಸಿ ಅಧ್ಯಕ್ಷರಾದ ವೆಂಕಟ ಖನಕುರೆ ಉಪಾಧ್ಯಕ್ಷರಾದ ತ್ರಿಮುಖ ಜಾದವ ,ಸದಸ್ಯರಾದ ಬಂಡೆಪ್ಪ ಪೂಜಾರಿ, ಧೊಂಡಿಬಾ ಕಾಂಬಳೆ, ಗುಡುಸಾಬ ದಾವಲ, ಸಂಜು ಕುಮಾರ ಮಂಜುಳಕರ, ರೇಷ್ಮಾ ಲಖನ, ಲಲಿತ ವಿಲಾಸ, ವೈಜಾಬಾಯಿ ಜ್ಞಾನೇಶ್ವರ, ಶಿಕ್ಷಣ ಪ್ರೇಮಿಗಳಾದ ವಿಲಾಸ ಪೂಜಾರಿ. ಶಿಕ್ಷಕರಾದ ವಸಂತರೆಡ್ಡಿ. ಪರಶುರಾಮ ಗಾಯಕವಾಡ.ರಮೇಶ ಪೂಜಾರಿ . ವಿಜಯಲಕ್ಷ್ಮಿ ಪಟ್ಟಣಶೆಟ್ಟಿ . ಅಂಜಲಿ. ನಿಖಿತಾ ರಾಠೋಡ. ಮಾರುತಿ ರಾಠೋಡ. ಮಾಯ ಜಾಧವ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್ ಅವರಿಗೆ ಗ್ರಂಥಪಾಲಕರಿಂದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಕೇಂದ್ರ ಸರಕಾರದ ಮಹತ್ವಕಾಂಕ್ಷೆ ಯೋಜನೆಯ ನೀತಿ ಆಯೋಗದ ಸಂಪೂರ್ಣತಾ ಅಭಿಯಾನವನ್ನು ತಾಲೂಕಿನಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿರುವ ಹಿನ್ನೆಲೆಯಲ್ಲಿ ಇತ್ತಿಚೆಗೆ ಬೀದರ ಜಿಲ್ಲಾ ಪಂಚಾಯತನಲ್ಲಿ ಜರುಗಿದ ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಚಿವ ಈಶ್ವರ ಖಂಡ್ರೆ ಅವರು ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀ ಬೀರಾದಾರ ಅವರಿಗೆ ಕಂಚಿನ ಪದಕ ನೀಡಿದ–ಕ್ಕೆ ಬುಧವಾರ ತಾಲೂಕಿನ ಪಂಚಾಯತ್ ಕಾರ್ಯಾಲಯದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್ ಅವರಿಗೆ ತಾಲೂಕಿನ ಗ್ರಂಥಪಾಲಕರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಚಂದಮ್ಮ, ಸುನೀತಾ, ಭೀಮಶಾ, ವೀಣಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸ್ ಪಲ್ಟಿ: ಪ್ರಾಣಾಪಾಯದಿಂದ ಪ್ರಯಾಣಿಕರು ಪಾರು

ಮಲ್ಲಮ್ಮ ನುಡಿ ವಾರ್ತೆ; ವಿಜಯಪುರ, ಆ. 6: ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿಯಾಗಿ ಹಲವರಿಗೆ ಸಣ್ಣ ಪುಟ್ಟ ಗಾಯಗಳಾದ ಘಟನೆ ಜಿಲ್ಲೆಯ ಸಿಂದಗಿ ತಾಲೂಕಿನ ಮನ್ನಾಪುರ ಬಳಿ ಸೋಮವಾರ ಸಂಭವಿಸಿದೆ. ಸಿಂದಗಿಯಿಂದ ಹೊನ್ನಳ್ಳಿಗೆ ತೆರಳುತ್ತಿದ್ದ ಬಸ್ ಹದಗೆಟ್ಟ ರಸ್ತೆಯಿಂದಾಗಿ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು, ಪ್ರಾಣ ಹಾನಿಯಾಗಿಲ್ಲ. ಬಸ್‌ನಲ್ಲಿದ್ದ ಪ್ರಯಾಣಿಕರು ಅದೃಷ್ಟವಶಾತ್ ಪಾರಾಗಿದ್ದಾರೆ. ಗಾಯಾಳುಗಳನ್ನು ಸಿಂದಗಿ ತಾಲೂಕು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸಿಂದಗಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.



# ವಿವೇಕಾನಂದ ಧ್ಯಾನ ಕುಟೀರಕ್ಕೆ ಭೂಮಿಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 06 : ಇಲ್ಲಿನ ಶಿವನಗರದಲ್ಲಿರುವ ರಾಮಕೃಷ್ಣ ವಿವೇಕಾನಂದ ಆಶ್ರಮ ಪರಿಸರದಲ್ಲಿ ನಿರ್ಮಿಸುತ್ತಿರುವ ವಿವೇಕಾನಂದ ಧ್ಯಾನ ಕುಟೀರಕ್ಕೆ ಸೋಮವಾರ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮೀಜಿ ಭೂಮಿಪೂಜೆ ನೆರವೇರಿಸಿದರು.

ಸ್ವಾಮೀಜಿ ಮಾತನಾಡಿ, ಯೋಗ, ಧ್ಯಾನ, ಪ್ರಾಕೃತಿಕ ಚಿಕಿತ್ಸೆ ಮತ್ತು ಆಯುರ್ವೇದಿಕ್ ಜೀವನ ಪದ್ಧತಿಯಿಂದ ದುಃಖಿಯನ್ನು ಸುಖಿಯಾಗಿಸುವ, ಅಜ್ಞಾನಿಗೆ ಜ್ಞಾನಿಯಾಗಿಸುವ ಮತ್ತು ರೋಗಿಗೆ ನಿರೋಗಿಯಾಗಿಸಿ ಪರಮ ಯೋಗಿಯನ್ನಾಗಿಸುವ ಚಮತ್ಕಾರಿ ಸೂತ್ರಗಳನ್ನು ನಮ್ಮ ಪೂರ್ವಜರು ಕೊಟ್ಟಿದ್ದಾರೆ.

ಆ ಸೂತ್ರಗಳಂತೆ ಮಾನವನ ಒತ್ತಡ ಬದುಕಿನ ಸಮಗ್ರ ಪರಿವರ್ತನೆಗಾಗಿ ಭಕ್ತರ ಅಪೇಕ್ಷೆ ಮತ್ತು ನೆರವಿನಿಂದ ಇಲ್ಲಿ ಧ್ಯಾನ ಕುಟೀರ ಸ್ಥಾಪಿಸಲಾಗುತ್ತಿದೆ. 2026ರ ಜನವರಿ 12ರಂದು ಉದ್ಘಾಟಿಸಲಾಗುವುದು ಎಂದು ತಿಳಿಸಿದರು.

ಆಯುರ್ವೇದ, ನೈಸರ್ಗಿಕ ಚಿಕಿತ್ಸೆ ಜೊತೆಗೆ ನಿರಂತರ ಯೋಗ, ಧ್ಯಾನ ತರಗತಿಗಳನ್ನು ನಡೆಸುವ ಉದ್ದೇಶದಿಂದ ಆಶ್ರಮದಿಂದ ಸ್ವಾಮಿ ವಿವೇಕಾನಂದ ಆರೋಗ್ಯ ಧಾಮ ಆಯುರ್ವೇದಿಕ್ ಆಸ್ಪತ್ರೆಯನ್ನು ಸೆಪ್ಟೆಂಬರ್ 11ರಂದು ಆರಂಭಿಸಲಾಗುತ್ತಿದೆ ಎಂದು ಮಾಹಿತಿ ಹಂಚಿಕೊಂಡರು.

ಇಂದಿನ ಹಾಗೂ ಮುಂದಿನ ಜನಾಂಗವನ್ನು ಯೋಗ ಮತ್ತು ಧ್ಯಾನದ ದಿವ್ಯ ಶಕ್ತಿಯಿಂದ ಖಿನ್ನತೆ, ಒತ್ತಡ, ರೋಗಗಳಿಂದ ಮುಕ್ತರಾಗಿಸಿ ಸದೃಢ ಭಾರತವನ್ನು ಕಟ್ಟುವ ಬಹುದೊಡ್ಡ ಹೊಣೆ ನಮ್ಮೆಲ್ಲರ ಮೇಲಿದೆ. ಇಂದಿನ ಬದಲಾದ ಆಧುನಿಕ ಜೀವನ ಶೈಲಿ ಮತ್ತು ಆಹಾರ ಶೈಲಿ ಪ್ರತಿಯೊಬ್ಬರ ಆರೋಗ್ಯಕ್ಕೆ ಕುತ್ತಾಗಿ ಪರಿಣಮಿಸಿದೆ ಎಂದರು.

ಪತ್ರಕರ್ತ ಸದಾನಂದ ಜೋಶಿ, ಪ್ರಮುಖರಾದ ಅನೀತಾ ಪಾಟೀಲ್, ಪದ್ಮಜಾ ವಿಶ್ವಕರ್ಮ, ಅಂಬುಜಾ ವಿಶ್ವಕರ್ಮ, ಜಯಪ್ರಕಾಶ ಪೊದ್ದಾರ್, ಚನ್ನಬಸವ ಹೇಡೆ, ನಿತಿನ್ ಕರ್ಪೂರ್, ಸಿದ್ದನಗೌಡ, ಗುಣವಂತ ರಾಜೋಳೆ, ಹಾವಗಿರಾವ ಕಳಸೆ, ಬಸವರಾಜ ಬುನ್ನಾ, ನಾಗಶೆಟ್ಟಿ, ಶ್ರದ್ಧಾ, ಗೋರಖನಾಥ, ಗುರುನಾಥ ರಾಜಗೀರಾ, ಸಚಿದಾನಂದ ಚಿದ್ರೆ, ಸತ್ಯಪ್ರಕಾಶ, ಜಗದೀಶ ಮುಖೇಡಕರ್, ಗಣೇಶ ಕಳಸೆ ಇದ್ದರು.

# ಬಡವರಲ್ಲಿ ಪ್ರಾಮಾಣಿಕತೆ ಹೆಚ್ಚು




ಬೀದರ. ಅ. 06: ಬಡ ಜನರಲ್ಲಿ ಪ್ರಾಮಾಣಿಕತೆ ಹೆಚ್ಚಿರುತ್ತದೆ ಎಂದು ಸಹುಲತ್ ಸಂಶೋಧನೆ ಹಾಗೂ ಅಭಿವೃದ್ಧಿ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕ ಅಬ್ದುಲ್ ಜಬ್ಬಾರ್ ಸಿದ್ದಿಕಿ ಹೇಳಿದರು.

ಬೀದರ್ ಕಾರುಣ್ಯ ಸೌಹಾರ್ದ ಸಹಕಾರಿ ಸಂಘ ನಿಯಮಿತದ ವತಿಯಿಂದ ನಗರದ ಮೊಘಲ್ ಗಾರ್ಡನ್ ಸಭಾಂಗಣದಲ್ಲಿ ಈಚೆಗೆ ಆಯೋಜಿಸಿದ್ದ ಸಮುದಾಯ ಸಂಪರ್ಕ, ಮಿಷನ್ ಮತ್ತು ವಿಜನ್ ಕುರಿತ ಸಭೆಯಲ್ಲಿ ಅವರು ಮಾತನಾಡಿದರು. ಬೀದರ್ ಕಾರುಣ್ಯ ಸಹಕಾರಿ ಸಂಸ್ಥೆಯ ಬಡವರು ಹಾಗೂ ಸಣ್ಣ ವ್ಯಾಪಾರಿಗಳ ಸಾಲ ಮರುಪಾವತಿ ಪ್ರಮಾಣ ಶೇಕಡ 98 ರಷ್ಟಿದೆ ಎಂದು ತಿಳಿಸಿದರು. ದೇಶದಲ್ಲಿ ಬಡ್ಡಿರಹಿತ ಸಹಕಾರ ಸಂಘಗಳು 14 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿವೆ. ಒಟ್ಟು 47 ಶಾಖೆಗಳಿದ್ದು, 1.25 ಲಕ್ಷ ಕುಟುಂಬಗಳು ಈ ಸಂಸ್ಥೆಗಳೊಂದಿಗೆ ಸಂಬಂಧ ಹೊಂದಿವೆ. ಪ್ರತಿ ನಿತ್ಯ ಈ ಸಂಸ್ಥೆಗಳು ಸುಮಾರು ರೂ. 1.5 ಕೋಟಿಯಷ್ಟು ಸಾಲ ನೀಡುತ್ತಿವೆ ಎಂದು ಹೇಳಿದರು.

ಬಡವರ ಹೆಚ್ಚಿನ ಆದಾಯದ ಪ್ರಮಾಣ ಇತರ ಬ್ಯಾಂಕ್‌ಗಳಿಗೆ ಬಡ್ಡಿ ರೂಪದಲ್ಲಿ ಹೋಗುತ್ತದೆ. ಆದರೆ, ನಮ್ಮ ಸಹಕಾರಿ ಸಂಘಗಳು ಬಡವರಿಗೆ ಬಡ್ಡಿ ರಹಿತವಾಗಿ ಸಾಲ ನೀಡುತ್ತಿವೆ ಎಂದು ತಿಳಿಸಿದರು. ಪೌರಾಡಳಿತ ಸಚಿವ ರಹೀಂ ಖಾನ್ ಮಾತನಾಡಿ, ಬೀದರ್ ಕಾರುಣ್ಯ ಸಂಘವು ಕಡಿಮೆ ಅವಧಿಯಲ್ಲೇ ಅಭಿವೃದ್ಧಿ ಸಾಧಿಸಿರುವುದು ಆಶ್ಚರ್ಯ ಹಾಗೂ ಸಂತಸ ಉಂಟು ಮಾಡಿದೆ ಎಂದು ಹೇಳಿದರು.

ಸಂಘ ಬಡವರು ಹಾಗೂ ಸಣ್ಣ ವ್ಯಾಪಾರಿಗಳ ಆರ್ಥಿಕ ಅಭಿವೃದ್ಧಿಗೆ ನೆರವಾಗುತ್ತಿದೆ ಎಂದು ತಿಳಿಸಿದರು. ಸಂಘದ ವ್ಯವಸ್ಥಾಪಕ ಮಂಡಳಿ ಅಧ್ಯಕ್ಷ ಮುಜ್ತಬಾ ಖಾನ್ ಮಾತನಾಡಿ, ಸಂಘವು 7 ವರ್ಷಗಳ ಅವಧಿಯಲ್ಲಿ ಸಣ್ಣ ವ್ಯಾಪಾರಿಗಳಿಗೆ 60 ಕೋಟಿ ಹಾಗೂ ರೂ. 40 ಲಕ್ಷ ವೈಯಕ್ತಿಕ ಸಾಲ ವಿತರಿಸಿದೆ ಎಂದು ಹೇಳಿದರು.

3,500 ಕುಟುಂಬಗಳು ಸಂಘದೊಂದಿಗೆ ಜೋಡಣೆ ಆಗಿವೆ ಎಂದು ತಿಳಿಸಿದರು.

ಸಂಘದ ಅಧ್ಯಕ್ಷ ಮುಹಮ್ಮದ್ ರಫೀಕ್ ಅಹಮ್ಮದ್ ಮಾತನಾಡಿ, ದೇವರು ವ್ಯಾಪಾರವನ್ನು ಕಾನೂನು ಬದ್ಧಗೊಳಿಸಿದ್ದಾನೆ. ಬಡ್ಡಿ ನಿಷೇಧಿಸಿದ್ದಾನೆ ಎಂದು ತಿಳಿಸಿದರು.

ಬೀದರ್ ಡಿಸಿಸಿ ಬ್ಯಾಂಕ್ ನಿವೃತ್ತ ಅಧಿಕಾರಿ ಬಿ.ಎಸ್. ಕುದುರೆ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ಜಮಾಅತೆ ಇಸ್ಲಾಮಿ ಹಿಂದ್ ಬೀದರ್ ಘಟಕದ ಅಧ್ಯಕ್ಷ ಮುಹಮ್ಮದ್ ಮೌಝುಂ ಮಾತನಾಡಿದರು.

ರಹಮತ್ ಉಲ್ಲಾ ಖಾನ್ ಅವರ ಕುರಾನ್ ಪಠಣದೊಂದಿಗೆ ಸಭೆ ಆರಂಭವಾಯಿತು. ಕುರಾನ್ ಪಠಣವನ್ನು ನಿವೃತ್ತ ಪ್ರಾಚಾರ್ಯ ಮುಹಮ್ಮದ್ ನಿಜಾಮುದ್ದೀನ್ ಕನ್ನಡಕ್ಕೆ ಅನುವಾದಿಸಿದರು. ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್, ಸಂಘದ ಉಪಾಧ್ಯಕ್ಷ ಎಹ್ತೆಶಾಮ್ ಉಲ್ ಹಕ್, ಸಿಇಒ ಮುಹಮ್ಮದ್ ಮಸಿಯುದ್ದೀನ್, ಪ್ರಧಾನ ಕಾಜಿ ಡಾ. ಸೈಯದ್ ಹುಸಾಮುದ್ದೀನ್ ಉಜೇರ್, ಪ್ರಮುಖರಾದ ಮುಹಮ್ಮದ್ ಆಸಿಫುದ್ದೀನ್, ಶೇಖರ ಚೌಹಾಣ್, ಅಬ್ದುಲ್ ಸಲಾಂ, ಮುಬಾಶಿರ್ ಸಿಂದೆ, ಮುಹಮ್ಮದ್ ಅಕ್ರಂ ಅಲಿ, ಅಶ್ಫಾಕ್ ಅಹಮ್ಮದ್, ಅಸ್ಮಾ, ಸಬಿಯಾ ಖಾನಂ, ಅಹಮ್ಮದ್ ಸೇಠ್, ಶೇಖ್ ಸಿರಾಜುದ್ದೀನ್ ಮತ್ತಿತರರು ಇದ್ದರು.

# ಆ.9 ಲಡ್ಡುಮುತ್ಯಾ ಪುಣ್ಯಾರಾಧನೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ, ಆ.6– ಗದ್ದನಕೇರಿ ಕ್ರಾಸ್ ಬಳಿಯಿರುವ ಶ್ರೀ ಲಡ್ಡು ಮುತ್ಯಾರವರ ದೇವಸ್ಥಾನದಲ್ಲಿ ಆ.9 ರಂದು ನೂಲ ಹುಣ್ಣಿಮೆಯಂದು ಶ್ರೀ ಲಡ್ಡು ಮುತ್ಯಾರವರ 32ನೇ ಪುಣ್ಯಾರಾಧನೆ ಕಾರ್ಯಕ್ರಮ ಜರುಗಲಿದೆ. ಶನಿವಾರ ದಿನವಿಡಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಶ್ರೀ ಲಡ್ಡು ಮುತ್ಯಾರ ಮಠದಲಿ 9 ರಂದು ಬೆಳಿಗ್ಗೆ 9ಕ್ಕೆ ಗದ್ದುಗೆಗೆ ವಿಶೇಷ ಅಭಿಷೇಕ ನಂತರ ಚರಂತಿಮಠದ ಪೂಜ್ಯ ಪ್ರಭುಸ್ವಾಮಿಗಳ ಸಾನ್ನಿಧ್ಯದಲ್ಲಿ ಮಹಾಪ್ರಸಾದ ವಿತರಣೆ ನಡೆಯಲಿದೆ ಎಂದು ಲಡ್ಡುಮುತ್ಯಾ ಭಕ್ತ ಮಂಡಳಿಯ ಅಧ್ಯಕ್ಷ ಷಣ್ಮುಖಪ್ಪ ಹದ್ಲಿ, ಉಪಾಧ್ಯಕ್ಷ ದಿನೇಶ ಬಾರ್ಶಿ, ಕಾರ್ಯದರ್ಶಿ ಮಲ್ಲಿಕಾರ್ಜುನ ಸಕ್ರೋಜಿ, ಕೋಶಾಧ್ಯಕ್ಷ ಕುಮಾರ ಸಜ್ಜನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೈಗಾರಿಕಾ ನಿವೇಶನ ದರ ಭಾರಿ ಏರಿಕೆ; ಕೈಗಾರಿಕೋದ್ಯಮಿಗಳಿಂದ ಅಪಸ್ವರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 06 : ನಗರ ಹೊರವಲಯದ ಕೊಳಾರ ಕೈಗಾರಿಕಾ ಪ್ರದೇಶದಲ್ಲಿ ಹೊಸ ಇಂಡಸ್ಟ್ರಿ ಸ್ಥಾಪನೆಗೆ ನಿವೇಶನಕ್ಕೆ ನಿಗದಿಪಡಿಸಿರುವ ದರದಲ್ಲಿ ಭಾರಿ ಏರಿಕೆ ಮಾಡಲಾಗಿದ್ದು, ಇದಕ್ಕೆ ಜಿಲ್ಲೆಯ ಉದ್ಯಮಿಗಳು ಅಪಸ್ವರ ತೆಗೆದಿದ್ದಾರೆ.

ಕೊಳಾರ ಕೈಗಾರಿಕಾ ಪ್ರದೇಶದ ಎರಡನೇ ಹಂತದಲ್ಲಿ ಪ್ರತಿ ಎಕರೆ ಜಾಗಕ್ಕೆ ?41 ಲಕ್ಷ ಬೆಲೆ ನಿಗದಿಪಡಿಸಲಾಗಿತ್ತು.

ಅದನ್ನು ಈಗ ದಿಢೀರನೆ ?87.50 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಕರ್ನಾಟಕ ಕೈಗಾರಿಕೆಗಳ ಪ್ರದೇಶಾಭಿವೃದ್ಧಿ ಮಂಡಳಿಯು ಈ ಕುರಿತು ಇತ್ತೀಚೆಗೆ ಆದೇಶ ಹೊರಡಿಸಿದೆ. ಇದಕ್ಕೆ ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಸೇರಿದಂತೆ ಉದ್ಯಮಿಗಳು ವಿರೋಧ ವ್ಯಕ್ತಪಡಿಸಿದ್ದಾರೆ.

ಹೊಸ ಉದ್ದಿಮೆಗಳ ಸ್ಥಾಪನೆಗೆ ಕಡಿಮೆ ಬೆಲೆಯಲ್ಲಿ ಜಮೀನು ನೀಡಲಾಗುತ್ತಿದೆ. ಇಂತಹದ್ದರಲ್ಲಿ ಹಿಂದುಳಿದ ಜಿಲ್ಲೆಯಲ್ಲಿ ಜಾಗದ ಬೆಲೆಯಲ್ಲಿ ಭಾರಿ ಹೆಚ್ಚಳ ಮಾಡಿ, ಕೈಗಾರಿಕೆಗಳ ಬೆಳವಣಿಗೆಗೆ ಕೊಡಲಿ ಏಟು ಕೊಟ್ಟಿರುವುದು ಸರಿಯಲ್ಲ ಎಂದು ಆಕ್ಷೇಪಿಸಿದ್ದಾರೆ.

ವಿರೋಧಕ್ಕೆ ಕಾರಣವೇನು?:

ಕೊಳಾರ ಕೈಗಾರಿಕಾ ಪ್ರದೇಶದಲ್ಲಿ ಹೆಚ್ಚಿನ ಕೈಗಾರಿಕೆಗಳು ಕೆಮಿಕಲ್, ಟೈರ್ ಪೈರೋಲಿಸಿಸ್‌ಗೆ ಸಂಬಂಧಿಸಿವೆ. ಸುತ್ತಮುತ್ತಲಿನ ಪ್ರದೇಶದ ನೆಲ, ಜಲ ರಾಸಾಯನಿಕದಿಂದ ವಿಷವಾಗಿದೆ. ಹೊಸಬರು ಕೈಗಾರಿಕೆಗಳನ್ನು ಸ್ಥಾಪಿಸಲು ಆಸಕ್ತಿ ತೋರುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಜಾಗದ ಬೆಲೆ ಹೆಚ್ಚಿಸಿದರೆ ಯಾರಾದರೂ ಮುಂದೆ ಬರುತ್ತಾರಾ ಎಂಬುದು ಉದ್ಯಮಿಗಳ ಪ್ರಶ್ನೆ.



'ಹೊಸ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡಬೇಕು. ಅದು ಬಿಟ್ಟು ಅದಕ್ಕೆ ವ್ಯತಿರಿಕ್ತವಾದ ತೀರ್ಮಾನ ಕೈಗೊಂಡರೆ ಕೈಗಾರಿಕೆಗಳು ಸ್ಥಾಪನೆಯಾಗುವುದಾದರೂ ಹೇಗೆ? ಉದ್ಯೋಗ ಸೃಷ್ಟಿಯಾಗುವುದಾದರೂ ಹೇಗೆ? ಕೂಡಲೇ ಈ ನಿರ್ಧಾರ ಹಿಂಪಡೆಯಬೇಕು' ಎಂದು ಉದ್ಯಮಿ ಬಸವರಾಜ ಆಗ್ರಹಿಸಿದ್ದಾರೆ.

'ಬೆಲೆ ಹೆಚ್ಚಿಸಿರುವ ಸರ್ಕಾರದ ನಿರ್ಧಾರದಿಂದ ಆಘಾತವಾಗಿದೆ. ಮೊದಲೇ ಯುವ ಉದ್ದಿಮೆದಾರರು ಮುಂದೆ ಬರುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಬೆಲೆ ಹೆಚ್ಚಿಸಿದರೆ ಯಾರು ಮುಂದೆ ಬರುವುದಿಲ್ಲ. ಯಾರೇ, ಎಲ್ಲಿಯೇ ಕೈಗಾರಿಕೆ ಸ್ಥಾಪಿಸಲು ಮುಂದೆ ಬಂದರೆ ಅವರಿಗೆ ವಿಶೇಷ ವಿನಾಯಿತಿ ನೀಡಬೇಕು. ದರ ಹೆಚ್ಚಿಸಿರುವುದು ಅವೈಜ್ಞಾನಿಕವಾದ ನಿರ್ಧಾರ. ಕೂಡಲೇ ವಾಪಸ್ ಪಡೆಯಬೇಕು' ಎಂದು ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಬಿ.ಜಿ. ಶೆಟಕಾರ, ಕಾರ್ಯದರ್ಶಿ ವೀರೇಂದ್ರ ಶಾಸ್ತ್ರಿ ಒತ್ತಾಯಿಸಿದ್ದಾರೆ.

–ಬಿ.ಜಿ. ಶೆಟಕಾರ ಅಧ್ಯಕ್ಷ ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ದರ ಹೆಚ್ಚಿಸಿ ನಿರ್ಧಾರ ಕೈಗೊಂಡಿರುವ ಕೆಐಎಡಿಬಿಗೆ ತನ್ನ ತೀರ್ಮಾನ ಹಿಂಪಡೆಯಲು ಸೂಚಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿರ್ದೇಶನ ನೀಡಬೇಕೆಂದು ಅವರಿಗೆ ಪತ್ರ ಬರೆದು ಕೋರಿದ್ದೇನೆ.

# ಸಂಜೀವಿನಿ ಒಕ್ಕೂಟಗಳಿಗೆ ವಾರ್ಷಿಕ ಕ್ರೀಯಾ ಯೋಜನೆ ಅಗತ್ಯ : ಬಸವರಾಜ ಮುಂಡರಗಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.6: ಮಹಿಳಾ ಸಂಜೀವಿನಿ ಒಕ್ಕೂಟಗಳಿಗೆ ವಾರ್ಷಿಕ ಕ್ರಿಯಾ ಯೋಜನೆ ಮತ್ತು ಆಯವ್ಯಯವನ್ನು ಸಿದ್ಧಪಡಿಸಲಾಗುತ್ತದೆ ಮಹಿಳಾ ಒಕ್ಕೂಟದ ಪದಾಧಿಕಾರಿಗಳು ತರಬೇತಿ ಪಡೆದು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಸಂಪನ್ಮೂಲ ವ್ಯಕ್ತಿ ಬಸವರಾಜ ಮುಂಡರಗಿ ಹೇಳಿದರು

ಅವರು ಕೊಪ್ಪಳ ಜಿಲ್ಲೆಯ ಬುದಗುಂಪ ಗ್ರಾಮದ ಕರಿಯಮ್ಮ ದೇವಿ ಸಭಾ ಭವನದಲ್ಲಿ ಜರುಗಿದ ಹೊಸಜೀವನ ಸಂಜೀವಿನಿ ಮಹಿಳಾ ಸಂಜೀವಿನಿ ಒಕ್ಕೂಟಗಳ ದೂರದೃಷ್ಟಿ ಹಾಗೂ ವ್ಯಾಪಾರ ಅಭಿವೃದ್ಧಿ ತಯಾರಿಕಾ ಕಾರ್ಯಗಾರದ ವಾರ್ಷಿಕ ಕ್ರೀಯಾ ಯೋಜನೆಯ ತರಬೇತಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದರು

ಒಕ್ಕೂಟಕ್ಕೆ ದೂರದೃಷ್ಟಿ ಹಾಗೂ ವ್ಯಾಪಾರ ಅಭಿವೃದ್ಧಿ ತಯಾರಿಕಾ ಕಾರ್ಯಗಾರದ ಕುರಿತು ಮೂರು ಹಂತಗಳ ತರಬೇತಿ ಮುಕ್ತಾಯವಾಗಿದ್ದು ಪ್ರತಿ ಗ್ರಾಮಗಳ ಸ್ವಸಹಾಯ ಸಂಘಗಳ ಸದಸ್ಯರು ಅಭಿವೃದ್ಧಿಯಾಗಬೇಕಾದರೆ ಅವರೇ ತಯಾರಿಸಿದ ಆಯಾಮಗಳ ಮತ್ತು ಸೂಚಿಕೆಗಳ ಆಧಾರದ ಮೇಲೆ ವಾರ್ಷಿಕ ಕ್ರೀಯಾ ಯೋಜನೆ ತಯಾರಿಸಿ ಸರಕಾರಕ್ಕೆ ಸಲ್ಲಿಸಲಾಗುತ್ತದೆ ಮಹಿಳೆಯರಿಗೆ ವಿವಿಧ ತರಬೇತಿ ನೀಡುವದರ ಮೂಲಕ ಸಾಮಾರ್ಥ್ಯ ಅಭಿವೃದ್ಧಿ ಹೆಚ್ಚಿಸುವದು ಒಕ್ಕೂವನ್ನು ಒಂದು ಸುಸ್ಥಿರ ಅಭಿವೃದ್ಧಿ ಸಂಸ್ಥೆಯನ್ನಾಗಿ ನೆಡೆಸಿಕೊಂಡು ಹೊಗುವದೆ ಇದರ ಉದ್ದೇಶವಾಗಿದೆ ಎಂದು ಹೇಳಿದರು ಕಾರ್ಯಕ್ರಮದ ಒಕ್ಕೂಟದ ಅಧ್ಯಕ್ಷರಾದ ಲಲಿತಾ ಸಂಗಟಿ, ವಹಿಸಿದ್ದರು ಉಪಾಧ್ಯಕ್ಷ ಪಾರ್ವತೆಮ್ಮ ಚೌಡ್ಕಿ,

ಅತಿಥಿಗಳಾಗಿ ಪವಿತ್ರಾ ಸಂಗಟಿ, ಎಂಬಿಕೆ ಶರಣಮ್ಮ, ಎಲ್ ಸಿ ಅರ್ ಪಿ ಪಕೀರಮ್ಮ ತರಲಕಟ್ಟಿ, ಮಂಜುಳಾ, ನಾಯಕ, ಕೃಷಿಸಖಿ ರೇಣುಕಾ ಇಳಗೇರ, ಪಶು ಸಖಿ ಅಬ್ಬಕ್ಕ ಜಬ್ಬಲಗುಡ್ಡಾ ಹಾಗೂ ಒಕ್ಕೂಟದ ಪದಾಧಿಕಾರಿಗಳು ಉಪಸ್ಥಿತರಿದ್ದರು

# ಸರಕಾರಿ ಕನ್ನಡ ಶಾಲೆಗಳಿಗೆ 100 ಕ್ಕೂ ಹೆಚ್ಚು ಸಸಿಗಳ ವಿತರಣೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.6: ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಅಳವಂಡಿ ಗ್ರಾಮದ ಸಮಾಜ ಸೇವಕ, ಶಿಕ್ಷಣ ಪ್ರೇಮಿ ಅನ್ವರ ಹುಸೇನ ಗಡಾದ ಅವರ ಹುಟ್ಟು ಹಬ್ಬದ ಆಚರಣೆ ನಿಮಿತ್ತವಾಗಿ 100 ಸಸಿಗಳನ್ನು ಸರಕಾರಿ ಕನ್ನಡ ಶಾಲಾ ಮಕ್ಕಳಿಗೆ ಸಸಿ ವಿತರಿಸುವ ಮೂಲಕ ಪರಿಸರ ಜಾಗೃತಿಯ ಮೂಲಕ ಅರ್ಥಪೂರ್ಣ ಹುಟ್ಟು ಹಬ್ಬವನ್ನು ಆಚರಿಸಿಕೊಂಡಿದ್ದಾರೆ. ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹೈದರನಗರ, ನೆಲೋಗಿಪುರ, ಅಳವಂಡಿ ಹಾಗೂ ಶಾಂತಿ ನಿಕೇತನ ಪ್ರಾಥಮಿಕ ಶಾಲೆ, ಸ್ವಾಮಿ ವಿವೇಕಾನಂದ ಪ್ರೌಢ ಶಾಲೆಗಳಿಗೆ ಬೇಟಿ ನೀಡಿ ಮಕ್ಕಳ ಕುಶಲೋಪರಿ ವಿಚಾರಿಸಿ ಮಕ್ಕಳಿಗೊಂದು ಮರ ಶಾಲೆಗೊಂದು

ವನ ಎನ್ನುವಂತೆ ಶಾಲಾ ಆವರಣದಲ್ಲಿ ಸಸಿ ಹಚ್ಚಿ ಮಕ್ಕಳಿಗೂ ಸಸಿ ವಿತರಣೆ ಮಾಡುವ ಮೂಲಕ ಪರಿಸರ ಕಾಳಜಿ ಮೆರೆದಿದ್ದಾರೆ ಇದೇ ವೇಳೆ ಮಾತನಾಡಿದ ಅನ್ವರ ಹುಸೇನ್ ಗಡಾದ ಪ್ರತಿವರ್ಷವೂ ರಕ್ತದಾನ ಶಿಬಿರ, ಆರೋಗ್ಯ ಶಿಬಿರ, ಪ್ರತಿಭಾ

ಪುರಸ್ಕಾರ, ಕ್ರೀಡೆಗೆ ಪ್ರೋತ್ಸಾಹ ಹೀಗೆ ವಿಶೇಷ ವಿನೂತನ ಸಾಮಾಜಿಕ ಕಾರ್ಯಕ್ರಮದ ಮೂಲಕ ಹುಟ್ಟು ಹಬ್ಬ ಆಚರಿಸಿಕೊಳ್ಳುತ್ತೇನೆ. ಶಿಕ್ಷಣ, ಸಾಮಾಜಿಕ ಮತ್ತು ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಮಾಡುವುದರಿಂದ ನನಗೆ ತೃಪ್ತಿ ಇದೆ.

# ರಿಯಲ್ ಎಸ್ಟೇಟ್: 1 ಟ್ರಿಲಿಯನ್ ಡಾಲರ್‌ಗೆ ತಲುಪುವ ನಿರೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 06: ರಿಯಲ್ ಎಸ್ಟೇಟ್ ವಹಿವಾಟು 2030 ರ ವೇಳೆಗೆ 1 ಟ್ರಿಲಿಯನ್ ಡಾಲರ್‌ಗೆ ತಲುಪುವ ನಿರೀಕ್ಷೆ ಇದೆ ಎಂದು ಕ್ರೆಡೈ ಕರ್ನಾಟಕ ಅಧ್ಯಕ್ಷ ಭಾಸ್ಕರ್ ಟಿ. ನಾಗೇಂದ್ರಪ್ಪ ಹೇಳಿದರು.

ಬೆಂಗಳೂರಿನಲ್ಲಿ ಈಚೆಗೆ ಆಯೋಜಿಸಿದ್ದ ನಾವಿಗ–8 ಬಿಲ್ಡಿಂಗ್ ಮಟಿರಿಯಲ್ ಎಕ್ಸ್‌ಪೋ ಉದ್ಘಾಟಿಸಿ ಅವರು ಮಾತನಾಡಿದರು.

ರಿಯಲ್ ಎಸ್ಟೇಟ್ ವಹಿವಾಟು ಹೆಚ್ಚಳದಿಂದ ದೇಶದ ಆರ್ಥಿಕ ಬೆಳವಣಿಗೆ ಜತೆಗೆ ವಲಯದ ಮೇಲಿನ ನಂಬಿಕೆ ಕೂಡ ವೃದ್ಧಿಸಲಿದೆ ಎಂದು ತಿಳಿಸಿದರು.

2014 ರಲ್ಲಿ ರಿಯಲ್ ಎಸ್ಟೇಟ್ ವಲಯವು 200 ಬಿಲಿಯನ್ ಡಾಲರ್ ಮಾರುಕಟ್ಟೆ ಮೌಲ್ಯ ಹೊಂದಿತ್ತು. ಈಗ ಭಾರತೀಯ ರಿಯಲ್ ಎಸ್ಟೇಟ್ ವಲಯವು 650 ಬಿಲಿಯನ್ ಡಾಲರ್‌ಗೂ ಹೆಚ್ಚು ವಹಿವಾಟು ನಡೆಸುವ ಉದ್ಯಮವಾಗಿದೆ ಎಂದು ತಿಳಿಸಿದರು.

ರಿಯಲ್ ಎಸ್ಟೇಟ್ ಅನ್ನು ಉದ್ಯಮವೆಂದು ಅಧಿಕೃತವಾಗಿ ಗುರುತಿಸಿಲ್ಲವಾದರೂ, ಇಂದು ಹಿಂದೆಂದಿಗಿಂತಲೂ ಹೆಚ್ಚು ಸಂಘಟಿತ, ಪಾರದರ್ಶಕ, ವೃತ್ತಪರ ಹಾಗೂ ಜವಾಬ್ದಾರಿಯುತವಾದ ಉದ್ಯಮವಾಗಿ ಬೆಳೆದಿದೆ ಎಂದು ಹೇಳಿದರು. ಒಟ್ಟಿಗೆ ಹೋಗುವುದು ಒಂದು ಆರಂಭ, ಒಟ್ಟಿಗೆ ಇರುವುದು ಪ್ರಗತಿ, ಒಟ್ಟಿಗೆ ಕೆಲಸ ಮಾಡುವುದು ಯಶಸ್ಸು ಎಂಬ ಮಾತಿನಂತೆ, ರಿಯಲ್ ಎಸ್ಟೇಟ್ ಉದ್ಯಮದಲ್ಲಿ ಸಹಯೋಗ ಸಾಧನೆಯ ಅಡಿಪಾಯವಾಗಿದೆ ಎಂದು ತಿಳಿಸಿದರು. ಆಸ್ತಿಗಳನ್ನು ಅಭಿವೃದ್ಧಿಪಡಿಸುವುದು, ಗ್ರಾಹಕರೊಂದಿಗೆ ಒಪ್ಪಂದ ಮಾಡಿಕೊಳ್ಳುವುದು ಏನೇ ಇರಲಿ ಅದರ ಯಶಸ್ಸು ಎನ್ನುವುದು ಆಸ್ತಿ ಸಲಹೆಗಾರರು, ಡೆವಲಪರ್‌ಗಳು, ಯೋಜನಾ ವಾಸ್ತುಶಿಲ್ಪಿಗಳು, ರಚನಾತ್ಮಕ ವಿನ್ಯಾಸಕಾರರು, ಸೇವಾ ಸಲಹೆಗಾರರು, ಹಣಕಾಸು ಸಂಸ್ಥೆಗಳು, ನಗರಾಭಿವೃದ್ಧಿ ಅಧಿಕಾರಿಗಳು ಈ ಎಲ್ಲ ವೃತ್ತಿಪರರನ್ನು ಒಗ್ಗೂಡಿಸುವುದರ ಮೇಲೆ ಅವಲಂಬಿಸಿರುತ್ತದೆ ಎಂದು ತಿಳಿಸಿದರು. ಮನೆ, ನಿವೇಶನ ಕೊಳ್ಳುವವರು ಈಗ ಹೆಚ್ಚು ಮಾಹಿತಿಯುಳ್ಳವರು ಹಾಗೂ ವಿವೇಚನಾಶೀಲರಾಗಿದ್ದಾರೆ. ಕೋವಿಡ್ ನಂತರ ಗ್ರಾಹಕರ ಆಕಾಂಕ್ಷೆ, ನಿರೀಕ್ಷೆಗಳು ಹೆಚ್ಚಾಗಿವೆ. ವಿನ್ಯಾಸ, ಸೌಕರ್ಯ ಅಥವಾ ಯೋಗ ಕ್ಷೇಮ ಯಾವುದೇ ವಿಷಯದಲ್ಲಿ ಗ್ರಾಹಕರು ಸ್ಪಷ್ಟವಾಗಿದ್ದಾರೆ ಎಂದು ಹೇಳಿದರು. ಕ್ರೆಡೈ ಹುಬ್ಬಳ್ಳಿ–ಧಾರವಾಡ ಅಧ್ಯಕ್ಷ ಗುರುರಾಜ ಅಣ್ಣಿಗೇರಿ, ಕಾರ್ಯದರ್ಶಿ ಸತೀಶ್ ಮುನವಳ್ಳಿ, ಅಧ್ಯಕ್ಷ(ಎಲೆಕ್ಟ್) ಅಮೃತ ಮೆಹರವಾಡೆ, ಖಜಾಂಚಿ ಪ್ರಿಯಾನ್ ಡಿಸೋಜಾ, ಕ್ರೆಡೈ ಕರ್ನಾಟಕ ನಿಕಟಪೂರ್ವ ಅಧ್ಯಕ್ಷ ಪ್ರದೀಪ್ ರಾಯ್ಕರ್, ಬೀದರ್ ಘಟಕದ ಅಧ್ಯಕ್ಷ ರವಿ ಮೂಲಗೆ, ಕಾರ್ಯದರ್ಶಿ ಅನಿಲಕುಮಾರ, ಸದಸ್ಯ ಹಾವಶೆಟ್ಟಿ ಪಾಟೀಲ ಮತ್ತಿತರರು ಇದ್ದರು.

# ಕಾವ, ಜಾಣ, ರತ್ನ ಪರೀಕ್ಷೆಗೆ ಅರ್ಜಿ ಆಹ್ವಾನ

ಬೀದರ. ಅ. 06 : ಕನ್ನಡ ಸಾಹಿತ್ಯ ಪರಿಷತ್ 2025–26ನೇ ಸಾಲಿನ ಕನ್ನಡ ಪ್ರವೇಶ, ಕಾವ, ಜಾಣ ಹಾಗೂ ರತ್ನ ಪರೀಕ್ಷೆಗಳಿಗೆ ಅರ್ಜಿ ಆಹ್ವಾನಿಸಿದೆ.

ಡಿಸೆಂಬರ್ ಕೊನೆಯ ವಾರದಲ್ಲಿ ನಡೆಯಲಿರುವ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 15 ಕೊನೆಯ ದಿನವಾಗಿದೆ. ರೂ. 50 ದಂಡ ಶುಲ್ಕದೊಂದಿಗೆ ಸೆಪ್ಟೆಂಬರ್ 30 ರವರೆಗೆ ಅರ್ಜಿ ಸಲ್ಲಿಸಬಹುದು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ



ತಿಳಿಸಿದ್ದಾರೆ. ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತನ ಮಾರಾಟ ಮಳಿಗೆಯಲ್ಲಿ ರೂ. 25 ಶುಲ್ಕ ಪಾವತಿಸಿ ಪರೀಕ್ಷಾ ನಿಯಮಾವಳಿ ಹಾಗೂ ಅರ್ಜಿ ನಮೂನೆ ಪಡೆಯಬಹುದು. ಪರಿಷತ್ ಹೆಸರಿಗೆ ರೂ. 65 ಮನಿ ಆರ್ಡರ್ ಮಾಡಿದರೆ ಅರ್ಜಿ ನಮೂನೆ ಅಂಚೆ ಮೂಲಕವೂ ಕಳುಹಿಸಿಕೊಡುವ ವ್ಯವಸ್ಥೆ ಇದೆ ಎಂದು ಹೇಳಿದ್ದಾರೆ. ಪರೀಕ್ಷಾ ಅರ್ಜಿಗಳನ್ನು ಅಂತರ್ಜಾಲತಾಣ www.kadapa.in ಮೂಲಕ ಸಹ ಪಡೆದುಕೊಳ್ಳಬಹುದು. ಪರೀಕ್ಷಾ ಶುಲ್ಕದೊಂದಿಗೆ ರೂ. 25 ಅರ್ಜಿ ಶುಲ್ಕವನ್ನು ಪ್ರತ್ಯೇಕವಾಗಿ ಪಾವತಿಸಬೇಕು ಎಂದು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 080– 26612991 ಅಥವಾ 224238567 ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

ಬಿಜೆಪಿಯಿಂದ ಹರ್ ಘರ್ ತಿರಂಗಾ ಅಭಿಯಾನ

## ಆ.13ರಿಂದ 15ರವರೆಗೆ:ವಿಭೂತಿಹಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:-ಸ್ವಾತಂತ್ರೋತ್ಸವದ ಅಂಗವಾಗಿ ಬಿಜೆಪಿ ವತಿಯಿಂದ ಹರ್ ಘರ್ ತಿರಂಗಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಇದರ ಅಂಗವಾಗಿ ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬುಧವಾರ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದ ಜಿಲ್ಲಾಧ್ಯಕ್ಷಬಸವರಾಜ ವಿಭೂತಿಹಳ್ಳಿ ಅವರು ಆ.13ರಿಂದ 15ರವರೆಗೆ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಹರ್ ಘರ್ ತಿರಂಗಾ ಕಾರ್ಯಕ್ರಮ ನಿಮಿತ್ಯ ಬೈಕ್ ರ್ಯಾಲಿ ಆಯೋಜಿಸಬೇಕು. ಎಲ್ಲ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಬೇಕು. ಜತೆಗೆ ಎಲ್ಲ ದಾರ್ಶನಿಕರ ಪುತ್ಥಳಿಗಳನ್ನು ಸ್ವಚ್ಛಗೊಳಿಸುವ ಮುಖಾಂತರ 77ನೇ ಸ್ವಾತಂತ್ರ್ಯೋತ್ಸವ ಆಚರಿಸಬೇಕೆಂದು ಎಲ್ಲ ಮಂಡಲ ಅಧ್ಯಕ್ಷರು, ಪದಾಧಿಕಾರಿಗಳಿಗೆ, ಕಾರ್ಯಕರ್ತರಿಗೆ ಜಿಲ್ಲಾಧ್ಯಕ್ಷರು ಸೂಚಿಸಿದರು ಹಾಗೂ

ಪಕ್ಷದ ಸಂಘಟನೆ ಕುರಿತು ಹಾಗೂ ರಾಜ್ಯ ಘಟಕದ ನಿರ್ದೇಶನದಂತೆ ಕಾರ್ಯಕ್ರಮಗಳ ಆಯೋಜನೆ ಕುರಿತು ವಿವರಿಸಿದರು. ಆ.15ರಂದು ಬೆಳಗ್ಗೆ 8 ಗಂ-ಟೆಗೆ ಜಿಲ್ಲಾ ಕಾರ್ಯಾಲಯದಲ್ಲಿ ಧ್ವಜಾರೋಹಣ ಆಚರಿಸಲಿದ್ದು, ಎಲ್ಲರೂ ಭಾಗವಹಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಮತ್ತು ಮೆಲಪ್ಪ ಗುಳಗಿ, ಜಿಲ್ಲಾ ಉಪಾಧ್ಯಕ್ಷ ದೇವಿಂದ್ರ ಕೋನೇರ ಮತ್ತು ಅಡಿವೆಪ್ಪ ಜಾಕ,ವೆಂಕಟಪ್ಪ ಅವಂಗಪುರ,ಎಸ್.ಸಿ ಮೋರ್ಚಾ ಜಿಲ್ಲಾಧ್ಯಕ್ಷ ಭೀಮಾಶಂಕರ ಬಿಲ್ಲವ್,ಓಬಿಸಿ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಕಂದುಕುರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಆರ್ ಸಾಹುಕಾರ,ಎಸ್.ಟಿ ಮೋರ್ಚಾ ಜಿಲ್ಲಾಧ್ಯಕ್ಷ ಚಂದಪ್ಪ ರಾಮಸಮುದ್ರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷ ಸುನಿತಾ ಚೌವ್ಹಾಣ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ನಾಳೆ ರಸಗೊಬ್ಬರ ಕೊರತೆ ವಿರೋಧಿಸಿ ಬಿಜೆಪಿ ಪ್ರತಿಭಟನೆ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಕಳೆದ ಒಂದು ತಿಂಗಳಿಂದಲೂ ರೈತರು ಯು-ರಿಯಾ ರಸಗೊಬ್ಬರ ಪಡೆಯುವಲ್ಲಿ ಹರಸಾಹಸ ಮಾಡುತ್ತಿದ್ದು ರಾಜ್ಯ ಕಾಂಗ್ರೆಸ್ ಸರ್ಕಾರ ಸಮಪರ್ಕವಾಗಿ ಯೂರಿಯಾ ಗೊಬ್ಬರ ರೈತರಿಗೆ ವಿತರಣೆ ಮಾಡುವಲ್ಲಿ ನಿರ್ಲಕ್ಷದೋರಣೆ ನಡೆಯುತ್ತಿದೆ, ಯೂರಿಯಾ ಉಳ್ಳವರ ಪಾಲಾಗುತ್ತಿದೆ ಈ ಕುರಿತು ರೈತರಿಗೆ ರಸಗೊಬ್ಬರ ಸಮಪರ್ಕವಾಗಿ ವಿತರಣೆ ಮಾಡವುಂತೆ ಒತ್ತಾಯಿಸಿ ನಾಳೆ ಶಹಾಪುರ ನಗರದಲ್ಲಿ ಬಿಜೆಪಿ ರೈತರೊಂದಿಗೆ ಪ್ರತಿಭಟನೆ ಮಾಡುತ್ತಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಂದು ಯುವ ನಾಯಕರಾದ ಅಮೀನರಡ್ಡಿ ಯಾಳಗಿ ಮುಖಂಡರಾದ ಡಾ, ಚಂದ್ರಶೇಖರ ಸುಬೇದಾರ ಸೇರಿದಂತೆ ಅನೇಕ ಮುಖಂಡರು ವಿವಿಧ ಘಟಕಗಳ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರತಿಭಟನೆ ಯಸಸ್ವಿಗೊಳಿಸಬೇಕು ಎಂದು ಬಸವರಾಜಪ್ಪಗೌಡ ವಿಬೂತಿಹಳ್ಳಿ ಪತ್ರಿಕೆ ಪ್ರಕಟಣೆಯ ಮುಖಾಂತರ ತಿಳಿಸಿದ್ದಾರೆ,

## ತಂಗಡಗಿ ಶಾಲಾ ಎಸ್,ಡಿ,ಎಮ್,ಸಿ, ಅಧ್ಯಕ್ಷರ ಆಯ್ಕೆ,




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ತಾಲುಕಿನ ತಂಗಡಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎಸ್,ಡಿ,ಎಮ್,ಸಿ, ನೂತನ ಅಧ್ಯಕ್ಷರನ್ನು ಆಯ್ಕೆ ಮಾಡಲಾಯಿತು, ಅಧ್ಯಕ್ಷರಾಗಿ ಶ್ರೀಮತಿ ರಾಜೇಶ್ವರಿ ಸಿದ್ರಾಮರಡ್ಡಿ ಮತ್ತು ಉಪಾಧ್ಯಕ್ಷರತಾಗಿ ಈಶಪ್ಪ ರವರನ್ನು ಸಭೆ ಸರ್ವಾನುಮತಿದಿಂದ ಆಯ್ಕೆ ಮಾಡಿದರು, ಈ ಸಭೆಯಲ್ಲಿ ಸಿಆರ್,ಪಿ,ಎಸ್,ಡಿ,ಎಮ್,ಸಿ,ಸರ್ವ ಸದಸ್ಯರು ಹಾಜರಿದ್ದರು,ಎಂದು ಮುಖ್ಯ ಗುರುಗಳಾದ ಲಕ್ಕಪ್ಪ ಕಟ್ಟಿಮನಿ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಧ್ವಾರದಲ್ಲಿ ಹೆಚ್ ಡಿಎಫ್ ಸಿ ಬ್ಯಾಂಕ್ ನೂತನ ಶಾಖೆ ಉದ್ಘಾಟಿಸಿದ ಶಾಸಕ ಕಂದಕೂರ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್ ಮತಕ್ಷೇತ್ರದ ಮಾಧ್ವಾರದಂತಹ ಗ್ರಾಮೀಣ ಭಾಗದಲ್ಲಿ ಹೆಚ್ ಡಿಎಫ್ ಸಿ ಬ್ಯಾಂಕ್ ತನ್ನ ಶಾಖೆಯನ್ನು ಆರಂಭಿಸಿದ್ದು, ಸ್ವಾಗತಾರ್ಹ ಈ ಭಾಗದ ಜನರು ಬ್ಯಾಂಕ್ ನ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಶಾಸಕ ಶರಣಗೌಡ ಕಂದಕೂರ ಅವರು ತಿಳಿಸಿದರು.

ಸಮೀಪದ ಮಾಧ್ವಾರ ಗ್ರಾಮದಲ್ಲಿ ಹೆಚ್ ಡಿಎಫ್ ಸಿ ಬ್ಯಾಂಕ್ ನೂತನವಾಗಿ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದರು.

ಗುರುಮಠಕಲ್ ತಾಲೂಕು ಕೇಂದ್ರದಲ್ಲೇ ಹೆಚ್ ಡಿಎಫ್ ಸಿ ಬ್ಯಾಂಕ್ ಬ್ಯಾಂಕ್ ಶಾಖೆ ಇಲ್ಲ ಅದರಲ್ಲಿ ಮಾಧವಾರ ಗ್ರಾಮದಲ್ಲಿ ಸ್ಥಾಪನೆ ಮಾಡಿದ್ದು ಸಂತಸದ ಸುದ್ದಿ. ಬ್ಯಾಂಕ್ ನ ಸ್ಥಾಪನೆಗೆ ಕಾರಣೀಭೂತರಾದ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ನಮ್ಮ ಭಾಗದ ಜನರು ಮುಗ್ಧರು, ಅದರಲ್ಲಿ ಅನಕ್ಷರಸ್ಥರು ಇದ್ದಾರೆ ಅವರಿಗೆ ಬ್ಯಾಂಕ್ ನ ವ್ಯವಹಾರಗಳ ಬಗ್ಗೆ ಮಾಹಿತಿ ಕಡಿಮೆ. ಬ್ಯಾಂಕ್ ಸಿಬ್ಬಂದಿಯವರು ತಮ್ಮ ಯೋಜನೆಗಳ ಬಗ್ಗೆ ಜನರಿಗೆ ವಿವರವಾಗಿ ಮಾಹಿತಿ ನೀಡುವ ಮೂಲಕ ಅವರನ್ನು ತಮ್ಮ ಗ್ರಾಹಕರನ್ನಾಗಿ ಮಾಡಿಕೊಳ್ಳಬೇಕು ಇದರಿಂದ ಇಬ್ಬರಿಗೂ ಲಾಭವಾಗುತ್ತದೆ. ಬ್ಯಾಂಕ್ ನ ಸಿಬ್ಬಂದಿ ಗ್ರಾಮೀಣ ಜನರೊಂದಿಗೆ ಉತ್ತಮ ಒಡನಾಟವನ್ನು ಇಟ್ಟುಕೊಂಡು ಜನರಿಗೆ ಸಹಕಾರ ಕೊಡಿ ಎಂದು ಸೂಚಿಸಿದರು. ಎಚ್ ಡಿ ಎಫ್ ಸಿ ಬ್ಯಾಂಕ್ ನ ಅಧಿಕಾರಿಗಳು ಪ್ರತಿ ತಾಲೂಕು ಕೇಂದ್ರಗಳಲ್ಲಿ ತಮ್ಮ ಬ್ಯಾಂಕ್ ಶಾಖೆ ಪ್ರಾರಂಭಿಸುವಂತೆ ಕ್ಲಸ್ಟರ್ ಮುಖ್ಯಸ್ಥರಾದ ರವಿ ಸುರಪುರ ಅವರಿಗೆ ಹೇಳಿದರು.

ಇದಕ್ಕೂ ಮುನ್ನ ಯಾದಗಿರಿ ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಭೀಮರಾವ್ ಪಂಚಾಳ ಅವರು ಮಾತನಾಡಿ ಮಾಧವಾರ ಗ್ರಾಮದಲ್ಲಿ ಶಾಖೆ ಸ್ಥಾಪನೆ ಮಾಡುವ ಬಗ್ಗೆ ಆರ್ಥಿಕ ವಿಭಾಗದಿಂದಲೇ ಸೂಚನೆ ಬಂದಿತ್ತು. ಹೀಗಾಗಿ ಹೆಚ್ ಡಿಎಫ್ ಸಿ ಅವರು ಕೇವಲ ಒಂದು ತಿಂಗಳ ಕಾಲಾವಧಿಯಲ್ಲೇ ಶಾಖೆ ಸ್ಥಾಪನೆ ಮಾಡಿದ್ದಾರೆ. ಈ ಭಾಗದ ಪ್ರತಿಯೊಬ್ಬರೂ ಖಾತೆ ತೆಗೆದು ಬ್ಯಾಂಕ್ ನ ಲಾಭ ಪಡೆಕೊಳ್ಳುವಂತೆ ಸಲಹೆ ನೀಡಿದರು.

ಹೆಚ್ ಡಿಎಫ್ ಸಿ ಬ್ಯಾಂಕ್ ನ ಕ್ಲಸ್ಟರ್ ಹೆಡ್ ರವಿ ಸುರಪುರ ಅವರು ಮಾತನಾಡಿ ನಮ್ಮ ಬ್ಯಾಂಕ್ ಭಾರತ ಮಾತ್ರವಲ್ಲ ಪ್ರಪಂಚದಾದ್ಯಂತ ಕಾರ್ಯನಿರ್ವಹಿಸುತ್ತಿದ್ದು ಅಂತರ ರಾಷ್ಟ್ರೀಯ ಬ್ಯಾಂಕ್ ಆಗಿದೆ. ಇತರ ಸೇವೆಗಳಿಗಿಂತ ಗುಣಮಟ್ಟದ ಸೇವೆಯನ್ನು ನೀಡುತ್ತಿದ್ದೇವೆ. ರಾಷ್ಟ್ರ, ರಾಜಧಾನಿ, ಜಿಲ್ಲಾ, ತಾಲೂಕು ಮಾತ್ರವಲ್ಲದೆ ಗ್ರಾಮೀಣ ಭಾಗದಲ್ಲೂ ಶಾಖೆಯನ್ನು ಪ್ರಾರಂಭಿಸಿ ಜನರಿಗೆ ಸೇವೆ ನೀಡುತ್ತಿದ್ದೇವೆ. ಇಲ್ಲಿ ಮನೆ, ಆಸ್ತಿ, ಬೆಳೆ, ವ್ಯಾಪಾರ, ಸೇರಿದಂತೆ ಇತ್ಯಾದಿ ಸೇವೆಗಳನ್ನು ಗ್ರಾಹಕರು ಪಡೆಕೊಳ್ಳಬಹುದು. ಯಾದಗಿರಿ ಜಿಲ್ಲೆಯಲ್ಲಿ ನಮ್ಮ ಬ್ಯಾಂಕ್ ವ್ಯವಹಾರ ಉತ್ತಮವಾಗಿದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಸುಭಾಷ್ ಕಟಕಟಿ, ಗ್ರಾಪಂ ಅಧ್ಯಕ್ಷ ಶಂಕ್ರಪ್ಪ, ಪಿಡಿಓ ಗಿರಿಮಲ್ಲಣ್ಣ, ವಲಯ ಮುಖ್ಯಸ್ಥರಾದ ರಾಮನಾರಾಯಣ, ಪ್ರಾದೇಶಿಕ ಮುಖ್ಯಸ್ಥರದ ಜಾರ್ಜ ಡಾ.ಕೋಸ್ಟಾ,ಶಾಖಾ ಮುಖ್ಯಸ್ಥರಾದ ಸಂತೋಷ ಕುಮಾರ ಸೇರಿದಂತೆ ಮುಂತಾದವರಿದ್ದರು.

ಶಾಸಕ ಕಂದಕೂರ ಜನಪರ ಕಾಳಜಿ ಶ್ಲಾಘನೀಯ

ಸರಕಾರದ ವಿವಿಧ ಯೋಜನಗಳ ಅಡಿಯಲ್ಲಿ ಜನರಿಗೆ ಮಂಜೂರಾದ ಸಾಲ, ಮತ್ತಿತರ ಸೌಲಭ್ಯಗಳನ್ನು ನೀಡುವಲ್ಲಿ ವಿಳಂಬವಾದರೆ ಕೂಡಲೇ ಗುರುಮಠಕಲ್ ಶಾಸಕ ಶರ-ಣಗೌಡ ಕಂದಕೂರ ಅವರ ಕರೆ ಬರುತ್ತೆ, ಕೆಲಸ ಆಗುವವರೆಗೂ ಅವರು ನಮ್ಮನ್ನು ಸುಮ್ಮನಿರಲು ಬಿಡುವುದಿಲ್ಲ, ಇಡೀ ಜಿಲ್ಲೆಯ ಎಲ್ಲಾ ಶಾಸಕರಿಗಿಂತಲೂ ಗುರುಮಠಕಲ್ ಶಾಸಕರ ಕರೆಗಳು ಹೆಚ್ಚಿರುತ್ತವೆ. ಇಲ್ಲಿನ ಜನರ ಬಗ್ಗೆ ಅವರಿಗಿರುವ ಕಾಳಜಿ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಭೀಮರಾವ್ ಪಂಚಾಳ ಅವರು ತಿಳಿಸಿದರು.

## ಹೈಯ್ಯಾಳಲಿಂಗೇಶ್ವರ ಜಾತ್ರೆಯಲ್ಲಿ ಪ್ರಾಣಿ ಬಲಿ, ಮದ್ಯಪಾನ, ಮದ್ಯ ಮಾರಾಟ ನಿಷೇಧಾಜ್ಞೆ ಜಾರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 06 : ಜಿಲ್ಲೆಯ ವಡಗೇರಾ ತಾಲ್ಲೂಕಿನ ಹೈಯ್ಯಾಳ (ಬಿ) ಗ್ರಾಮದಲ್ಲಿ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರೆಯಲ್ಲಿ ಪ್ರಾಣಿ ಬಲಿ ಹಾಗೂ ಮದ್ಯಪಾನ ಮತ್ತು ಮದ್ಯ ಮಾರಾಟ 2025ರ ಆಗಸ್ಟ್ 9 ರಿಂದ 13ರ ಮಧ್ಯರಾತ್ರಿ ವರೆಗೆ ನಿಷೇಧ ಆದೇಶವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಹೊರಡಿಸಿದ್ದಾರೆ.

ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ 2020ರ ಹಾಗೂ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಪ್ರಕಾರ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ವಡಗೇರಾ ತಾಲ್ಲೂಕಿನ ಹೈಯ್ಯಾಳ (ಬಿ) ಗ್ರಾಮದಲ್ಲಿ 2025ರ ಆಗಸ್ಟ್ 9 ರಿಂದ 13ರ ವರೆಗೆ ನಡೆಯಲಿರುವ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರೆಯಲ್ಲಿ ದೇವರ ಹೆಸರಲ್ಲಿ ಪ್ರಾಣಿ ಬಲಿ ಅಂದರೆ ಕುರಿ ಮತ್ತು ಕೋಣ ಬಲಿ ಕೊಡುವುದನ್ನು 2025ರ ಆಗಸ್ಟ್ 9 ರಿಂದ 13ರ ವರೆಗೆ ಶ್ರೀ ಹೈಯ್ಯಾಳಲಿಂಗೇಶ್ವರ ದೇವಸ್ಥಾನದ 5 ಕಿ.ಮೀ. ವ್ಯಾಪ್ತಿಯಲ್ಲಿ ಕಟ್ಟುನಿಟ್ಟಾಗಿ ನಿಷೇಧಿಸಿ ಹಾಗೂ ಮದ್ಯಪಾನ ಮತ್ತು ಮದ್ಯ ಮಾರಾಟ ನಿಷೇಧಿಸಿ ಈ ಕೆಳಗಿನ ಅಂಶಗಳನ್ನು ಅನುಸರಿಸಲು ಆದೇಶಿಸಿದೆ.

ಯಾವುದೇ ಕಾರಣಕ್ಕೂ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ, 2020ರ ಉಲ್ಲಂಘನೆ ಆಗದಂತೆ ನೋಡಿಕೊಳ್ಳಬೇಕು. ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಹೈಯ್ಯಾಳ (ಬಿ) ಗ್ರಾಮದಲ್ಲಿ 2025ರ ಆಗಸ್ಟ್ 9 ರಿಂದ 13ರ ವರೆಗೆ ಶ್ರೀ ಹೈಯ್ಯಾಳಲಿಂಗೇಶ್ವರ ದೇವಸ್ಥಾನದ 5 ಕಿ.ಮೀ ಸುತ್ತಮುತ್ತಲಿನ ವ್ಯಾಪ್ತಿಯಲ್ಲಿ ಶ್ರೀ ಹೈಯ್ಯಾಳಲಿಂಗೇಶ್ವರರ ಜಾತ್ರೆಯಲ್ಲಿ ದೇವರ ಹೆಸರಲ್ಲಿ ಪ್ರಾಣಿ ಬಲಿ ಕೊಡುವುದನ್ನು ನಿಷೇಧಿಸುವ ಸಂಬಂಧವಾಗಿ ಈ ಗ್ರಾಮದ ಸುತ್ತಲೂ ಚೆಕ್ ಪೋಸ್ಟಳನ್ನು ನಿರ್ಮಿಸಿ ಯಾರೂ ಪ್ರಾಣಿಗಳನ್ನು ಗ್ರಾಮದ ಒಳಗಡೆ ತೆಗೆದುಕೊಂಡು ಬರದಂತೆ ತಡೆಹಿಡಿಯಲು ಹಾಗೂ ಬಲಿ ಕೊಡುವುದನ್ನು ಕಡ್ಡಾಯವಾಗಿ ತಡೆಹಿಡಿಯುವಂತೆ ಕ್ರಮ ವಹಿಸಬೇಕು. ಈ ಗ್ರಾಮದಲ್ಲಿ ಈ ಕಾಯ್ದೆಯನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಸಂಬಂಧಿಸಿದ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹೈಯ್ಯಾಳ (ಬಿ) ಇವರಿಗೆ ವಹಿಸಿಕೊಡಲಾಗಿದೆ. ಗ್ರಾಮದಲ್ಲಿ ಸೂಕ್ತ ಪೊಲೀಸ್ ಬಂದೊಬಸ್ತ್ ಒದಗಿಸಲು ಹಾಗೂ ಮುಂಜಾಗೃತ ಕ್ರಮಕೈಗೊಳ್ಳಬೇಕು, ಯಾದಗಿರಿ ಜಿಲ್ಲಾ ಪೊಲೀಸ್ ಅಧೀಕ್ಷಕರು, ಯಾದಗಿರಿ ಸಹಾಯಕ ಆಯಕ್ತರು, ಯಾದಗಿರಿ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ ಉಪ ನಿರ್ದೇಶಕರು, ವಡಗೇರಾ ತಹಸೀಲ್ದಾರರು, ವಡಗೇರಾ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಇವರಿಗೆ ನಿರ್ದೇಶಿಸಿ ಆದೇಶಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಆಹಾರ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 06-2025ರ ಆಗಸ್ಟ್ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಯಾದಗಿರಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 14 ಕೆ.ಜಿ ಅಕ್ಕಿ ಮತ್ತು 21 ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್. ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 02 ಕೆ.ಜಿ ಅಕ್ಕಿ ಮತ್ತು 03 ಕೆ.ಜಿ ಜೋಳ ಮತ್ತು ರಾಜ್ಯ ವ್ಯಾಪ್ತಿಯ ಪಡಿತರ ಚೀಟಿ-ದಾರರಿಗೆ 5 ಕೆ.ಜಿ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಕೇಂದ್ರ, ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಅನೀಲ ಕುಮಾರ ಡವಳಗಿ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 5 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ ರಾಜ್ಯ, ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ಸಹಾಯವಾಣಿ ಸಂ-ಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬೇಕು. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಅಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗಳಿಸಲಾವುದೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಸೌಲಭ್ಯ ಒದಗಿಸುವ ಕುರಿತು ನಡೆದ ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ

## ಕೈಗಾರಿಕಾ ಪ್ರದೇಶಗಳಲ್ಲಿ ಸೌಲಭ್ಯ ಒದಗಿಸಿ, ಉತ್ತೇಜಿಸಿ: ಹರ್ಷಲ್ ಭೋಯರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಆಗಸ್ಟ್ 06-ಜಿಲ್ಲೆಯ ಕೈಗಾರಿಕಾ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಾದ ರಸ್ತೆ ಸೇರಿದಂತೆ ವಿವಿಧ ಸೇವೆಗಳು ಹಾಗೂ ಸೌಲಭ್ಯಗಳನ್ನು ಒದಗಿಸಿ ಕೈಗಾರಿಕಾ ವಲಯವನ್ನು ಉತ್ತೇಜಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಗಸ್ಟ್ 5ರ ಮಂಗಳವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕಡೇಚೂರು-ಬಾಡಿಯಾಳ ಕೈಗಾರಿಕಾ ಪದೇಶದಲ್ಲಿ ವಿವಿಧ ಸೌಲಭ್ಯ ಒದಗಿಸುವ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಜಿಲ್ಲೆಯ ಕೈಗಾರಿಕೆ ಪ್ರದೇಶದಲ್ಲಿ ಕೈಗಾರಿಕೆಗಳು ಸುಗಮವಾಗಿ ಕಾರ್ಯನಿರ್ವಹಿಸಲು ಮತ್ತು ಈ ಪ್ರದೇಶದ ಸುತ್ತ-ಮುತ್ತ ವಾಸವಿರುವ ಸಾರ್ವಜನಿಕರ ಆರೋಗ್ಯ ಮತ್ತು ಪರಿಸರ ಮಾಲಿನ್ಯ ತಡೆಯುವ ನಿಟ್ಟಿನಲ್ಲಿ ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು ಎಂದು ಸೂಚಿಸಿದರು.

ಯಾವುದೇ ತರಹದ ವಾಹನಗಳು ಕೆಮಿಕಲ್ ತ್ಯಾಜ್ಯವನ್ನು ವಿಲೇವಾರಿ, ಮಾಡುವುದು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಕೈಗಾರಿಕೆ ಪ್ರದೇಶ ರಾಷ್ಟ್ರೀಯ ಹೆದ್ದಾರಿಯ ಎರಡು ಬದಿಯಲ್ಲಿ ಪೋಲಿಸ್ ಕಾವುಲು ನೇಮಿಸಿ ಗಸ್ತು ಮಾಡಲು ಕ್ರಮವಹಿಸಬೇಕು.

ಈ ಕೈಗಾರಿಕೆ ಪ್ರದೇಶದಲ್ಲಿ ಭಾರಿವಾಹನಗಳು ವಿಶೇಷವಾಗಿ ತ್ಯಾಜ್ಯ ನೀರು, ಅಪಾಯಕಾರಿ ತ್ಯಾಜ್ಯ ಮತ್ತು ಇತರೆ ಕೆಮಿಕಲ್ ಸಾಗಿಸುವ ವಾಹನಗಳು ಒಂದೇ ಗೇಟಿನ ಮೂಲಕ ಒಳ ಮತ್ತು ಹೊರಗೆ ಚಲಿಸಲು ಒಂದು ನಿರ್ದಿಷ್ಟ ಗೇಟ್‌ನ್ನು ಅಳವಡಿಸಬೇಕು ಎಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸತೀಶ್ ಕುಮಾರ್, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಖಿಲ ಕರ್ನಾಟಕ ಡಾ ಜಿ ಪರಮೇಶ್ವರ್ ಯುವ ಸೈನ್ಯ. ಹುಟ್ಟು ಹಬ್ಬವನ್ನು ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ತಾಲೂಕಿನ ಕರ್ನಾಟಕ ಡಾಕ್ಟರ್ ಜಿ ಪರಮೇಶ್ವರ್ ಯುವ ಸೇನೆ ವತಿಯಿಂದ ಕರ್ನಾಟಕ ಸರ್ಕಾರದ ಗೃಹ ಮಂತ್ರಿಗಳಾದ ಡಾ ಜಿ ಪರಮೇಶ್ವರ 74 ನೆ ಹುಟ್ಟು ಹಬ್ಬದ ಪ್ರಯುಕ್ತ ನನ್ನ ಸ್ವಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದ್ದು ಇಂದು ಶಹಾಪುರ ವಿಧಾನಸಭಾ ಕ್ಷೇತ್ರದ ರಸ್ತಾಪುರ ಗ್ರಾಮದಲ್ಲಿ ಅಖಿಲ ಕರ್ನಾಟಕ ಜಿ ಪರಮೇಶ್ವರ ಸೈನ್ಯವು ಕರ್ನಾಟಕ ಸರ್ಕಾರದ ಗೃಹ ಮಂತ್ರಗಳಾದ ಡಾ.ಜಿ ಪರಮೇಶ್ವರ ಹುಟ್ಟು ಹಬ್ಬದ ನಿಮಿತ್ಯವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಮತ್ತು ಅನ್ನ ಸಂತರ್ಪಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸುತ್ತಮುತ್ತಲಿನ ಗ್ರಾಮಸ್ಥರು ನೂರಾರು ಸಂಖ್ಯೆಯಲ್ಲಿ ಆರೋಗ್ಯ ತಪಾಸಣಾ ಮಾಡಿಸಿಕೊಂಡು 80ಕ್ಕಿಂತ ಹೆಚ್ಚು ಜನರಿಗೆ ಕಣ್ಣಿನ ಪರೀಕ್ಷೆ ಮಾಡಿ ಉಚಿತ ಕನ್ನಡಕ ನೀಡಲಾಯ್ತು ಇದೊಂದು ಅದ್ಭುತ ಕಾರ್ಯಕ್ರಮ ಎಂದು ವೇದಿಕೆ ಮೇಲಿದ್ದ ಗಣ್ಯರು ನುಡಿದರು ಈ ಸಂದರ್ಭದಲ್ಲಿ ಡಾ ಶರಣು ಗದ್ದುಗೆ ಡಾ ಚಂದ್ರಶೇಖರ ಸುಬೇದಾರ್ ಮುಖ್ಯ ಅತಿಥಿಗಳು ಡಾ ಭೀಮಣ್ಣ ಮೇಟಿ ಭೀಮರಾಯ ಟಿ ಬಡಿಗೇರ್ ಸಿದ್ದಣ್ಣ ಟನಕೇದಾರ ರಾಜು ಮಾಡಗಿ ಶ್ರೀ ದೇವಿ ಅಮರಪ್ಪ ಗ್ರಾಮ ಪಂಚಾಯತ್ ಅಧ್ಯಕ್ಷರು ಬಸವರಾಜ ಬ್ಯಾಲ್ಯಾಳ ಮಲ್ಲಣ್ಣಗೌಡ ಪೋ ಪಾಟೀಲ್ ಹೊನ್ನಪ್ಪ ಹೊಸ್ಮನಿ ಶಿವು ಕುಮಾರ ತಳವಾರ ಸುಭಾಷ್ ಳತವಾರ ಶರಣು ದೋರನಹಳ್ಳಿ ನಿಂಗಣ ನಾಟೇಕಾರ ಭೀಮಣ್ಣ ಮಂಡಗಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು ಚಂದ್ರಕಾಂತ್ ಬಜೇರಿ ಮೌನೇಶ್ ಪುನೇಕರ್ ದೇವಿಂದ್ರ ಹುಲ್ಕಲ್ ಮಲ್ಲಿಕಾರ್ಜುನ ಶಹಾಪೂರ ನಿರುಪಿಸಿದರು ಭೀಮರಾಯ ಹೊಸ್ಮನಿ ಸ್ವಾಗತಿಸಿದರು ಮೌನೇಶ್ ಬಿರನೂರ್ ವಂದಿಸಿದರು ಮಹಿಬುಬ್ ವೈದ್ಯಾದಿಕಾರಿಗಳು ಮತ್ತು ಸಿಬ್ಬಂದಿಗಳು ಶಿಬಿರದಲ್ಲಿ ಭಾಗವಹಿಸಿದರು ಮತ್ತು ಕಾರ್ಯಕ್ರಮಕ್ಕೆ ಪೋಲಿಸ್ ಬಂದೋಬಸ್ತ್ ವದಗಿಸಿದ ಪೋಲಿಸ್ ಇಲಾಖೆಗೂ ಎಲ್ಲಾ ಮೀಡಿಯಾ ಮತ್ತು ಪತ್ರಕರ್ತರಿಗೂ ಭಾಗವಹಿಸಿದರು ಅದ್ಯಕ್ಷತೆ ಮಲ್ಲಿಕಾರ್ಜುನ ಆರ್ಬೋಳ ವಹಿಸಿದ್ದರು...

## ಗೃಹ ಸಚಿವರಾಗಿ ಅಮಿತ್ ಶಾ ಹೊಸ ದಾಖಲೆಯನ್ನು ಸೃಷ್ಟಿ: ಕು.ಲಲಿತಾ ಅನಪುರ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾರತದ ಇತಿಹಾಸದಲ್ಲಿ ಅತ್ಯಂತ ದೀರ್ಘಾವಧಿಯ ಗೃಹ ಸಚಿವರಾಗಿ ಹೊಸದಾಖಲೆಯನ್ನು ಸೃಷ್ಟಿಸಿದ್ದಾರೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ ಹೇಳಿದರು.

ಅಮಿತ್ ಶಾ ಅವರು ಮೇ 30, 2019 ರಿಂದ ಭಾರತದ ಗೃಹ ಸಚಿವರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಗೋವಿಂದ ವಲ್ಲಭ ಪಂತ್ ಮತ್ತು ಲಾಲ್ ಕೃಷ್ಣ ಅಡ್ವಾಣಿ ಅವರ ದಾಖಲೆಗಳನ್ನು ಹಿಂದಿಕ್ಕಿ ಅತಿ ಹೆಚ್ಚು ಕಾಲ ಗೃಹ ಸಚಿವರಾಗಿ ಸೇವೆ ಸಲ್ಲಿಸಿದ ಕೀರ್ತಿಗೆ ಪಾತ್ರರಾಗಲಿದ್ದಾರೆ. ಲಾಲ್ ಕೃಷ್ಣ ಅಡ್ವಾಣಿ ಅವರ 6 ವರ್ಷ 64 ದಿನಗಳ ಹಾಗೂ ಗೋವಿಂದ ವಲ್ಲಭ ಪಂತ್ ಅವರ 6 ವರ್ಷ 56 ದಿನಗಳ ದಾಖಲೆಯನ್ನು ಮುರಿದಿದ್ದಾರೆ.

ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಮತ್ತು ರಾಷ್ಟ್ರೀಯ ನಾಗರಿಕರ ನೋಂದಣಿ (ಎನ್ಆರ್‌ಸಿ) ಅನುಷ್ಠಾನ ಅವರ ಕೆಲವು ಗಮನಾರ್ಹ ಉಪಕ್ರಮಗಳಾಗಿವೆ. ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ 370 ನೇ ವಿಧಿಯನ್ನು ರದ್ದುಗೊಳಿಸುವಲ್ಲಿ ಶಾ ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಅಮಿತ್ ಶಾ ಅವರ ನಾಯಕತ್ವದಲ್ಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಚಟುವಟಿಕೆಗಳಲ್ಲಿ ಗಮನಾರ್ಹ ಇಳಿಕೆ ಮತ್ತು ಅಭಿವೃದ್ಧಿ ಯೋಜನೆಗಳಲ್ಲಿ ಹೆಚ್ಚಳ ಕಂಡುಬಂದಿದೆ.

## ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತರ ಸೇನೆ ನೂತನ ಗ್ರಾಮ ಘಟಕ ಪದಾಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಆ, 05, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತರ ಸೇನೆ ತಾಲೂಕ ಘಟಕ ಸೇಡಂ ವತಿಯಿಂದ ಕಾನಗಡ್ಡ ಗ್ರಾಮ ಘಟಕ ನೂತನ ಪದಾಧಿಕಾರಿಗಳ ನೇಮಕ ಮಾಡಲಾಯಿತು. ಅದ್ಯಕ್ಷರಾಗಿ ಭೀಮಾಶಂಕರ್ ಉಪಾಧ್ಯಕ್ಷರಾಗಿ ಶಿವಕುಮಾರ್ ಕಾರ್ಯದರ್ಶಿಯಾಗಿ ಮಲ್ಲೇಶ್. ಇವರನ್ನು ತಾಲೂಕ ಅಧ್ಯಕ್ಷರಾದ ಅನಿಲ್ ಪೋಟೇಲಿ ಇವರ ನೇತೃತ್ವದಲ್ಲಿ ನೇಮಕ ಮಾಡಿ ಆದೇಶ ಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ತಾಲೂಕ ಉಪಾಧ್ಯಕ್ಷರಾದ ಇಮ್ರಾನ್ ಶೇಖ್, ತಾಲೂಕ ಖಜಾಂಚಿ ನರಹರಿ, ಮುಧೋಳ್ ಹೋಬಳಿ ಅಧ್ಯಕ್ಷರಾದ ಸಾಬಪ್ಪ ಅಬ್ಬಾಗಳ, ಕಾಶಪ್ಪ, ಬಸವರಾಜ್ ಸೇರಿದಂತೆ ರೈತರ ಬಾಂಧವರು ಭಾಗಿಯಾಗಿದ್ದರು.

## ನಾಯಕ ಸಮುದಾಯದ ಯುವಕನ ಕೊಲೆ ಪ್ರಕರಣ, ಕೊಪ್ಪಳ ಬಂದಗೇ ಜೆಡಿಎಸ್ ಪಕ್ಷದದಿಂದ ಬೆಂಬಲ:ರಮೇಶ ಡಂಬ್ರಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರದಲ್ಲಿ ಹಿಂದೂ ವಾಲ್ಮೀಕಿ ಯುವಕನ ಕೊಲೆ ಮಾಡಿದ ಸಾಧಿಕ್ ಕೊಲ್ಕಾರ ಮತ್ತು ಅವರ ಸಂಗಡಿಗರನ್ನು ಮಂಪರುಪರೀಕ್ಷೆಗೆಒಳಪಡಿಸಿದಾಗ ಕೊಲೆಯ ಹಿಂದಿನ ಸತ್ಯವನ್ನ ತಿಳಿಯಲುಸಾಧ್ಯ.ಎಂದುಜೆಡಿಎಸ್ ಪರಿಶಿಷ್ಟಪಂಗಡದ ಜಿಲ್ಲಾ ಅಧ್ಯಕ್ಷ ರಮೇಶ ಡಂಬ್ರಳ್ಳಿ ಬುಧವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಶಿ ಮಾತನಾಡಿದ ಇವರು.

ಕೊಲೆ ಮಾಡಿದ ಯುವಕರ ಗುಂಪು ಗಾಂಜ ಸೇವನೆ. ಬೈಕ್ ವೀಲಿಂಗ್. ಇನ್ನಿತರ ಅಪರಾಧ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವುದರಿಂದ ಕೊಲೆಗಾರರ ಅಪರಾಧ ಮನೋಭಾವನೆ ತೋರುತ್ತದೆ.

ದುಡಿವ ವಯಸ್ಸಿನ ಯುವಕ ಹೀಗೆ ಕೊಲೆಯಾಗಿದ್ದು ನೋವು ತಂದಿದೆ. ಕೊಪ್ಪಳ ಜಿಲ್ಲೆ ಎಲ್ಲಾ ಸಮಾಜದವರು ಶಾಂತಿಯಿಂದ ಹೊಂದಿಕೊಂಡಿರುವ ಕೊಪ್ಪಳ ಜಿಲ್ಲೆಹೆಸರುವಾಸಿಯಾಗಿದೆ. ಇಂಥ ಘೋರ ಘಟನೆ. ಹತ್ಯೆ, ಕೊಲೆ ಹಿಂದೆಂದೂ ನಡೆದಿರಲಿಲ್ಲ. ಕಾರಣ ಏನೇ ಇದ್ದರೂ ಕೊಲೆ ಮಾಡುವಂಥ ಘಟನೆ ಅಗಬಾರದಿತ್ತು. ಕುಟುಂಬದಲ್ಲಿ ಇದ್ದ ಒಬ್ಬ ಮಗನನ್ನು ಕಳೆದುಕೊಂಡು ಅವರೆಲ್ಲ ಅನಾಥರಾಗಿದ್ದಾರೆ. ಎರಡು ಕೋಮಿನ ಜನರು ಶಾಂತಿ ಕಾಪಾಡಬೇಕು. ಪೊಲೀಸರು ಕೊಲೆ ಮಾಡಿದವರನ್ನು ಬಂಧಿಸಿದ್ದಾರೆ ಅವರಿಗೆ ಗಲ್ಲಿಗೇರಿಸಬೇಕು. ಕೊಪ್ಪಳ ಜಿಲ್ಲೆಯಲ್ಲಿ ಮುಂದೆ ಇಂತಹ ಯಾವುದೇ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ಕಟ್ಟೆಚ್ಚರವಹಿಸಬೇಕು. ಕೊಪ್ಪಳ ಜಿಲ್ಲೆ ಶಾಂತಿ ಕಾಪಾಡುವ ಕೆಲಸ ಮಾಡಬೇಕು. ಯುವಕನ ಕುಟುಂಬಕ್ಕೆ ನ್ಯಾಯ ಒದಗಿಸಬೇಕು.

ಅಮಾಯಕ ಗವಿಸಿದ್ದಪ್ಪ ನಾಯಕನನ್ನು ಬರ್ಬರವಾಗಿ ಕತ್ತುಕೊಯ್ದು ಕೊಪ್ಪಳ ನಗರವನ್ನ ಭಯಭೀತರನ್ನಾಗಿ ಮಾಡಿದ್ದಾರೆ. ಶಾಂತಿಯುತವಾಗಿದ್ದ ನಗರ ಜೀವನವನ್ನು ಕಲುಷಿತ ಮಾಡಿ ಜನರ ಮಧ್ಯೆ ಅಪನಂಬಿಕೆ ಉಂಟಾಗುವಂತೆ ಮಾಡಿದ್ದಾರೆ.

ಈ ಪ್ರಕರಣದಲ್ಲಿ ಕೊಲೆ ಮಾಡಲು ಸಹಕರಿಸಿದ ಎಲ್ಲರನ್ನೂ ಪೊಲೀಸ್ ಅಧಿಕಾರಿಗಳು ಬಂಧಿಸಬೇಕೆಂದು ಮತ್ತು ಅವರಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಕಾನೂನು ಸೂಕ್ತಕ್ರಮ ಕೈಗೊಳ್ಳಬೇಕು ದಿನಾಂಕ:08–08–2025ರಂದು ರಂದು ನಡೆಯುವ ಯುವಕನ ಕೊಲೆ ಪ್ರಕರಣ ಸಂಬಂಧಿಸಿದಂತೆ ಕೊಪ್ಪಳ ಬಂದ್ ಪ್ರತಿಭಟನೆಯಲ್ಲಿ ನಮ್ಮ ಜೆಡಿಎಸ್ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಲು ತೀರ್ಮಾನಿಸಿದ್ದೇವೆ ಎಂದು ಹೇಳಿದರು. ಈ ಸಂಧರ್ಭದಲ್ಲಿ, ಶರಣಪ್ಪ ಜಡಿ ಜೆಡಿಎಸ್ ಪ್ರಧಾನ ಕಾರ್ಯದರ್ಶಿ, ಮಂಜುನಾಥ ಸೊರಟುರು ಅಧ್ಯಕ್ಷರು ಜೆಡಿಎಸ್ ಸಂಸ್ಕೃತಿ ವಿಭಾಗ, ಸೋಮನಗೌಡ ಹೊಗರನಾಳ ಜೆಡಿಎಸ್ ನಗರ ಘಟಕ, ಅಧ್ಯಕ್ಷ, ರವಿಕುಮಾರ್ ಮೇದಾರ, ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

## ಆ.12 ರಂದು ಶ್ರೀ ಕರಿಮಾರೆಮ್ಮ ದೇವಸ್ಥಾನದ ವಾರ್ಷಿಕ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.06–ನಗರದ ಶ್ರೀ ಕರಿಮಾರೆಮ್ಮ ದೇವಸ್ಥಾನದ ವಾರ್ಷಿಕ ಜಾತ್ರಾ ಮಹೋತ್ಸವವು ಆಗಸ್ಟ್ 12 ರಂದು ಮಂಗಳವಾರ ಜರುಗಲಿದೆ.

ಅಂದು ಬೆಳಿಗ್ಗೆ 08.30 ಗಂ–ಟೆಗೆ ಪ್ರತಿ ವರ್ಷದಂತೆ ಕೌಲ್ ಬಜಾರ್‌ನ ಮುಖ್ಯರಸ್ತೆಯಿಂದ ಶ್ರೀ ಕರಿಮಾರೆಮ್ಮನವರ ಉತ್ಸವ ಪ್ರಾರಂಭಗೊಂಡು ಮಧ್ಯಾಹ್ನ ದೇವಸ್ಥಾನಕ್ಕೆ ತಲುಪುತ್ತದೆ.

ಅಂದು ಸಂಜೆ 04 ಗಂಟೆಯ ನಂತರ ಮಹಾಕುಂಭ ಜಲ ಉತ್ಸವ ಜರುಗುತ್ತದೆ. ಉತ್ಸವದಲ್ಲಿ ಡೊಳ್ಳು ಕುಣಿತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಭಕ್ತಾಧಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಹಿಂದೂ ಧಾರ್ಮಿಕ ದತ್ತಿಗಳ ಇಲಾಖೆಯ ಸಹಾಯಕ ಆಯುಕ್ತರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಆ.7 ರಂದು ಜಿಲ್ಲಾ ಮಟ್ಟದ ಜನನ ಮರಣ ನೋಂದಣಿ ಸಮನ್ವಯ ಸಮಿತಿಯ ಸಭೆ ಸೂಚನೆ

ಯಾದಗಿರಿ : ಆಗಸ್ಟ್ 06, (ಕ.ವಾ) : ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ಜನನ ಮರಣ ನೋಂದಣಿ ಸಮನ್ವಯ ಸಮಿತಿಯ ಮೊದಲನೇಯ ತ್ರೈಮಾಸಿಕ ಸಭೆಯನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯಲ್ಲಿ 2025ರ ಆಗಸ್ಟ್ 7 ರಂದು ಸಂಜೆ 5 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

2025ರ ಆಗಸ್ಟ್ 7 ರಂದು ಜನನ ಮರಣ ನೋಂದಣಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಪದಾಧಿಕಾರಿಗಳಾದ ತಾವುಗಳು ಸಭೆಗೆ ಪ್ರತಿನಿಧಿಗಳನ್ನು ನಿಯೋಜಿಸದೇ ತಾವೇ ಖುದ್ದಾಗಿ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗಸ್ಟ್ 8 ರಂದು ಪ್ರೊ. ಕೃಷ್ಣಪ್ಪ ರವರ 88 ನೇ ಜನ್ಮದಿನಾಚರಣೆ.! ಬಳ್ಳಾರಿಯಲ್ಲಿ ರಾಜ್ಯ ಮಟ್ಟದ ಸ್ವಾಭಿಮಾನ ಸಂಘರ್ಷ ಚೈತನ್ಯ ಸಮಾವೇಶ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಎರಡನೇ ಅಂಬೇಡ್ಕರ್ ಎಂದೇ ಹೆಸರು ವಾಸಿಯಾಗಿರುವ ಪ್ರೊ. ಬಿ ಕೃಷ್ಣಪ್ಪ ರವರ 88 ನೇ ಜನ್ಮ ದಿನಾಚರಣೆ ಅಂಗವಾಗಿ ಕಾರ್ಯಕರ್ತರ ರಾಜ್ಯ ಮಟ್ಟದ ಸ್ವಾಭಿಮಾನ ಸಂಘರ್ಷ ಚೈತನ್ಯ ಸಮಾವೇಶ ಬಳ್ಳಾರಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸ್ವಾಭಿಮಾನಿ ಬಿ ಕೃಷ್ಣಪ್ಪ ಬಣ)ದ ಜಿಲ್ಲಾಧ್ಯಕ್ಷ ಪರಶುರಾಮ್ ಕೇರಹಳ್ಳಿ, ಬುಧವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿ.

ಕರ್ನಾಟಕದಲ್ಲಿ 70ರ ದಶಕದಲ್ಲಿ ದಲಿತರ ಮೇಲೆ ಜಾತಿ ಬೇದ, ಲಿಂಗಭೇದ ದೌರ್ಜನ್ಯ ದಬ್ಬಾಳಿಕೆಗಳು ಉತ್ತುಂಗ ಸ್ಥಿತಿಯಲ್ಲಿದ್ದ ಸಂದರ್ಭ ದಲಿತರ ಭೂಬಳಕೆ ದಲಿತ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಸಾಮಾಜಿಕ ಅಸಮಾನತೆ ಸಜೀವ ದಹನ ನೋಡಿ ಸಹಿಸದ ಅಸ್ಪೃಶ್ಯತೆಯನ್ನ ಅನುಭವಿಸಿ, ಸಿಡಿದೆದ್ದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿ ಸಿದ್ದಿಪುರ ಬೂಹೋರಾಟ ಚಂದ್ರಗುತ್ತಿ ಬೆತ್ತಲೆ ಸೇವೆ ದೇವದಾಸಿ ಪದ್ಧತಿ, ಕುಂಬಾರ ಅನುಸೂಯಮ್ಮಳ ಅತ್ಯಾಚಾರ ವಿರೋಧಿಸಿದ ತಂದೆ ಶೇಷಗಿರಿಯಪ್ಪನ ಕೊಲೆ ಮಾಡಿ ಸಟ್ಟುಹಾಕ್ಕಿದ್ದನ್ನು ಖಂಡಿಸಿ ಹಲವಾರು ಹೋರಾಟಗಳನ್ನು ರೂಪಿಸಿ ನೊಂದ ದೌರ್ಜನ್ಯಕೊಳಗಾದವರಿಗೆ ದನಿಯಾಗಿ ಭೂಮಾಲೀಕರು ಬಂಡವಾಳಶಾಹಿಗಳಿಗೆ ಹಾಗೂ ಆಳುವ ಸರ್ಕಾರಗಳಿಗೆ ಸಿಂಹ ಸ್ವಪ್ನವಾಗಿ ಕಾಡಿ ದಲಿತಪರ ಕಾನೂನುಗಳು ಜಾರಿಯಾಗಲು ಕಾರಣಕರ್ತರಾದರು ಪ್ರೋ ಬಿ. ಕೃಷ್ಣಪ್ಪ ಎಂದು ಹೇಳಿದರು.

ನಂತರ ಮಾತನಾಡಿದ ಕರ್ನಾಟಕ ರಾಜ್ಯ ಅಲೆಮಾರಿ ಸಮಾಜದ ಜಿಲ್ಲಾಧ್ಯಕ್ಷ ಸಂಜಯ್ ದಾಸ್ ಮಾತನಾಡಿ ದಲಿತರ ಗುಡಿಸಿಲುಗಳಲ್ಲಿ ಹೋರಾಟದ ಹಣತೆಯನ್ನು ಹಚ್ಚಿದ್ದೇನೆ ಜೋರಾಗಿ ಬಿರುಗಾಳಿ ಬೀಸುತ್ತಿದೆ ಹಾರದಂತೆ ನೋಡಿಕೊಳ್ಳಿ ಎಂದು ಕಾರ್ಯಕರ್ತರಿಗೆ ಕರೆಕೊಟ್ಟು ರಾಜ್ಯದ ಪ್ರತಿ ಹಳ್ಳಿ ಹಳ್ಳಿಗಳನ್ನು ಸುತ್ತಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆಯಲ್ಲಿ ಸಾಮಾಜಿಕ ಪರಿವರ್ತನ ಚಳುವಳಿಯನ್ನು ಮುನ್ನಡೆಸಿದ್ದಾರೆ.

ಅಂಬೇಡ್ಕರ ರವರ ಚಿಂತನೆ ಮತ್ತು ದಾರಿಯನ್ನ ಉಸಿರಾಗಿಸಿಕೊಂಡು ತನ್ನ ಜೀವನವನ್ನೇ ಚಳುವಳಿಗಾಗಿ ಮಾಡುಪಿಟ್ಟ ಸ್ವಾಭಿಮಾನಿ ಕೆಚ್ಚೆದೆ–ಯ ಹೋರಾಟಗಾರ ಬಿ ಕೃಷ್ಣಪ್ಪ ರವರ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ ಕಾರ್ಯಕರ್ತರಿಗೆ ಬಿ. ಕೃಷ್ಣಪ್ಪರವರ ಆದರ್ಶ ಚಿಂತನೆ ಸ್ವಾಭಿಮಾನಿ ಹೋರಾಟಗಳನ್ನು ಮೈತುಂಬಿ ಚಳುವಳಿಗೆ ಶಕ್ತಿ ತುಂಬಲು ಬಳ್ಳಾರಿಯಲ್ಲಿ ಬೃಹತ್ ಕಾರ್ಯಕರ್ತರ ರಾಜ್ಯಮಟ್ಟದ ಸಮಾವೇಶವನ್ನು ಆಚರಿಸಲಾಗಿದೆ ಈ ಕಾರ್ಯಕ್ರಮಕ್ಕೆ ಭಾಗವಹಿಸಿ ಯಶಸ್ಸಿಗೊಳಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಸ್ವಾಭಿಮಾನಿ ಬಿ ಕೃಷ್ಣಪ್ಪ ಬಣ ರಾಜ್ಯ ಸಮಿತಿ ಮನವಿ ಮಾಡುತ್ತದೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ಗವಿಸಿದ್ದಪ್ಪ ಕುಣಿ–ಕೇರಿ, ಮಾರಕಂಡೆಪ್ಪ ಹಲಗಿ, ಶರಣಪ್ಪ ಓಜನಹಳ್ಳಿ, ಶಿವು, ಮಂಜುನಾಥ್ ನಡವಲಮನಿ, ರಮೇಶ ಕೇರಹಳ್ಳಿ, ನಾಗರಾಜ್ ಹುಲಿಕೆರಿ, ಇನ್ನು ಅನೇಕರು ಉಪಸ್ಥಿತರಿದ್ದರು.

## ಸಂಜೀವಿನಿ ಒಕ್ಕೂಟಗಳಿಗೆ ವಾರ್ಷಿಕ ಕ್ರೀಯಾ ಯೋಜನೆ ಅಗತ್ಯ ಬಸವರಾಜ ಮುಂಡರಗಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಮಹಿಳಾ ಸಂಜೀವಿನಿ ಒಕ್ಕೂಟಗಳಿಗೆ ವಾರ್ಷಿಕ ಕ್ರಿಯಾ ಯೋಜನೆ ಮತ್ತು ಆಯವ್ಯಯವನ್ನು ಸಿದ್ಧಪಡಿಸಲಾಗುತ್ತದೆ ಮಹಿಳಾ ಒಕ್ಕೂಟದ ಪದಾಧಿಕಾರಿಗಳು ತರಬೇತಿ ಪಡೆದು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಸಂಪನ್ಮೂಲ ವ್ಯಕ್ತಿ ಬಸವರಾಜ ಮುಂಡರಗಿ ಹೇಳಿದರು

ಅವರು ಕೊಪ್ಪಳ ಜಿಲ್ಲೆಯ ಬುದಗುಂಪ ಗ್ರಾಮದ ಕರಿಯಮ್ಮ ದೇವಿ ಸಭಾ ಭವನದಲ್ಲಿ ಜರುಗಿದ ಹೊಸಜೀವನ ಸಂಜೀವಿನಿ ಮಹಿಳಾ ಸಂಜೀವಿನಿ ಒಕ್ಕೂಟಗಳ ದೂರದೃಷ್ಟಿ ಹಾಗೂ ವ್ಯಾಪಾರ ಅಭಿವೃದ್ಧಿ ತಯಾರಿಕಾ ಕಾರ್ಯಗಾರದ ವಾರ್ಷಿಕ ಕ್ರೀಯಾ ಯೋಜನೆಯ ತರಬೇತಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದರು

ಒಕ್ಕೂಟಕ್ಕೆ ದೂರದೃಷ್ಠಿ ಹಾಗೂ ವ್ಯಾಪಾರ ಅಭಿವೃದ್ಧಿ ತಯಾರಿಕಾ ಕಾರ್ಯಗಾರದ ಕುರಿತು ಮೂರು ಹಂತಗಳ ತರಬೇತಿ ಮುಕ್ತಾಯವಾಗಿದ್ದು ಪ್ರತಿ ಗ್ರಾಮಗಳ ಸ್ವಸಹಾಯ ಸಂಘಗಳ ಸದಸ್ಯರು ಅಭಿವೃದ್ಧಿಯಾಗಬೇಕಾದರೆ ಅವರೇ ತಯಾರಿಸಿದ ಆಯಾಮಗಳ ಮತ್ತು ಸೂಚಿಕೆಗಳ ಆಧಾರದ ಮೇಲೆ ವಾರ್ಷಿಕ ಕ್ರೀಯಾ ಯೋಜನೆ ತಯಾರಿಸಿ ಸರಕಾರಕ್ಕೆ ಸಲ್ಲಿಸಲಾಗುತ್ತದೆ ಮಹಿಳೆಯರಿಗೆ ವಿವಿಧ ತರಬೇತಿ ನೀಡುವದರ ಮೂಲಕ ಸಾಮಾರ್ಥ್ಯ ಅಭಿವೃದ್ಧಿ ಹೆಚ್ಚಿಸುವದು ಒಕ್ಕೂವನ್ನು ಒಂದು ಸುಸ್ಥಿರ ಅಭಿವೃದ್ಧಿ ಸಂಸ್ಥೆಯನ್ನಗಿ ನೆಡೆಸಿಕೊಂಡು ಹೊಗುವದೆ ಇದರ ಉದ್ದೇಶವಾಗಿದೆ ಎಂದು ಹೇಳಿದರು

ಕಾರ್ಯಕ್ರಮದ ಒಕ್ಕೂಟದ ಅಧ್ಯಕ್ಷರಾದ ಲಲಿತಾ ಸಂಗಟಿ, ವಹಿಸಿದ್ದರು ಉಪಾಧ್ಯಕ್ಷ ಪಾರ್ವತೆಮ್ಮ ಚೌಡ್ಕಿ, ಅತಿಥಿಗಳಾಗಿ ಪವಿತ್ರಾ ಸಂಗಟಿ, ಎಂಬಿಕೆ ಶರಣಮ್ಮ , ಎಲ್ ಸಿ ಅರ್ ಪಿ ಪಕೀರಮ್ಮ ತರಲಕಟ್ಟಿ, ಮಂಜುಳಾ, ನಾಯಕ, ಕೃಷಿ ಸಖಿ ರೇಣುಕಾ ಇಳಗೇರ, ಪಶು ಸಖಿ ಅಬ್ಬಕ್ಕ ಜಬ್ಬಲಗುಡ್ಡಾ ಹಾಗೂ ಒಕ್ಕೂಟದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಕ್ಕಿಯಿಂದ ಕ್ಯಾನ್ಸರ್ ಬರುತ್ತೆ ಅನ್ನೋದು ಸಾಬೀತು ಪಡಿಸಲಿ :ಕೆಸರಹಟ್ಟಿ ಶರಣೆಗೌಡ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅತಿಯಾದ ರಸಾಯನಿಕ ಬಳಕೆಯಿಂದ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆಯುವ ಭತ್ತದ ಅಕ್ಕಿಯನ್ನು ತಿನ್ನುವವರಿಗೆ ಕ್ಯಾನ್ಸರ್ ಬರುತ್ತದೆ ಎಂದು ಹೇಳಿ ಸಾರ್ವಜನಿಕರನ್ನು ಭಯಭೀತಿಗೊಳಿಸಿದ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶ ಅವರು ರಸಾಯನಿಕ ಸಿಂಪರಣೆ ಮಾಡಿ ಬೆಳೆದ ಈ ಭಾಗದ ಭತ್ತದ ಅಕ್ಕಿಯನ್ನು ತಿಂದವರಿಗೆ ಕ್ಯಾನ್ಸರ್ ಬಂದಿದೆ ಎಂಬುದು ಅವರು ವೈಜ್ಞಾನಿಕವಾಗಿ ಸಾಬೀಪಡಿಸಬೇಕು. ಇಲ್ಲದಿದ್ದರೆ ಅವರ ವಿರುದ್ಧ ಉಗ್ರವಾದ ಹೋರಾಟ ನಡೆಸುತ್ತೇವೆ ಎಂದು ಅಕೀಲ ಕರ್ನಾಟಕ ಅನ್ನದಾತ ರೈತ ಸಂಘದ ರಾಜ್ಯಾಧ್ಯಕ್ಷ ಶರಣೇಗೌಡ ಕೆಸರಹಟ್ಟಿ, ಜಿಲ್ಲಾಧ್ಯಕ್ಷ ಭೀಮಸಿಂಗ್ ಕಲಿಕೇರಿ ಒತ್ತಾಯಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ರೈತರಿಗೆ ಸರಿಯಾಗಿ ಗೊಬ್ಬರ ಪೂರೈಕೆ ಮಾಡುವಲ್ಲಿ ಅವರು ನಿರ್ಲಕ್ಷ ಮಾಡಿದ್ದಾರೆ. ಗೊಬ್ಬರದ ಅಭಾವದಿಂದಾಗಿ ರೈತರು ಸಮಸ್ಯೆ ಎದುರಿಸಿ ಈಗ ಬೀದಿಗೆ ಬಂದು ಹೋರಾಟ ಮಾಡುತ್ತಿದ್ದಾರೆ. ಇದನ್ನು ಮರೆ ಮಾಚಲು ಜಂಟಿ ಕೃಷಿ ನಿರ್ದೇಶಕ ರುದ್ರೇಶ ಅವರು ಏಕಾ ಏಕಿ ಅಚ್ಚುಕಟ್ಟು ಪ್ರದೇಶದ ಭತ್ತದ ಅಕ್ಕಿಯ ವಿಷಕಾರದ ಕುರಿತು ಮಾಧ್ಯಮಗಳಿಗೆ ಬಹಿರಂಗಪಡಿಸಿದ್ದಾರೆ.

ಅವರು ಜನರಿಗೆ ತಪ್ಪು ಮಾಹಿತಿ ನೀಡಿದ್ದಾರೆ. ತುಂಗಭದ್ರಾ ಜಲಾಶಯದಿಂದ ಕರ್ನಾಟಕ, ಆಂದ್ರಾ ಮತ್ತು ತೆಲಂಗಾಣ ರಾಜ್ಯದಲ್ಲಿ ಸುಮಾರು 20 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆಯುತ್ತಿದ್ದಾರೆ. ನಮ್ಮ ಅಚ್ಚುಕಟ್ಟು ಪ್ರದೇಶದ ಬಳ್ಳಾರಿ, ಕೊಪ್ಪಳ ರಾಯಚೂರು ಜಿಲ್ಲೆಗಳಲ್ಲಿ ಕಳೆದ ಐವತ್ತು ಅರವತ್ತು ವರ್ಷಗಳಿಂದ ರಸಾಯನಿಕ ಗೊಬ್ಬರ, ಕಳೆನಾಶಕ ಮತ್ತು ಕೀಟನಾಶಕ ಬಳಸಿ ಭತ್ತ ಬೆಳೆಯುತ್ತಾರೆ. ಮತ್ತು ಅದೇ ಅಕ್ಕಿ ದೇಶ ವಿದೇಶಗಳಿಗೆ ರವಾನೆಯಾಗುತ್ತದೆ. ಈ ಭಾಗದ ರೈತರು ಸೇರಿದಂತೆ ಪ್ರತಿಯೊಬ್ಬರ ಅದೇ ಅಕ್ಕಿಯ ಅನ್ನವನ್ನು ಉಂಡು ಜೀವನ ಮಾಡುತ್ತಿದ್ದೇವೆ. ಇಲ್ಲಿ ಕುಳಿತಿರುವ ಐದು ಜನ ರೈತ ಸಂಘದ ಮುಖಂಡರು ನಲವತ್ತು ವರ್ಷದಿಂದ ನಮ್ಮ ಅಕ್ಕಿಯನ್ನು ತಿಂದು ಕೃಷಿ ಮಾಡುತ್ತಿದ್ದೇವೆ. ನಮಗಾರಿಗೂ ಕ್ಯಾನ್ಸರ್ ಬಂದಿಲ್ಲ. ಮತ್ತು ಸಕ್ಕರೆ ಖಾಯಿಲಿ ಕೂಡಾ ಬಂದಿಲ್ಲ. ಜೊತೆಗೆ ಕಳೆದ ವರ್ಷ ಮರಳಿ ರೈತ ಸಂಪರ್ಕ ಕೇಂದ್ರದ ವ್ಯಪ್ತಿಯ ರೈತನೊರ್ವ ಕಿಟನಾಶಕ ಮತ್ತು ರಸಾಯನಿಕ ಗೊಬ್ಬರ ಬಳಸಿ ಬೆಳೆದಿರುವ ಭತ್ತದ ಮಾದರಿಯನ್ನು ಸಂಗ್ರಹಿಸಿ ಬೆಂಗಳೂರಿನ ಪಿಡೇನಾಶಕ ಶೇಷಾಂಶ ವಿಶ್ಲೇಷಣಾ ಪ್ರಯೋಗಾಲಯದಲ್ಲಿ ಪರೀಕ್ಷೆ ಮಾಡಿದಾಗ ಯಾವುದೇ ಹಾನಿಕಾರಕ ಅಂಶ ಕಂಡು ಬಂದಿಲ್ಲ ಎಂಬುದು ಅವರ ಕೃಷಿ ಇಲಾಖೆಯಲ್ಲೆ ದಾಖಲೆ ಇದೆ. ಆದರೆ ಜಂಟಿ ಕೃಷಿ ನಿರ್ದೇಶಕರು ಯಾವ ದಾಖಲೆಯನ್ನು ಇಟ್ಟುಕೊಂಡು ಈ ಭಾಗದ ಭತ್ತದಿಂದ ಕ್ಯಾನ್ಸರ್ ಬರುತ್ತದೆ ಎಂದು ಹೇಳಿಕೆ ನೀಡಿದ್ದಾರೆ. ಮತ್ತು ಕೃಷಿ ಇಲಾಖೆಯಿಂದಲೂ ನಿರಂತರವಾಗಿ ರೈತರಿಗೆ ರಸಾಯನಿಕ ಮತ್ತು ಕ್ರೀಮಿನಾಶಕ ಔಷಧಿಯನ್ನು ಪೂರೈಕೆ ಮಾಡಲಾಗುತ್ತದೆ. ದುಷ್ಪರಿಣಾಮ ಬೀರುತ್ತಿದ್ದರೆ ಅವರು ರೈತರಿಗೆ ರಸಾಯಿನಿಕ ವಿತರಣೆ ಮಾಡುವುದನ್ನು ಬಂದ್ ಮಾಡಬೇಕಿತ್ತು. ಮತ್ತು ಒಣ ಬೆಸಾಯದಲ್ಲೂ ಮತ್ತು ತೊಟಗಾರಿಕೆ ಬೆಳೆಗೂ ಮೀತಿ ಮೀರಿ ರಸಾಯನಿಕವನ್ನು ಬಳಕೆ ಮಾಡುತ್ತಿದ್ದಾರೆ. ಇದರ ಆಹಾರಗಳಿಂದಲೂ ಕ್ಯಾನ್ಸರ್ ಬರುತ್ತದೆ ಎಂದು ಏಕೆ ಹೇಳಿಲ್ಲ. ಅಂದರೆ ಜಂಟಿ ನಿರ್ದೇಶಕರು ದುರುದ್ದೇಶದಿಂದ ರೈತರನ್ನು ದಾರಿ ತಪ್ಪಿಸುವ ಮತ್ತು ಗೊಬ್ಬರ ಸಮಸ್ಯೆಯನ್ನು ಮರೆ ಮಾಚಲು ಈ ಹೇಳಿಕೆ ನೀಡಿದ್ದಾರೆ. ಸಾರ್ವಜನಿಕರಿಗೆ ಮತ್ತು ರೈತ ಸಮುದಾಯಕ್ಕೆ ಕ್ಯಾನ್ಸರ್ ಬರುತ್ತದೆ ಎಂಬುದನ್ನು ದಾಖಲೆ ಸಹಿತಿ ಬಹಿರಂಗಪಡಿಸಬೇಕು. ಇಲ್ಲದಿದ್ದರೆ ಕೃಷಿ ಸಚಿವರು ಮತ್ತು ಸರಕಾರ ಅವರು ತಪ್ಪು ಮಾಹಿತಿ ನೀಡಿದ್ದಾರೆ ಎಂದು ಅವರನ್ನು ಅಮಾನತು ಮಾಡಬೇಕು. ಇಲ್ಲದಿದ್ದರೆ ನಾವು ಅವರ ವಿರುದ್ಧ ಹೋರಾಟ ನಡೆಸುವುದರ ಜೊತೆಗೆ ನ್ಯಾಯಾಲಯದಲ್ಲಿ ದಾವೆ ಹೂಡುತ್ತೇವೆ ಎಂದರು.

ಮುಖಂಡ ಶರಣಪ್ಪ ಕೋತ್ವಾಲ್ ಮಾತನಾಡಿ, ಗೊಬ್ಬರ ದಾಸ್ತಾನಿನಲ್ಲಿ ಸಮಸ್ಯೆಯಾಗಿರುವುದನ್ನು ಮುಚ್ಚಿ ಹಾಕಲು ಸಚಿವರು ಮತ್ತು ಜಂಟಿ ಕೃಷಿ ನಿರ್ದೇಶಕರು ರೈತರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ಶರಣೇಗೌಡ ಕೂಡಾ ಗೊಬ್ಬರ ಹೆಚ್ಚು ಪಡೆದುಕೊಂಡಿದ್ದಾರೆ ಎಂದು ಸಭೆಯಲ್ಲಿ ನೀಡಿರುವ ಹೇಳಿಕೆ ಸರಿಯಲ್ಲ. ಇದನ್ನು ಕೂಲಂಕಶುವಾಗಿ ಅವರು ಅರಿತು ಮಾತನಾಡಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡ ಬಸವರಾಜ ಪಿನ್ನಿ, ಅಂಬಣ್ಣ ಇದ್ದರು.

## ಸರಕಾರಿ ಕನ್ನಡ ಶಾಲೆಗಳಿಗೆ 100 ಕ್ಕೂ ಹೆಚ್ಚು ಸಸಿಗಳ ವಿತರಣೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಅಳವಂಡಿ ಗ್ರಾಮದ ಸಮಾಜ ಸೇವಕ, ಶಿಕ್ಷಣ ಪ್ರೇಮಿ ಅನ್ವರ ಹುಸೇನ ಗಡಾದ ಅವರ ಹುಟ್ಟು ಹಬ್ಬದ ಆಚರಣೆ ನಿಮಿತ್ತವಾಗಿ 100 ಸಸಿಗಳನ್ನು ಸರಕಾರಿ ಕನ್ನಡ ಶಾಲಾ ಮಕ್ಕಳಿಗೆ ಸಸಿ ವಿತರಿಸುವ ಮೂಲಕ ಪರಿಸರ ಜಾಗೃತಿಯ ಮೂಲಕ ಅರ್ಥ ಪೂರ್ಣ ಹುಟ್ಟು ಹಬ್ಬವನ್ನು ಆಚರಿಸಿಕೊಂಡಿದ್ದಾರೆ.

ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹೈದರನಗರ, ನೆಲೋಗಿಪುರ, ಅಳವಂಡಿ ಹಾಗೂ ಶಾಂತಿ ನಿಕೇತನ ಪ್ರಾಥಮಿಕ ಶಾಲೆ, ಸ್ವಾಮಿ ವಿವೇಕಾನಂದ ಪ್ರೌಢ ಶಾಲೆಗಳಿಗೆ ಬೇಟಿ ನೀಡಿ ಮಕ್ಕಳ ಕುಶಲೋಪರಿ ವಿಚಾರಿಸಿ ಮಕ್ಕಳಿಗೊಂದು ಮರ ಶಾಲೆಗೊಂದು ವನ ಎನ್ನುವಂತೆ ಶಾಲಾ ಆವರಣದಲ್ಲಿ ಸಸಿ ಹಚ್ಚಿ ಮಕ್ಕಳಿಗೂ ಸಸಿ ವಿತರಣೆ ಮಾಡುವ ಮೂಲಕ ಪರಿಸರ ಕಾಳಜಿ ಮೆರೆದಿದ್ದಾರೆ ಇದೇ ವೇಳೆ ಮಾತನಾಡಿದ ಅನ್ವರ ಹುಸೇನ್ ಗಡಾದ ಪ್ರತಿವರ್ಷವೂ ರಕ್ತದಾನ ಶಿಬಿರ, ಆರೋಗ್ಯ ಶಿಬಿರ, ಪ್ರತಿಭಾ ಪುರಸ್ಕಾರ, ಕ್ರೀಡೆಗೆ ಪ್ರೋತ್ಸಾಹ ಹೀಗೆ ವಿಶೇಷ ವಿನೂತನ ಸಾಮಾಜಿಕ ಕಾರ್ಯಕ್ರಮದ ಮೂಲಕ ಹುಟ್ಟು ಹಬ್ಬ ಆಚರಿಸಿಕೊಳ್ಳುತ್ತೇನೆ. ಶಿಕ್ಷಣ, ಸಾಮಾಜಿಕ ಮತ್ತು ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಮಾಡುವುದರಿಂದ ನನಗೆ ತೃಪ್ತಿ ಇದೆ. ಹುಟ್ಟು ಹಬ್ಬದ ನೆಪದಲ್ಲಿ ದುಂದುವೆಚ್ಚ ಮಾಡುವುದಕ್ಕಿಂತ ಸಾಮಾಜಿಕ ಕಳಕಳಿಯ ಕೆಲಸ ಮಾಡುವುದು ಉತ್ತಮ ಎಂದರು.

ಮುಖಂಡರಾದ ಸುರೇಶ ದಾಸರಡ್ಡಿ ಮಾತನಾಡಿ ಸ್ನೇಹಿತರಾದ ಅನ್ವರ ಗಡಾದ ಅವರ ಸಾಮಾಜಿಕ ಕಾರ್ಯ ಸಮಾಜಕ್ಕೆ ಮಾದರಿ ಕೆಲಸ. ಹುಟ್ಟು ಹಬ್ಬದ ನಿಮಿತ್ತವಾಗಿ ಸುಮಾರು 100 ಕ್ಕೂ ಸಸಿಗಳನ್ನು ಹಚ್ಚಿದ್ದು ಮಕ್ಕಳಲ್ಲಿ ಪರಿಸರ ಕಾಳಜಿಯ ಬಗ್ಗೆ ಜಾಗೃತಿ ಮೂಡಿಸುತ್ತದೆ. ಉತ್ತಮ ಪರಿಸರ ನಿರ್ಮಾಣವಾಗಿ ಆರೋಗ್ಯ ಭಾಗ್ಯ ಹೆಚ್ಚಿಸುವಲ್ಲಿ ಸಹಕಾರಿಯಾಗುತ್ತದೆ ಅವರ ಕಾರ್ಯ ಶ್ಲಾಘನೀಯ ಎಂದರು.

ಇದೇ ವೇಳೆ ಎಲ್ಲಾ ಶಾಲೆಯ ಶಿಕ್ಷಕರ ಬಳಗದ ವತಿಯಿಂದ ಸನ್ಮಾನಿಸಿ ಗೌರವಿಸಿ ಹುಟ್ಟು ಹಬ್ಬಕ್ಕೆ ಶುಭಹಾರೈಸಿದರು. ಮಕ್ಕಳಿಗೆ ಮತ್ತು ಮರುಳ ಸಿದ್ಧೇಶ್ವರ ಮಠದ ಧಾರ್ಮಿಕ ಕಾರ್ಯಕ್ರಮಕ್ಕೆ ಸಿಹಿ ಅಡುಗೆಯ ಅನ್ನ ಸಂತರ್ಪಣೆ ಮೂಲಕ ಅರ್ಥಪೂರ್ಣ ಹುಟ್ಟು ಹಬ್ಬಕ್ಕೆ ಸಾಕ್ಷಿಯಾಗಿದರು. ರೇಣುಕಪ್ಪ ಹಳ್ಳಿಕೇರಿ, ಇಸ್ಮಾಯಿಲ್, ಇಮಾಮ್ ಸಾಬ್, ಮೆಹಬೂಬ್ ಸಾಬ್ ,ವಿಶ್ವನಾಥ ದೋತರಗಾವಿ, ಮಾಬುಸಾಬ, ಮುಖ್ಯೋಪಾಧ್ಯಯರಾದ ಹನುಮಂತಪ್ಪ ಕೆ, ಗುರುರಾಜ ಪಾಟೀಲ್ ಹಾಗೂ ಶಿಕ್ಷಕರು, ಹಿರಿಯರು, ಯುವಕರು, ವಿದ್ಯಾರ್ಥಿಗಳು ಉಪಸ್ಥಿತಿ ಇದ್ದರು.

**CITATION**

**IN THE COURT OF THE ADDL. CIVIL JUDGE AND JMFC., AT HUMNABAD**

**CRL.MISC. NO. 1322/2025**

1) Abdula Sattar Miyan S/o Mainuddin Saudagar Age;41 R/o Hallikhed Town Tq:Humnabad

Advocate: BHARAT DHIMAKE

2) Makbul MIyan S/o Mainoddin Age; 44 years R/o Hallikhed B Town Tq:Humnabad

3) Shaik Riyaz Uddin S/o Mainuddin Age; 43 years R/o Hallikhed (B) Town Tq:Humnabad

4) Mohammed Osman S/o Mohammed Moinuddin Age; 39 years R/o Hallikhed B Town Tq:Humnabad

**Petitioners:-**

Respondent:-

The Registrar of Birth and Death through The TMC Hallikhed (B)

Sub: Petition U/Sec 13 (3) of Birth and Death Registration Act 1969.

Whereas the above named petitioners have filed the petition under section 13 (3) of Birth and Death Registration Act 1969 praying this HOnourable court to issue Death certificate Mother of Petitioner no. 1 to 4 are sons namely : Late Bismilla Begum W/o late Moinuddin Soudagar who died on 04-02-2017 at Murad Nagar Colony, Town Hallikhed (B) Tq:Humnabad Dist:Bidar.

The petitioners claiming the death certificate of said late Bismilla Begum for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 28-08-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 24-07-2025.

//By order of the court//
Chief Ministerial Officer
Addl. Civil Judge and JMFC Court
Humnabad

# ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ :ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ಪಟಾಕಿ ವ್ಯಾಪಾರಿಗಳಿಗೆ ಯಾವುದೇ ಅಡಚಣೆಯಾಗದಂತೆ ವ್ಯಾಪಾರಕ್ಕೆ ಅನುವು ಮಾಡಿಕೊಡಲಾಗುವುದು. ಆದರೆ ಎಲ್ಲದಕ್ಕಿಂತ ಮುಖ್ಯವಾಗಿ ಸಾರ್ವಜನಿಕರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ, ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಜಿಲ್ಲಾಡಳಿತದ ಮೊದಲ ಆದ್ಯತೆ ಆಗಲಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ನವನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲೆಯ ವಿವಿಧ ತಾಲೂಕುಗಳ ಪಟಾಕಿ ಲೈಸೆನ್ಸ್‌ಗಳ ನವೀಕರಣ ಹಾಗೂ ತಾತ್ಕಾಲಿಕ ಸಿಡಿಮದ್ದು, ಪಟಾಕಿ ಲೈಸೆನ್ಸ್‌ಗಳಿಗೆ ಅನುಮತಿ ನೀಡುವ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ಪಟಾಕಿ ಒಂದು ಸ್ಫೋಟಕ ವಸ್ತುವಾದ ಕಾರಣ ಸಾರ್ವಜನಿಕರ ಸುರಕ್ಷತಾ ದೃಷ್ಟಿಯಿಂದ ಜನವಸತಿ ಅಥವಾ ಜನಸಂದಣಿ ಇರುವ ಪ್ರದೇಶಗಳಲ್ಲಿ ಮಾರಾಟಕ್ಕೆ ಅವಕಾಶ ನೀಡಲಾಗುವುದಿಲ್ಲ. ಹಾಗೆಯೇ ಪಟಾಕಿ ವ್ಯಾಪಾರಿಗಳಿಗೂ ತೆ–ೂಂದರೆಯಾಗದಂತೆ ಆಟದ ಮೈದಾನ,ಕ್ರೀಡಾಂಗಣ ಅಥವಾ ಎ.ಪಿ.ಎಂ.ಸಿ ಯಾರ್ಡ್ ನಂತಹ ಸರ್ಕಾರಿ ವಿಶಾಲ ಜಾಗಗಳನ್ನು ಗುರುತಿಸಿ ಪಟಾಕಿ ವ್ಯಾಪಾರಿಗಳಿಗೆ ಅನುಮತಿ ನೀಡಲಾಗುವುದು ಎಲ್ಲರೂ ಅಲ್ಲಿಯೇ ತಮ್ಮ ತಮ್ಮ ಮಳಿಗೆಗಳನ್ನು ಹಾಕಿಕೊಂಡು ವ್ಯಾಪಾರ ಮಾಡಬಹುದು ಎಂದರು.

2024ರ ನಿಯಮಗಳ ಪ್ರಕಾರ ಜಿಲ್ಲೆಯ ಪಟಾಕಿ ವ್ಯಾಪಾರಿಗಳ ಲೈಸೆನ್ಸ್ ನವೀಕರಣದ ಬಗ್ಗೆ ಸೂಕ್ತ ಪರಿಶೀಲನೆ ನಡೆಸಿ ವರದಿ ನೀಡಲು ಅಗ್ನಿಶಾಮಕ ಅಧಿಕಾರಿ, ತಹಶೀಲ್ದಾರ್ ಮತ್ತು ಸ್ಥಳೀಯ ಅಧಿಕಾರಿಗಳನ್ನು ಹೊಂದಿದ ಸಮಿತಿ ರಚಿಸಲಾಗುವುದು. ಸಮಿತಿ ವರದಿ ನೀಡಲು ಮೂರು ದಿನಗಳ ಗಡುವು ನೀಡಲಾಗಿದ್ದು, ಅದರ ಶಿಫಾರಸ್ಸಿನಂತೆ ಲೈಸೆನ್ಸ್ ಗಳನ್ನು ನವೀಕರಣ ಅಥವಾ ತಿರಸ್ಕೃತ ಮಾಡಲಾಗುವುದು. ಅಲ್ಲದೇ ಗಣೇಶ ಹಬ್ಬದ ಪ್ರಯುಕ್ತ ಐದು ದಿನಗಳ ವ್ಯಾಪಾರಕ್ಕೆ ತಾತ್ಕಾಲಿಕ ಲೈಸೆನ್ಸ್ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಗಣೇಶ ಚತುರ್ಥಿ ನಿಮಿತ್ಯ ಪಟಾಕಿ ಹಾಗೂ ಸಿಡಿಮದ್ದುಗಳನ್ನು ಮಾರಾಟ ಮಾಡಲು ಸ್ಥಳ ನಿಗದಿಪಡಿಸಲಾಗುತ್ತಿದ್ದು,. ಮಾರಾಟಗಾರರು ಅನುಮತಿಗಾಗಿ ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಲಾಗುವುದು. ತಹಶೀಲ್ದಾರ ಹಾಗೂ ಪೊಲೀಸ್, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ಖುದ್ದು ಸ್ಥಳ ಪರಿಶೀಲನೆ ಮಾಡಿ, ನಿಯಮಾನುಸಾರ ಕ್ರಮಕೈಗೊಳ್ಳಬೇಕು. ಯಾವುದೇ ಹಾನಿ, ಅವಘಡ ಉಂಟಾದಲ್ಲಿ ಪಟಾಕಿ ಅಂಗಡಿಗಳ ಮಾಲೀಕರು ನೇರ ಹೊಣೆ ಆಗುತ್ತಾರೆ. ತಹಶೀಲ್ದಾರ ನೀಡುವ ವರದಿ ಆಧಾರದ ಮೇಲೆ ಕ್ರಮಕೈಗೊಳ್ಳಲಾಗುವುದು. ಬಾಗಲಕೋಟೆಯಲ್ಲಿ ಪಟಾಕಿ ಮಾರಾಟಕ್ಕೆ ಅನುಮತಿಯನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ನೀಡಲು ಚಿಂತನೆಯಿದೆ.. ಬದಾಮಿ ಹಾಗೂ ಗುಳೇದಗುಡ್ಡ ಪಟ್ಟಣದಲ್ಲಿ ಮಾರಾಟ ಕೇಂದ್ರಕ್ಕೆ ಸೂಕ್ತ ಸ್ಥಳ ಗುರುತಿಸಿ, ಶಿಫಾರಸ್ಸು ಮಾಡುವಂತೆ ಬದಾಮಿ ತಹಶೀಲ್ದಾರರಿಗೆ ಅವರು ಸೂಚಿಸಿದರು.

ಜಿಲ್ಲಾದ್ಯಂತ ಸ್ವೀಕರಿಸಿಸಲಾದ ಪಟಾಕಿ ವ್ಯಾಪಾರಿಗಳ ಲೈಸೆನ್ಸಗಳ ಪರಿಶೀಲನೆ, ತಿರಸ್ಕೃತಗೊಂಡ ಅರ್ಜಿಗಳಿಗೆ ಕಾರಣ, ವಿವಿಧ ತಾಲೂಕುಗಳಲ್ಲಿ ಮಳಿಗೆ ತೆರೆಯಲು ಗುರುತಿಸಲಾದ ಸ್ಥಳ, ಮತ್ತು ವಿವಿಧ ಸುರಕ್ಷತಾ ಕ್ರಮಗಳ ಕುರಿತು ಸಭೆಯಲ್ಲಿ ಆಯಾ ತಾಲೂಕು ತಹಶೀಲ್ದಾರ್‌ಗಳೊಂದಿಗೆ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಅಗ್ನಿಶಾಮಕ ದಳ ಅಧಿಕಾರಿ ಪ್ರಕಾಶ ಪವಾರ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಟಾಕಿ ವ್ಯಾಪಾರಿಗಳ ಪ್ರತಿನಿಧಿಗಳು ಸೇರಿದಂತೆ ಇನ್ನಿತರರು ಇದ್ದರು.

# ಅ 11 ರಂದು ಬಿನ್ನಾಳ ಬಸವೇಶ್ವರ ಮಹಾ ರಥೋತ್ಸವ, ಮೂರು ದಿನಗಳಕಾಲ ಧಾರ್ಮಿಕ ಕಾರ್ಯಕ್ರಮ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಕುಕನೂರು ತಾಲೂಕಿನ ಬಿನ್ನಾಳ ಗ್ರಾಮದಲ್ಲಿ ಪ್ರತಿ ವರ್ಷದಂತೆ ಸಾಂಪ್ರದಾಯಕವಾಗಿ ನಡೆದುಬಂದ ಸುಕ್ಷೇತ್ರ ಬಿನ್ನಾಳ ಬಸವೇಶ್ವರ ಜಾತ್ರಾಹೋತ್ಸವವು ಮೂರು ದಿನಗಳಕಾಲ ವೈಭವದಿಂದ ನಡೆಯಲಿದ್ದು, ಆಗಸ್ಟ 11 ರ ಸೋಮವಾರ ಸಂಜೆ 5 ಗಂಟೆಗೆ ಮಹಾ ರಥೋತ್ಸವ ಜರುಗಲಿದೆ.

**ಧರ್ಮ ಧ್ವಜಾರೋಹಣ:**

ಜಾತ್ರೆಯ ಮುನ್ನಾದಿನವಾದ ಅ.10 ರ ಭಾನುವಾರದಂದು ಬೆಳಗ್ಗೆ 8 ಗಂಟೆಗೆ ಧರ್ಮಸಭೆ ಹಾಗೂ ಕಳಸಾರೋಹಣ ಜರುಗುವುದು. ಮಧ್ಯಾಹ್ನ 3 ಗಂಟೆಗೆ ಧರ್ಮಸಭೆ ಜರುಗಲಿದ್ದು, ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ಹಾಳಕೇರಿಯ ಮುಪ್ಪಿನ ಬಸವಲಿಂಗ ಸ್ವಾಮಿಗಳು, ಹೊಸಳ್ಳಿಯ ಬೂದೀಶ್ವರ ಸ್ವಾಮಿಗಳು, ಹೂವಿನಡಗಲಿ ಡಾ.ಶಿವಶಾಂತವೀರ ಸ್ವಾಮಿಗಳು, ತಂಗಡಗಿಯ ಭಾರತಿ ಅನ್ನದಾನೇಶ್ವರ ಸ್ವಾಮಿಗಳು ಉಪಸ್ಥಿತರಿರಲಿದ್ದಾರೆ. ಸಿದ್ದಲಿಂಗಯ್ಯ ಶಿ. ಹಿರೇಮಠ ಅಧ್ಯಕ್ಷತೆ ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ, ಹಾಗೂ ಮಾಜಿ ಡಿಸಿಎಂ ಕೆ.ಎಸ್ ಈಶ್ವರಪ್ಪ, ಜಿಲ್ಲಾ ವೀರಶೈವ ಮಹಾಸಭಾ ಅಧ್ಯಕ್ಷ ಕಳಕನಗೌಡ ಪಾಟೀಲ, ತಹಶಿಲ್ದಾರ ಪ್ರಾಣೇಶ ಕುಲಕರ್ಣಿ ಭಾಗವಹಿಸಲಿದ್ದಾರೆ. ಗದಗನ ವಚನ ಟಿವಿ ಸಂಪಾದಕ ಸಿದ್ದು ಆ್ಯಪಲ್ ಪುರಿ ಉಪನ್ಯಾಸ ನೀಡಲಿದ್ದಾರೆ. ವೇದಿಕೆಯಲ್ಲಿ ಪುರಾಣ ಪ್ರವಚನಕಾರರಾದ ಕೊಟ್ರಯ್ಯ ಸ್ವಾಮಿ ಹಿರೇಮಠ, ಗ್ರಾ.ಪಂ ಸದಸ್ಯರುಗಳಾದ ಮಹಮ್ಮದಸಾಬ ವಾಲೀಕಾರ, ಗುರಪ್ಪ ಪಂತರ, ಲಕ್ಷ್ಮಣ ಚಲವಾದಿ, ಉಪಸ್ಥಿತರಿರಲಿದ್ದಾರೆ.

ಅಂದು ಸಂಜೆ 5 ಗಂಟೆಗೆ ಲಘು ರಥೋತ್ಸವ ಜರುಗಲಿದೆ. ಸಂಜೆ ವಿರೇಶ್ವರ ಪುಣ್ಯಾಶ್ರಮದ ಸಂಗೀತ ಶಿಕ್ಷಕ ಕಳಕಪ್ಪ ಮುದ್ಲಾಪೂರ ಮತ್ತು ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ.

**ಧರ್ಮಚಿಂತನಾ ಸಭೆ:**

ಅ.11 ರ ಸೋಮವಾರ ಬೆಳಗ್ಗೆ 5 ಗಂಟೆಗೆ ಬ್ರಾಹ್ಮಿ ಮಹೂರ್ತದಲ್ಲಿ ಶ್ರೀ ಬಸವೇಶ್ವರನಿಗೆ ಮಹಾ ರುದ್ರಾಭಿಷೇಕ. ಮದ್ಯಾಹ್ನ 2 ಗಂ–ಟೆಗೆ ನಂದಿಕೋಲು ಮೆರವಣಿಗೆ, ನಂತರ ಧರ್ಮಚಿಂತನಾ ಸಭೆ ಜರುಗುವುದು. ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನ ಶಿರಹಟ್ಟಿ–ಬಾಳೆಹೊಸೂರ ಸಂಸ್ಥಾನ ಪೀಠದ ಫಕೀರದಿಂಗಾಲೇಶ್ವರ ಮಹಾಸ್ವಾಮಿಗಳು ಸಾನಿದ್ಯ ವಹಿಸಲಿದ್ದಾರೆ. ಕೂಡಲ ಸಂಗಮ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮಿಗಳು, ದಾವಣಗೇರಿ ವಿರಕ್ತಮಠದ ಬಸವಪ್ರಭು ಸ್ವಾಮಿಗಳು ಉಪಸ್ಥಿತರಿರಲಿದ್ದು, ಮೈನಳ್ಳಿಯ ಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ಹಿರೇಮಠ ಅಧ್ಯಕ್ಷತೆ ವಹಿಸಲಿದ್ದಾರೆ. ಚನ್ನಯ್ಯ ತೋ. ಹಿರೇಮಠ ಉಪಸ್ಥಿತಿ ವಹಿಸಲಿದ್ದಾರೆ. ಅತಿಥಿಗಳಾಗಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು, ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ, ಸಂಸದ ರಾಜಶೇಖರ ಹಿಟ್ನಾಳ, ಮಾಜಿ ಸಂಸದ ಸಂಗಣ್ಣ ಕರಡಿ ಆಗಮಿಸಲಿದ್ದಾರೆ. ವೇದಿಕೆಯಲ್ಲಿ ಸಿಪಿಐ ಮೌನೇಶ ಮಾಲಿಪಾಟೀಲ, ಗ್ರಾ.ಪಂ ಅಧ್ಯಕ್ಷರಾದ ಶ್ರೀಮತಿ ದ್ರಾಕ್ಷಾಯಣಿ ತಹಶಿಲ್ದಾರ, ಸದಸ್ಯರಾದ ಶ್ರೀಮತಿ ಚನ್ನಮ್ಮ ಮುತ್ತಾಳ, ಶ್ರೀಮತಿ ಕಮಲಾಕ್ಷಿ ಕಂಬಳಿ, ಉಪಸ್ಥಿತರಿರಲಿದ್ದಾರೆ. ಅಂದು ಸಂಜೆ 5 ಗಂಟೆಗೆ ಮಹಾರಥೋತ್ಸವ ಜರುಗಲಿದೆ. ಸಂಜೆ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಶಂಕರ ಬಿನ್ನಾಳ, ಮತ್ತು ಗೊಂಡಬಾಳದ ಸಂಗೀತಗಾರ ಶ್ರೀಶೈಲಪ್ಪ ಏ. ಹಳ್ಳಿಕೇರಿ ಮತ್ತು ತಂಡದಿಂದ ಭಕ್ತಿ ಸಂಗೀತ ಜರುಗಲಿದೆ.

**ಎತ್ತಿನ ಮೆರವಣಿಗೆ:**

ಅ.12 ರ ಮಂಗಳವಾರ ಪ್ರತಿವರ್ಷದಂತೆ ರೈತನ ಬೆನ್ನೆಲುಬಾಗಿ ಕೆಲಸ ನಿರ್ವಹಿಸುವ ಎತ್ತುಗಳ ಮೆರವಣೆಗೆ ಮದ್ಯಾಹ್ನ 3 ಗಂಟೆಗೆ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಗ್ರಾಮದ ರೈತಬಾಂದವರೆಲ್ಲ ತಮ್ಮ ಎತ್ತುಗಳನ್ನ ಸಿಂಗರಿಸಿ ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ. ನಂತರ ಧರ್ಮಸಭೆ ಜರುಗಲಿದ್ದು, ಗದಗ– ಡಂಬಳದ ತೋಂಟ–ದಾರ್ಯ ಮಠದ ಡಾ.ಸಿದ್ದರಾಮ ಸ್ವಾಮಿಗಳು ಸಾನಿದ್ಯ ಮಹಿಸಲಿದ್ದು, ಯಲಬುರ್ಗಾ ಶ್ರೀಧರಮುರಡಿ ಮಠದ ಬಸವಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ. ಹರ್ಲಾಪುರದ ಅಭಿನವ ಡಾ. ಕೊಟ್ಟುರೇಶ್ವರ ಸ್ವಾಮಿಗಳು, ನಿಡಗುಂದಿ ಕೊಪ್ಪದ ಚನ್ನಬಸವ ಸ್ವಾಮಿಗಳು, ಕುಕನೂರಿನ ಡಾ.ಮಹಾದೇವ ಸ್ವಾಮಿಗಳು, ಮಲ್ಲಯ್ಯ ಶೇಖರಯ್ಯ ಪೂಜಾರ ಉಪಸ್ಥಿತರಿರಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಕರ್ನಾಟಕ ಜಾನಪದ ಅಕಾಡೆಮಿ ಮಾಜಿ ಅಧ್ಯಕ್ಷರಾದ ಪದ್ಮಶ್ರೀ ಮಂಜಮ್ಮ ಜೋಗತಿ ಆಗಮಿಸಲಿದ್ದು, ನಿವೃತ್ತ ಉಪನ್ಯಾಸಕ ಅನೀಲ ವೈದ್ಯ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಹಾಲಪ್ಪ ಬಸಪ್ಪ ಆಚಾರ, ಬಿಜೆಪಿ ಯುವ ಮುಖಂಡ ಬಸವರಾಜ ಕ್ಯಾವಟರ್ ಭಾಗವಹಿಸಲಿದ್ದಾರೆ. ಇಓ ಸಂತೋಷ ಬಿರಾದಾರ, ಪಿಎಸ್ ಐ ಗುರುರಾಜ್, ಗ್ರಾ.ಪಂ ಉಪಾಧ್ಯಕ್ಷ ಶರಣಯ್ಯ ಹಿರೇಮಠ ಇರಲಿದ್ದಾರೆ. ಅಂದು ಸಂಜೆ ಗವಿಸಿದ್ದೇಶ್ವರ ಸ್ವರ ಸಂಚಾರ ಕಲಾತಂಡ, ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಡಾ. ಜೀವನಸಾಬ್ ವಾಲಿಕಾರ ಮತ್ತು ತಂಡದಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ. ಜೊತೆಗೆ ಅಂದು ಗ್ರಾಮದ ವಯೋನಿವೃತ್ತ ಸರಕಾರಿ ನೌಕರರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಸಂದರ್ಭದಲ್ಲಿ ಕಳಕಪ್ಪ ಕಂಬಳಿ, ಬಸವಂತಪ್ಪ ಪುಟ್ಟಗನಹಳ್ಳಿ, ಜಗದೀಶ್ ಚಟ್ಟಿ,

ಕಲ್ಲಪ್ಪ ಕರಿಣ್ಣನವರ್, ಪತ್ರಪ್ಪ ಕಂಬಳಿ, ನೂರಂದಪ್ಪ ಕೊಪ್ಪದ, ಬಸವಂತಪ್ಪ ಕಂಬಳಿ, ಲಕ್ಷ್ಮಣ ಚಲವಾದಿ, ಮಹಮ್ಮದ್ ಸಾಬ್ ವಾಲಿಕಾರ್, ಬಸವರಾಜ್ ಕರೆಣ್ಣನವರ್, ಸಂತೋಷ್ ಮೆಣಸಿನಕಾಯಿ, ಬಸವರಾಜ್ ಕೊಪ್ಪದ, ಹಾಗೂ ಇತರರು ಇದ್ದರು.

# ಬೆನಕಟ್ಟಿ ಪಿಕೆಪಿಎಸ್‌ಗೆ ಸಾಧನಾ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ತಾಲೂಕಿನ ಬೆನಕಟ್ಟಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕು ನೀಡುವ ಸಾಧನಾ ಪ್ರಶಸ್ತಿ ಪಡೆದು–ಕೊಂಡಿದೆ.

ಉತ್ತಮ ಕಾರ್ಯನಿರ್ವಹಣೆಗೆ ಬಿಡಿಸಿಸಿ ಬ್ಯಾಂಕ್ ಬಹುಮಾನ ಯೋಜನೆಯಡಿ ನೀಡುವ 2024–25 ನೇ ಸಾಲಿನ ತಾಲೂಕು ಮಟ್ಟದ ಪ್ರಶಸ್ತಿಯನ್ನು ಬೆನಕಟ್ಟಿ ಪಿಕೆಪಿಎಸ್ ಪಡೆದುಕೊಂಡು ಮೂರನೇ ಬಹುಮಾನಕ್ಕೆ ಪಾತ್ರವಾಗಿದೆ.

ಇತ್ತೀಚೆಗೆ ಬಾಗಲಕೋಟೆಯಲ್ಲಿ ಜರುಗಿದ ಬಿಡಿಸಿಸಿ ಬ್ಯಾಂಕಿನ ವಾರ್ಷಿಕ ಮಹಾಸಭೆಯಲ್ಲಿ ಬ್ಯಾಂಕಿನ ಅಧ್ಯಕ್ಷ ಅಜಯಕುಮಾರ ಸರನಾಯಕ, ನಿರ್ದೇಶಕರಾದ ಶಾಸಕ ವಿಜಯಾನಂದ ಕಾಶಪ್ಪನವರ, ಪ್ರಕಾಶ ತಪಶೆಟ್ಟಿ ಮತ್ತಿತರರು ಪಿಕೆಪಿಎಸ್ ಅಧ್ಯಕ್ಷ ವೇಮಣ್ಣ ಯಡಹಳ್ಳಿ, ನಿರ್ದೇಶಕ ವೆಂಕಟೇಶ ತಿಮ್ಮಾಪುರ ಹಾಗೂ ವ್ಯವಸ್ಥಾಪಕ ಶಿವಾನಂದ ಸುನಗದ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಬಹುಮಾನ ನೀಡಿದರು.

ಈ ಸಂದರ್ಭದಲ್ಲಿ ಪಿಕೆಪಿಎಸ್ ನಿರ್ದೇಶಕರು, ಸಿಬ್ಬಂದಿ ಇದ್ದರು.

# ಕಮತಗಿಯಲ್ಲಿ ಆ.10 ರಿಂದ ರಾಯರ ಆರಾಧನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಆರಾಧ್ಯದೈವ ಶ್ರೀ ರಾಘವೇಂದ್ರಸ್ವಾಮಿಗಳ ಮಠದಲಿ ಶ್ರೀಗುರು ಸಾರ್ವಭೌಮರ 354 ನೇ ಆರಾಧನಾ ಮಹೋತ್ಸವವು ಆ.10 ರಿಂದ 12 ರವರೆಗೆ ನಡೆಯಲಿದೆ.



ಆ.8 ರಂದು ಸಾಯಂಕಾಲ ಧ್ವಜಾರೋಹಣ, ಗೋಪೂಜೆ, ಧಾನ್ಯ ಪೂಜೆ ನಡೆಯುತ್ತದೆ. 9 ರಂದು ಶ್ರೀ ಸತ್ಯನಾರಾಯಣ ಪೂಜಾ ಕಾರ್ಯಕ್ರಮ ನಡೆಯಲಿದ್ದು, 10 ಪೂರ್ವಾರಾಧನೆ, 11 ಮಧ್ಯಾರಾಧನೆ, 12 ರಂದು ಉತ್ತರಾರಾದನೆ ನಡೆಯಲಿದ್ದು ನಿತ್ಯವು ಬೃಂದಾವನಕ್ಕೆ ಕಾಕಡಾರತಿ. ಪಂಚಾಮೃತ ಅಭಿಷೇಕ, ವಿಶೇಷ ಪೂಜೆಗಳು ಧಾರ್ಮಿಕ ಕಾರ್ಯಕ್ರಮಗಳು ಜರುಗುವವು.

ಭಕ್ತರು ಈ ಮೂರು ದಿನ ಆರಾಧನಾ ಮಹೋತ್ಸವದಲ್ಲಿ ಪಾಲ್ಗೊಂಡು ತನು ಮನದ ಸೇವೆ ಸಲ್ಲಿಸಿ ರಾಯರ ಕೃಪೆಗೆ ಪಾತ್ರರಾಗಬೇಕೆಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಅಕ್ರಮ ಕಳ್ಳಬಟ್ಟಿ ಮಾರಾಟ: ಆರೋಪಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಆ.6–ಅಕ್ರಮವಾಗಿ ಕಳ್ಳಬಟ್ಟಿ ತಯಾರಿಸಿ ಮಾರಾಟದ ಉದ್ದೇಶಕ್ಕಾಗಿ ಸಾರಾಯಿ ಸಂಗ್ರಹಿಸಿದ ಆರೋಪಿಗೆ ಬೀಳಗಿಯ ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಶಿಕ್ಷೆ ಮತ್ತು ದಂಡವಿಧಿಸಿ ತೀರ್ಪು ನೀಡಿದೆ.

ಬೀಳಗಿ ವಲಯ ವ್ಯಾಪ್ತಿಯ ಅರಕೇರಿ ತಾಂಡಾದ ಆರೋಪಿ ಅಪ್ಪಾಲಾಲ ಲಮಾಣಿ ಮನೆಯ ಮೇಲೆ ಅಬಕಾರಿ ದಾಳಿ ನಡೆಸಿದಾಗ ಅಕ್ರಮವಾಗಿ ಕಳ್ಳಬಟ್ಟಿ ಸಾರಾಯಿಯನ್ನು ತಯಾರಿಸುವ ಉದ್ದೇಶದಿಂದ 30 ಲೀಟರ್ ಬೆಲ್ಲದ ಕೊಳೆ, 2 ಲೀಟರ್ ಕಳ್ಳಬಟ್ಟಿ ಸರಾಯಿಯನ್ನು ಸಂಗ್ರಹಿಸಿಟ್ಟಿದ್ದನ್ನು ಜಪ್ತ ಮಾಡಿ ಅಬಕಾರಿ ಉಪ ನಿರೀಕ್ಷಕ ಮಂಜುನಾಥ ಮರ್ಚಪ್ಪನವರ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು.

ನ್ಯಾಯಾಲಯ ವಿಚಾರಣೆ ಕೈಗೊಂಡಾಗ ಅಪರಾಧ ಎಸಗಿರುವುದು ರುಜುವಾತುವಾಗಿದ್ದರಿಂದ ಆರೋಪಿಗೆ ಕಲಂ 273 ರಡಿ 1 ತಿಂಗಳ ಸಾದಾ ಶಿಕ್ಷೆ, 1000 ರೂ. ದಂಡ ವಿಧಿಸಲಾಗಿದೆ. ತಪ್ಪಿದಲ್ಲಿ 1 ತಿಂಗಳ ಸಾದಾ ಶಿಕ್ಷೆ ಮತ್ತು ಅಬಕಾರಿ ಕಲಂ 32ರಡಿ 1 ವರ್ಷ ಸಾದಾ ಕಾರಾಗೃಹ ಶಿಕ್ಷೆ, 10 ಸಾವಿರ ದಂಡ ತುಂಬಬೇಕು. ಇದನ್ನು ತುಂಬದಿದ್ದಲ್ಲಿ 1 ತಿಂಗಳ ಸಾದಾ ಶಿಕ್ಷೆ ಹಾಗೂ ಕಲಂ 34ರಡಿ 1 ವರ್ಷ ಸಾದಾ ಶಿಕ್ಷೆ ಮತ್ತು 10 ಸಾವಿರ ದಂಡದ ಹಣ ತುಂಬಲು ತಪ್ಪಿದಲ್ಲಿ 1 ತಿಂಗಳ ಸಾದಾ ಶಿಕ್ಷೆಯನ್ನು ವಿಧಿಸಿ ಆದೇಶ ಹೊರಡಿಸಿದೆ.

ಸಹಾಯಕ ಸರ್ಕಾರಿ ಅಭಿಯೋಜಕ ಮಹಾಂತೇಶ ಮಸಳಿ ವಾದ ಮಂಡಿಸಿದ್ದರು.

# ಬಾಲಕಿಯರ ತಂಡ ತಾಲೂಕು ಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ತಾಲೂಕಿನ ಕಲಾದಗಿ ಗ್ರಾಮದ ಹಣ್ಣುಬೆಳೆಗಾರರ ಪ್ರಾಥಮಿಕ ಶಾಲೆ ಹಾಗೂ ಗುರುಲಿಂಗೇಶ್ವರ ಪ್ರೌಢಶಾಲೆ ಆವರಣದಲ್ಲಿ ನಡೆದ ಕಲಾದಗಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ತಾಲೂಕಿನ ಉದಗಟ್ಟಿ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯ ಬಾಲಕಿಯರು ಕಬಡ್ಡಿ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಶಾಲಾ ಪ್ರಭಾರಿ ಮುಖ್ಯಶಿಕ್ಷಕಿ ಪದ್ಮಾವತಿ ಬಂದಕೇರಿ ತಿಳಿಸಿದ್ದಾರೆ.

ಇದೇ ಶಾಲೆಯ ಅಮೃತಾ ಹಿರೇಮಠ ಚಕ್ರ ಎಸೆತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾಳೆ. ವಿದ್ಯಾರ್ಥಿಗಳ ಸಾಧನೆಗೆ ಶಾಲಾ ಎಸ್‌ಡಿಎಂಸಿ ಅಧ್ಯಕ್ಷರು, ಸರ್ವ ಸದಸ್ಯರು ಹಾಗೂ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.

# ತಾಯಿಯ ಎದೆ ಹಾಲು ಅಮೃತಕ್ಕೆ ಸಮ–ಡಾ.ದಿಲೀಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ತಾಯಿಯ ಎದೆ ಹಾಲು ಮಗುವಿಗೆ ಅಮೃತ ಸಮಾನವಾಗಿದ್ದು, ಸೂಕ್ತ ಸ್ತನ್ಯಪಾನ ಮಾಡುವುದರಿಂದ ಶಿಶುಗಳ ಜೀವ ಉಳಿಸಬಹುದು ಎಂದು ಸಜ್ಜಲಶ್ರೀ ನರ್ಸಿಂಗ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ದಿಲೀಪ ನಾಟೇಕರ ಹೇಳಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಸಜ್ಜಲಶ್ರೀ ನರ್ಸಿಂಗ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸ್ತುತ ಅಂಕಿ ಅಂಶಗಳ ಪ್ರಕಾರ 2023 ರಲ್ಲಿ ಪ್ರಪಂಚದಾದ್ಯಂತ 48 ಪ್ರತಿಶತ ಮಹಿಳೆಯರು ಸಂಪೂರ್ಣ ಸ್ತನ್ಯಪಾನ ಮಾಡುತ್ತಿದ್ದಾರೆ ಎಂದು ಹೇಳಲಾಗಿದೆ ಎಂದರು.

ಭಾರತದಲ್ಲಿ 31 ಪ್ರತಿಶತ ಮಹಿಳೆಯರು ಸಂಪೂರ್ಣ ಸ್ತನ್ಯಪಾನ ಮಾಡುತ್ತಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆ ಈ ಸಂಖ್ಯೆಯನ್ನು 50 ಪ್ರತಿಶತಕ್ಕೆ ಹೆಚ್ಚಿಸಬೇಕೆಂಬ ಗುರಿ ಹೊಂದಿದೆ. 2022 ರ ವರದಿಯ ಪ್ರಕಾರ ಸೂಕ್ತ ಸ್ತನ್ಯಪಾನ ಮಾಡುವುದರಿಂದ 8 ಲಕ್ಷಕ್ಕಿಂತ ಹೆಚ್ಚು ನವಜಾತ ಶಿಶು ಹಾಗೂ 5 ವರ್ಷದೊಳಗಿನ ಮಕ್ಕಳ ಜೀವ ಉಳಿಸಬಹುದೆಂದು ಡಾ.ದಿಲೀಪ ತಿಳಿಸಿದರು.

ಮುಖ್ಯ ಅತಿಥಿ ಡಾ.ಆಶಾಲತಾ ಮಲ್ಲಾಪೂರ, ತಾಯಿಯ ಎದೆಹಾಲು ಅಮೃತಕ್ಕೆ ಸಮ. ಹುಟ್ಟಿದ ಮಗು ಆರೋಗ್ಯಯುತವಾಗಿ ಬೆಳೆಯಲು ಮತ್ತು ಮಗುವಿನ ಬೆಳವಣಿಗೆಗೆ ಬೇಕಾಗುವ ಪೌಷ್ಟಿಕಾಂಶ, ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ತಾಯಿ ಎದೆಹಾಲು ಅತೀ ಅವಶ್ಯಕ ಎಂದು ಹೇಳಿದರು.

ಮಹಾವಿದ್ಯಾಲಯದ ಸ್ತ್ರಿ–ರೋಗ ಶಾಸ್ತ್ರ ಶುಶ್ರೂಷಾ ವಿಭಾಗದ ಮುಖ್ಯಸ್ಥರಾದ ಡಾ.ಜಯಶ್ರೀ ಅವರಸಂಗ ಮಾತನಾಡಿ, ಎದೆಹಾಲು ಕುಡಿಯದ ಶಿಶುಗಳು ನಿಮೋನಿಯಾ, ಅತೀಸಾರ ಹಾಗೂ ಇತರ ಸೋಂಕುಗಳನ್ನು ಹೊಂದುತ್ತಾರೆ ಅಂತಹ ಮಕ್ಕಳಿಗೆ ತಾಯಿಯ ಎದೆಹಾಲು ದಿವ್ಯ ಔಷಧಿಯಾಗಿದೆ ಎಂದು ತಿಳಿಸಿದರು. ಡಾ.ಕಮಲಾ ಕೆ. ಎನ್ ಮಾತನಾಡಿದರು. ಡಾ.ಮನೋಹರ ಟಂಕಸಾಲಿ, ಡಾ.ವೀರೇಶ ನಾಗತಾಣ ಉಪಸ್ಥಿತರಿದ್ದರು.

ಜಿ.ಎನ್.ಎಮ್ ವಿದ್ಯಾರ್ಥಿಗಳಿಂದ ಸ್ತನ್ಯಪಾನ ಮಹತ್ವ ತಿಳಿಸುವ ಕಿರು ನಾಟಕ ಪ್ರದರ್ಶಿಸಲಾಯಿತು.

# ತೋಟಗಾರಿಕೆ–ಹವಾಮಾನ ಆಧಾರಿತ ಬೆಳೆ ವಿಮೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6–ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗಾಗಿ ಬಾಗಲಕೋಟೆ ಜಿಲ್ಲೆಯ 9 ತಾಲೂಕುಗಳ ಅಧಿಸೂಚಿತ ಹೋಬಳಿ, ಗ್ರಾಮ ಪಂಚಾಯತ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ದ್ರಾಕ್ಷಿ ಮತ್ತು ದಾಳಿಂಬೆ ಬೆಳೆಗಳಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯನ್ನು ಘೋಷಿಸಲಾಗಿದೆ.

ಬ್ಯಾಂಕ್ ಮುಖಾಂತರ ಸಾಲ ಪಡೆದ ರೈತರು ಸಂಬಂಧಿಸಿದ ಬ್ಯಾಂಕ್ ಶಾಖೆಗಳಲ್ಲಿ ಹಾಗೂ ಸಾಲ ಪಡೆಯದ ರೈತರು ಹತ್ತಿರದ ಸಿಎಸ್‌ಸಿ ಕೇಂದ್ರ, ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್ ಖಾತೆ ಹೊಂದಿರುವ ಬ್ಯಾಂಕ್‌ಗಳಲ್ಲಿ ವಿಮೆ ಕಂತು ತುಂಬಬಹುದಾಗಿದೆ.

ಪ್ರತಿ ಹೆಕ್ಟೇರ್ ದಾಳಿಂಬೆ ಬೆಳೆಗೆ 7620 ರೂ. ದ್ರಾಕ್ಷಿ ಬೆಳೆಗೆ 14000 ರೂ.ಗಳ ವಿಮೆ ಕಂತು ನಿಗದಿಪಡಿಸಲಾಗಿದೆ. ರೈತರು ವಿಮೆ ಕಂತು ಪಾವತಿಗೆ ಆಗಸ್ಟ 14 ಕೊನೆಯ ದಿನವೆಂದು ವಿಸ್ತರಣೆ ಮಾಡಲಾಗಿದೆ. ರೈತ ಬಾಂಧವರು ಯೋಜನೆಯ ಲಾಭ ಪಡೆದುಕೊಳ್ಳುವಂತೆ ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ರೈತ ಸಂಪರ್ಕ ಕೇಂದ್ರ, ಸಹಾಯಕ ತೋಟಗಾರಿಕೆ ಅಧಿಕಾರಿಗಳು, ವಿಮಾ ಕಂಪನಿ ಪ್ರತಿನಿಧಿಗಳು ಹಾಗೂ ಹತ್ತಿರದ ಬ್ಯಾಂಕ್ ಶಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

**ಡಿ.ದೇವರಾಜ ಅರಸು ರವರ 110 ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸೂಚನೆ**

# ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ.

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ: ಅಗಸ್ಟ್ 06– ಪ್ರತಿವರ್ಷದಂತೆ ಈ ವರ್ಷವೂ ಕೂಡ ಅರ್ಥಪೂರ್ಣವಾಗಿ ಡಿ,ದೇವರಾಜ ಅರಸು ರವರ 110 ನೇ ಜಯಂತಿಯನ್ನು ಆಚರಿಸಲು ಅಪರ ಜಿಲ್ಲಾಧಿಕಾರಿಗಳಾದ ರಾಯಪ್ಪ ಹುಣಸಗಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಗಸ್ಟ್ 20 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಸಾರ್ವಜನಿಕ ಉದ್ಯಾನವನದಲ್ಲಿರುವ ವೀರಶೈವ ಕಲ್ಯಾಣ ಮಂಟಪದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ

ಎಲ್ಲ ಸರಕಾರಿ ಅರೆಸರಕಾರಿ ಕಚೇರಿಗಳಲ್ಲಿ ಬೆಳಿಗ್ಗೆ 9 ಗಂ–ಟೆಗೆ ಆಚರಿಸಬೇಕು. ಸರಕಾರಿ ಮತ್ತು ಅರೆ ಸರ್ಕಾರಿ ಶಾಲಾ ಕಾಲೇಜುಗಳಲಿ ತಾಲೂಕು ಮತ್ತು ಜಿಲ್ಲಾ ಪಂಚಾಯತಗಳಲ್ಲಿ ಕಡ್ಡಾಯವಾಗಿ ಜಯಂತಿಯನ್ನು ಆಚರಿಸಲು ತಿಳಿಸಿದರು.

ಭಾವಚಿತ್ರಕ್ಕೆ ಮಾಲಾರ್ಪಣೆ ಹೂದಾನಿಗಳಿಂದ ಅಲಂಕರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕುಡಿಯುವ ನೀರು ಹಾಗೂ ಸ್ವಚ್ಛತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಾಜ ಮುಖಂಡರು ಮಾತನಾಡಿ, ಮೆರವಣಿಗೆ ಹೆಚ್ಚಿನ ಕಲಾ ತಂಡಗಳನ್ನು ತರಬೇಕೆಂದು ಸಮಾಜದ ಮುಖಂಡ ಮನವಿ ಮಾಡಿಕೊಂಡಾಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರು ಮಾತನಾಡಿ, 02 ಕಲಾತಂಡಗಳನ್ನು ನೀಡಲಾಗುವುದು ನಾಡಗೀತೆ ಮತ್ತು ಸಾಂಸ್ಕೃತಿ ಕಾರ್ಯಕ್ರಮಗಳು ಏರ್ಪಡಿಸಲಾಗುವುದು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಡಿ.ದೇವರಾಜ ಜಯಂತಿ ದಿನಾಚರಣೆಯ ಅಂಗವಾಗಿ ನುರಿತ ಉಪನ್ಯಾಸಕರನ್ನಾಗಿ ಬಿ.ಎಂ. ರಾವೂರು ಅವರನ್ನು ನೇಮಿಸಲು ಹಾಜರಿದ್ದ ಸಂಘ ಸಂಸ್ಥೆಯ ಸದಸ್ಯರುಗಳು ಕೋರಿದರು.

ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆಯನ್ನು ಆಚರಿಸಲು ಬೆಳಿಗ್ಗೆ 8 ಗಂ–ಟೆಗೆ ಡಿ.ದೇವರಾಜ ಅರಸು ಅವರ ಭಾವಚಿತ್ರದೊಂದಿಗೆ ಕಲಾತಂಡಗಳೊಂದಿಗೆ ಭವ್ಯವಾದ ಮೆರವಣಿಗೆಯನ್ನು ಕಲಬುರಗಿ ನಗರೇಶ್ವರ ಶಾಲೆ ಗಂಜದಿಂದ ಆರಂಭಗೊಂಡು ಪಬ್ಲಿಕ್ ಗಾರ್ಡನ್‌ದಿಂದ ವೀರಶೈವ ಕಲ್ಯಾಣ ಮಂಟಪಕ್ಕೆ ಮುಕ್ತಾಗೊಳ್ಳುವುದು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಸೋಮಶೇಖರ ವೈ. ಅವರು ಮಾತನಾಡಿ, 2024–25 ನೇ ಸಾಲಿನಲ್ಲಿ ಇಲಾಖೆಯ ಜಿಲ್ಲೆಯ ಹಿಂದುಳಿದ ವಸತಿ ನಿಲಯಗಳಲ್ಲಿ ಅತಿ ಹೆಚ್ಚು ಅಂಕಗಳಿಸಿದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಮತ್ತು ವಸತಿ ನಿಲಯದಲ್ಲಿ ಇದ್ದುಕೊಂಡು ಉನ್ನತ ವಿದ್ಯಭ್ಯಾಸ ಮಾಡಿ ಎಂ.ಬಿ.ಬಿ.ಎಸ್ ಮತ್ತು ಐ.ಐ.ಟಿ ಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಸನ್ಮಾನ ಮಾಡಲಾಗುವುದು. ಶಾಲಾ ಕಾಲೇಜುಗಳಲ್ಲಿ ಬಾಷಣ, ರಸಪ್ರಶ್ನೆ, ಪ್ರಬಂದ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಡಿ.ದೇವರಾಜ ಅರಸು ಕಳೆದ ಬಾರಿ ಐದು ಪ್ರಶಸ್ತಿಗಳನ್ನು ನೀಡಿದ್ದಾರೆ ಈಗ ಕೇವಲ ಒಂದೇ ಪ್ರಶಸ್ತಿ ನೀಡಲು ಸರ್ಕಾರ ನಿರ್ಧರಿಸಿದ್ದು, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಐದು ಪ್ರಶಸ್ತಿಗಳನ್ನು ನೀಡಲು ಸಾಹಿತಿ ಡಾ. ಚಿ.ಸಿ. ನಿಂಗಣ್ಣ ಸಭೆಯಲ್ಲಿ ಮನವಿ ಮಾಡಿಕೊಂಡರು.

ಮರಾಠ ಸಮಾಜದ ಅಧ್ಯಕ್ಷರಾದ ಆರ್.ಬಿ.ಜಗದಾಳೆ, ಸವಿತಾ ಸಮಾಜದ ಅಧ್ಯಕ್ಷರಾದ ಆನಂದ, ಉಪ್ಪಾರ ಸಮಾಜದ ಕಾರ್ಯದರ್ಶಿ ವೆಂಕಟೇಶ್ ಸವಿತಾ ಸಮಾಜದ ಮಾಜಿ ಅಧ್ಯಕ್ಷ ಅಶೋಕ ಡೈಮಂಡ್ ಈಡಿಗ ಸಮಾಜದ ಮುಖಂಡರಾದ ಅಂಬಯ್ಯ ಎಂ.ಗತ್ತೇದಾರ ಸೇರಿದಂತೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾಜದ ಮುಖಂಡರುಗಳು ಉಪಸ್ಥಿತರಿದ್ದರು.

# ವಿದ್ಯಾಭ್ಯಾಸದಿಂದ ಯಶಸ್ಸು ಗಳಿಸಿ : ಸಚಿವ ಜಮೀರ್ ಅಹಮದ್ ಖಾನ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಆ.6:ವಿದ್ಯಾರ್ಥಿಗಳು ಉತ್ತಮ ವಿದ್ಯಾಭ್ಯಾಸದಿಂದ ಜೀವನದಲ್ಲಿ ಯಶಸ್ಸು ಗಳಿಸಿ ತಂದೆ ತಾಯಿಗಳಿಗೆ ಹಾಗೂ ದೇಶಕ್ಕೆ ಕೀರ್ತಿ ತರಬೇಕು ಎಂದು ವಸತಿ ಹಾಗೂ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಬಿ. ಝಡ್. ಜಮೀರ್ ಅಹಮದ್ ಖಾನ್ ಅವರು ತಿಳಿಸಿದರು.

ಇಂದು ಡಾ.ಬಿ.ಆರ್.ಅಂಬೇಡ್ಕರ್ ಭವನ ಸಭಾಂಗಣದಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯ ವತಿಯಿಂದ 2025-26ನೇ ಸಾಲಿನ ಶೈಕ್ಷಣಿಕ ಕಾರ್ಯಾಗಾರ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಚಿವರು, ತಂದೆ-ತಾಯಂದಿರು ಕಷ್ಟಪಟ್ಟು ಓದಿಸುತ್ತಾರೆ. ಮುಂದೆ ಮಕ್ಕಳು ಕಷ್ಟಪಡಬಾರದು ಮುಂದಿನ ಜೀವನದಲ್ಲಿ ಯಶಸ್ಸು ಗಳಿಸಬೇಕು ಎಂಬುದು ಅವರ ಆಸೆಯಾಗಿರುತ್ತದೆ. ಮಕ್ಕಳು ಓದುವ ವಯಸ್ಸಿನಲ್ಲಿ ಚೆನ್ನಾಗಿ ವಿದ್ಯಾಭ್ಯಾಸವನ್ನು ಮಾಡಿ ತಂದೆ-ತಾಯಿಗಳಿಗೆ ಕೀರ್ತಿ ತರಬೇಕು ಎಂದು ಕಿವಿಮಾತು ಹೇಳಿದರು.

ನನ್ನ ತಂದೆ ತಾಯಿಗಳು ಕಾನ್ವೆಂಟ್ ಸ್ಕೂಲ್‌ನಲ್ಲಿ ಓದಿಸಿದರು. ಆದರೆ ನಾನು ಹತ್ತನೇ ತರಗತಿಯವರೆಗೆ ಮಾತ್ರ ವಿದ್ಯಾಭ್ಯಾಸವನ್ನು ಮಾಡಿದೆ. ನಂತರ ವಿದ್ಯಾಭ್ಯಾಸವನ್ನು ಮುಂದುವರೆಸಲಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಆದ್ದರಿಂದ ನಾನು ಹೆಚ್ಚಾಗಿ ಓದಿಲ್ಲ. ಮಕ್ಕಳು ಚೆನ್ನಾಗಿ ಓದಲಿ ಎಂದು ವಿದ್ಯಾಭ್ಯಾಸಕ್ಕೆ ಆದ್ಯತೆ ನೀಡುತ್ತಿದ್ದೇನೆ. ಪ್ರಯತ್ನ ಪಟ್ಟರೆ ಮುಂದೆ ನೀವು ಏನು ಬೇಕಾದರೂ ಸಾಧಿಸಬಹುದು. ನಾನು 5 ಬಾರಿ ಶಾಸಕ, 3 ಬಾರಿ ಸಚಿವರಾಗಿದ್ದೇನೆ ಎಂದು ತಿಳಿಸಿದರು.

ನನಗೆ ರಾಜಕೀಯದ ಗುರು ಮಾಜಿ ಪ್ರಧಾನಿ ದೇವೇಗೌಡರು. ರಾಜಕೀಯವಾಗಿ ಬೆಳೆಯಲು ಅವರು ಸಹಾಯ ಮಾಡಿದರು. ಅವರು ಬಡತನದಿಂದ ಹುಟ್ಟಿ ರೈತರ ಮಗನಾಗಿ ನಂತರ ಪ್ರಧಾನಿಯಾದರು. ಮುಂದೆ ನಿಮ್ಮಲ್ಲಿ ಯಾರಾದರೂ ಪ್ರಧಾನಿಯಾಗಬಹುದು ಎಂದು ತಿಳಿಸಿದರು.

2023ನೇ ಸಾಲಿನಲ್ಲಿ 1,20,350 ಅಲ್ಪಸಂಖ್ಯಾತ ವಿದ್ಯಾರ್ಥಿಗಳು ದಾಖಲಾತಿ ಹೊಂದಿದ್ದರು. ಪ್ರಸ್ತುತ 2,08,065 ವಿದ್ಯಾರ್ಥಿಗಳಿದ್ದಾರೆ. ಮುಂದಿನ 3 ವರ್ಷದಲ್ಲಿ 5 ಲಕ್ಷ ವಿದ್ಯಾರ್ಥಿಗಳ ದಾಖಲಾತಿ ಹೊಂದುವ ಗುರಿ ಇದೆ ಎಂದು ತಿಳಿಸಿದರು.

ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿವೇತನವನ್ನು 2025-26ನೇ ಸಾಲಿನಿಂದ ರೂ.20 ಲಕ್ಷಗಳಿಂದ 30 ಲಕ್ಷಗಳವರೆಗೆ ಹೆಚ್ಚಿಸಲಾಗಿದೆ. 2023-24ನೇ ಸಾಲಿನಲ್ಲಿ ಬೆಂಗಳೂರು ನಗರದ ಹಜ್ ಭವನದಲ್ಲಿ ವಸತಿ ಸಹಿತ ಐಎಎಸ್/ಕೆಎಎಸ್ ಪರೀಕ್ಷಾ ಪೂರ್ವ ತರಬೇತಿ ನೀಡಲಾಗುತ್ತಿದೆ. ಈಗಾಗಲೇ ತರಬೇತಿಯನ್ನು ಪಡೆದ ಕೆಲವು ವಿದ್ಯಾರ್ಥಿಗಳು ಸರ್ಕಾರದ ವಿವಿಧ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು. ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗೆ 2022-23ರಲ್ಲಿ 850 ಕೋಟಿ ಅನುದಾನ ಮಂಜೂರಾಗಿದ್ದು, 2025-26ರಲ್ಲಿ 4537 ಕೋಟಿ ಅನುದಾನ ಮಂಜೂರಾಗಿದೆ. ಒಟ್ಟು 12,72,912 ವಿದ್ಯಾರ್ಥಿಗಳಿಗೆ 416.39 ಕೋಟಿ ವಿದ್ಯಾರ್ಥಿ ವೇತನ ನೀಡಲಾಗಿದೆ. ಬಡ ಮಕ್ಕಳು ವಸತಿ ಶಾಲೆಯಲ್ಲಿ ಕಲೆಯುತ್ತಿರುತ್ತಾರೆ. ಅವರು ತಂದೆ, ತಾಯಿಯನ್ನು ಬಿಟ್ಟು ಶಾಲೆಗೆ ಬಂದಿರುತ್ತಾರೆ ಅವರನ್ನು ನಿಮ್ಮ ಮಕ್ಕಳ ರೀತಿ ನೋಡಿಕೊಳ್ಳಿ. ಅವರ ಹತ್ತಿರ ಕಠಿಣವಾಗಿ ನಡೆದುಕೊಳ್ಳಬೇಡಿ. ಅವರನ್ನು ಪ್ರೀತಿಯಿಂದ ಮಾತನಾಡಿಸಿ, ಉತ್ತಮ ವಿದ್ಯಾಭ್ಯಾಸ ನೀಡಿ ಎಂದು ಶಿಕ್ಷಕರು, ಪ್ರಾಂಶುಪಾಲರು, ವಾರ್ಡನ್ ಅವರಿಗೆ ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಸಚಿವರು 2025-26ನೇ ಸಾಲಿನ ಶೈಕ್ಷಣಿಕ ಕ್ರಿಯಾ ಯೋಜನೆ ಪುಸ್ತಕ, 2025-26ನೇ ಸಾಲಿನ ಕ್ರಿಯಾ ಯೋಜನೆ ಪುಸ್ತಕ, ಕಾಫಿ ಟೇಬಲ್ ಪುಸ್ತಕ, ಇಲಾಖಾ ಯೋಜನೆಗಳ ಕೈಪಿಡಿ, 02 ವರ್ಷಗಳ ಇಲಾಖಾ ಸಾಧನೆ ಪುಸ್ತಕವನ್ನು ಬಿಡುಗಡೆ ಮಾಡಿದರು. ಇದೇ ಸಂದರ್ಭದಲ್ಲಿ ಆರು ಮೆಡಲ್‌ಗಳನ್ನು ಪಡೆದ ಕುಮಾರಿ. ಕೆ.ಎಂ ರೂಫಿಯಾ ಅವರಿಗೆ 1 ಲಕ್ಷ ಬಹುಮಾನ ನೀಡಲಾಯಿತು ಅಲ್ಲದೆ ಎಂ.ಬಿ.ಬಿ.ಎಸ್. ಸೀಟ್ ಪಡೆದ ಕುಮಾರಿ ಎ.ಆರ್.ರಿದಾ ಇವರಿಗೆ ಡಾಕ್ಟರ್ ಆಗುವವರೆಗಿನ ವೆಚ್ಚವನ್ನು ಸ್ವತ: ಸಚಿವರೇ ಭರಿಸುವುದಾಗಿ ತಿಳಿಸಿದರು. ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ಅತ್ಯುತ್ತಮ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ಉತ್ತಮ ಕಾರ್ಯನಿರ್ವಹಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ವಿಸ್ತರಣಾಧಿಕಾರಿಗಳು, ಪ್ರಾಂಶುಪಾಲರು, ಉಪನ್ಯಾಸಕರು, ಶಿಕ್ಷಕರನ್ನು ಸಚಿವರು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷ ಬಿ.ಕೆ. ಅಲ್ತಫ್ ಖಾನ್, ವಸತಿ ಕರ್ನಾಟಕ ರಾಜ್ಯ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷ ಡಾ. ಎಸ್. ಜಾಫೆಟ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ (ನಿವೃತ್ತ) ಯು. ನಿಸ್ಸಾರ್ ಅಹಮದ್ ಸೇರಿದಂತೆ ಹಿರಿಯ ಗಣ್ಯರು ಉಪಸ್ಥಿತರಿದ್ದರು.

# ಜಿಲ್ಲಾ ಸಮನ್ವಯ ಸಮಿತಿ ಸಭೆ: ಮಿಷನ್ ಸುರಕ್ಷಾ ತೀವ್ರಗೊಳಿಸಿ,ಬಾಲ್ಯ ವಿವಾಹ ತಡೆಯಿರಿ:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.6:ಮಹಿಳೆಯರ ಮತ್ತು ಹೆಣ್ಣುಮಕ್ಕಳ ರಕ್ಷಣೆ ನಿಟ್ಟಿನಲ್ಲಿ ಅರಿವು ಮೂಡಿಸುವ ಮಿಷನ್ ಸುರಕ್ಷಾ ಮಿಷನ್ ಅಭಿಯಾನ ಕಲಬುರಗಿ ಜಿಲ್ಲೆಯಾದ್ಯಂತ ತೀವ್ರಗೊಳಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಖಡಕ್ ಸೂಚನೆ ನೀಡಿದರು. ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಕುರಿತು ಜಿಲ್ಲಾ ಸಮನ್ವಯ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹಿಳೆಯರ ಮತ್ತು ಮಕ್ಕಳ ರಕ್ಷಣೆ ನಿಟ್ಟಿನಲ್ಲಿ ಗ್ರಾಮ ಪಂಚಾಯತ ಕಾವಲು ಸಮಿತಿ ರಚನೆಯಾಗಿದ್ದು, ಇದೂವರೆಗೆ ಸಭೆ ನಡೆಸದವರು ಮುಂದಿನ ಒಂದು ತಿಂಗಳಲ್ಲಿ ಸಭೆ ನಡೆಸಬೇಕು ಎಂದರು. ಜಿಲ್ಲೆಯಾದ್ಯಂತ ಬಾಲ್ಯ ವಿವಾಹ ತಡೆಯಬೇಕು. ಬಾಲ್ಯ ವಿವಾಹದ ನಂತರ ಪ್ರಕರಣ ದಾಖಲಿಸುವುದಷ್ಟೆ ನಮ್ಮ ಕೆಲಸವಾಗಬಾರದು. ಬಾಲ್ಯ ವಿವಾಹ ತಡೆಯುವುದು ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು. ಬಾಲ ಗರ್ಭಿಣಿಯರ ಬಗ್ಗೆ ಆರೋಗ್ಯ ಇಲಾಖೆ ಎಚ್ಚರ ವಹಿಸಬೇಕು ಎಂದ ಅವರು, ಪೋಷಣ ಅಭಿಯಾನದಡಿ ಶೇ.100 ರಷ್ಟು ಗುರಿ ಸಾಧಿಸಬೇಕು. ಆಧಾರ್ ಲಿಂಕೇಜ್ ಸಮಸ್ಯೆ ಬಗೆಹರಿಸಬೇಕು ಎಂದರು. ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯಡಿ ಪ್ರಗತಿ ಪರಿಶೀಲನಾ ವೇಳೆಯಲ್ಲಿ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಅಂಗನವಾಡಿ ಕೇಂದ್ರದಲ್ಲಿ 6 ವರ್ಷದೊಳಗಿನ ಮಕ್ಕಳು, ಗರ್ಭಿಣಿ ಮಹಿಳೆಯರು, ಬಾಣಂತಿಯರ ಮುಖ ಗುರುತಿಸುವಿಕೆ ಆಧಾರದ ಮೇಲೆ ಅನುದಾನ ಬಿಡುಗಡೆ ಆಗಬೇಕು. ಫಲಾನುಭವಿಗಳ ಶೇ.100 ರಷ್ಟು ಮುಖ ಗುರುತಿಸುವಿಕೆ ಕಾರ್ಯ ಪೂರ್ಣಗೊಳಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಸ್ಪಷ್ಟ ಸೂಚನೆ ಇದ್ದು, ಇದನ್ನು ಎಲ್ಲಾ ಸಂಸ್ಥೆಗಳು ಕಟ್ಟುನಿಟ್ಟಾಗಿ ಪಾಲಿಸಬೇಕು. ಸಿ.ಡಿ.ಪಿ.ಓ ಗಳು ಇದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದರು. ಮಹಿಳಾ ಸ್ತ್ರೀ ಶಕ್ತಿ ಗುಂಪುಗಳು ಆದಾಯೋತ್ಪನ್ನ ಚಟುಚಟಿಕೆಯಲ್ಲಿ ಭಾಗವಹಿಸುವಂತಾಗಲು ಪ್ರೋತ್ಸಾಹ ನೀಡಬೇಕು. ಸಂಚಾರಿ ಕ್ಯಾಂಟಿನ್, ರೊಟ್ಟಿ ತಯ್ಯಾರಿಕೆ, ಕೇಕ್ ತಯಾಕೆ, ವಾಹನ ಚಾಕನೆ ತರಬೇತಿ ಕೊಟ್ಟು ವಾಹನದ ಮೂಲಕ ತಮ್ಮ ಉತ್ಪನ್ನಗಳ ಮಾರಾಟ ಮಾಡುವಂತಾಗಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಆಲೋಚನೆ ಮಾಡಬೇಕು ಎಂದು ಡಿ.ಸಿ ತಿಳಿಸಿದರು. ಲಿಂಗತ್ವ ಅಲ್ಪಸಂಖ್ಯಾತರು ಹಣ ಕೇಳುವುದು ತಪ್ಪಿಸಿ: ಕಲಬುರಗಿ ನಗರ ಮತ್ತು ತಾಲೂಕಾ ಕೇಂದ್ರದ ಪ್ರಮುಖ ವೃತ್ತ ಗಳಲ್ಲಿ, ರಸ್ತೆಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಸಾರ್ವಜನಿಕರಿಗೆ ಹಣ ಕೇಳುತ್ತಿದ್ದು, ಇದು ಸಾಮಾನ್ಯ ನಾಗರಿಕರಿಗೆ ತುಂಬಾ ಕಿರಿಕಿರಿಯಾಗುತ್ತಿದೆ. ಇದನ್ನು ತಪ್ಪಿಸಿ ಅವರನ್ನು ಮುಖ್ಯ ವಾಹಿನಿಗೆ ತರಬೇಕು. ದಮನಿತ ಮಹಿಳೆಯರು, ಮಾಜಿ ದೇವಾದಾಸಿ ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ವಿವಿಧ ವಸತಿ ಯೋಜನೆಯಡಿ ವಸತಿ ಸೌಲಭ್ಯ ಕಲ್ಪಿಸಬೇಕು. ಲಿಂಗತ್ವ ಅಲ್ಪಸಂಖ್ಯಾತರಿಗೆ ಟ್ರಾನ್ಸ್ ಜೆಂಡರ್ ಕಾರ್ಡ್ ನೀಡಿ ಅವರನ್ನು ಗುರುತಿಸಬೇಕು. ನಂತರ ಅವರಿಗೆ ಸ್ವಯಂ ಉದ್ಯೋಗ ತರಬೇತಿ ಕೊಡಬೇಕು. ನರೇಗಾ ಜಾಬ್ ಕಾರ್ಡ್ ನೀಡಿ ಉದ್ಯೋಗ ಕೊಡಿಸಬೇಕು. ಪ್ರತಿಯೊಬ್ಬರು ಗೌರವದಿಂದ ಬದುಕಬೇಕು ಎಂದರು. ಮಹಿಳೆಯರಿಗೆ ಮನೆ: ಜಿಲ್ಲೆಯಾದ್ಯಂತ 26 ಮಾಜಿ ದೇವದಾಸಿಯರಿಗೆ, 22 ಜನ ಲಿಂಗತ್ವ ಅಲ್ಪಸಂಖ್ಯಾತರಿಗೆ ಹಾಗೂ 21 ಜನ ದಮನಿತ ಮಹಿಳೆಯರಿಗೆ ವಿವಿಧ ವಸತಿ ಯೋಜನೆಯಡಿ ಕೆಸರಟಗಿ ಬಳಿ ರಾಜೀವ ಗಾಂಧಿ ಅವಾಸ್ ನಿಗಮದಿಂದ ನಿರ್ಮಿಸಕಾಗಿರುವ ಜಿ+3 ಬಹುಮಹಡಿಗಳಲ್ಲಿ ಮನೆ ಹಂಚಿಕೆ ಮಾಡಿದ್ದು, ಇನ್ನಷ್ಟೆ ಹಕ್ಕು ಪತ್ರ ವಿತರಣೆ ಮಾಡಬೇಕಿದೆ ಎಂದು ಅಧಿಕಾರಿ ಶಾಂತಲಾ ಅವರು ಸಭೆಗೆ ಮಾಹಿತಿ ನೀಡಿದರು. ವರ್ಕಿಂಗ್ ಹಾಸ್ಟೆಲ್ ಗೆ ಅನಿರೀಕ್ಷಿತ ಭೇಟಿ ಕೊಡಿ: ಕಲಬುರಗಿ ನಗರದಲ್ಲಿ ಕರ್ನಾಟಕ ಪೀಪಲ್ಸ್ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರತ ಮಹಿಳೆಯರ ಹಾಸ್ಟೆಲ್ ನಲ್ಲಿ ಮಂಜೂರಾದ 125ರಲ್ಲಿ 35 ಜನ ಮತ್ತು ಗುಲಬರ್ಗಾ ವಿ.ವಿ. ಹಾಸ್ಟೆಲ್ ನಲ್ಲಿ 196 ಎಲ್ಲಿ 37 ಜನ ಮಾತ್ರ ತಂಗಿದ್ದಾರೆ. ಕಲಬುರಗಿ ನಗರ ದೊಡ್ಡದಿದೆ. ಬೇರೆ ಕಡೆಯಿಂದ ಇಲ್ಲಿಗೆ ಕೆಲಸಕ್ಕೆ, ಇನ್ನಿತರ ಕಾಯಕ್ಕೆ ಮಹಿಳೆಯರು ಬರುತ್ತಾರೆ. ಇವರೆಲ್ಲರಿಗೂ ಅನುಕೂಲವಾಗಲೆಂದೇ ಈ ಹಾಸ್ಟೆಲ್ ಆರಂಭಿಸಿದ್ದು, ಹೆಚ್ಚಿನ ಪ್ರಚಾರ ನೀಡಬೇಕು ಎಂದರಲ್ಲದೆ ಗುಲಬರ್ಗಾ ವಿ.ವಿ. ಹಾಸ್ಟೆಲ್ ಕುರಿತು ಅನೇಕ ದೂರು ಬರುತ್ತಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಡಿ.ಡಿ. ಮತ್ತು ಡಿ.ಸಿ.ಪಿ.ಓ ಅವರು ವಸತಿನಿಲಯಕ್ಕೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಬೇಕು ಎಂದು ಡಿ.ಸಿ.ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ, ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ, ಡಿ.ಎಚ್.ಓ ಡಾ.ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ಪಾಟೀಲ, ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್, ಆರ್.ಸಿ.ಎಚ್.ಓ ಡಾ.ಸಿದ್ರಾಮ ಪಾಟೀಲ ಸೇರಿದಂತೆ ತಾಲೂಕಿನ ಸಿ.ಡಿ.ಪಿ.ಓ ಗಳು ಹಾಗೂ ಇತರೆ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

# ರಾಜ್ಯ ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ:ನಾಗೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.6-ರೈತಪರ ಕಾಳಜಿ ವಹಿಸದ ಕಾಂಗ್ರೆಸ್ ಸರಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಜನತಾ ಪಕ್ಷದ ರಾಜ್ಯ ಮಹಾ ಪ್ರಧಾನ ಕಾರ್ಯದರ್ಶಿ ನಾಗೇಶ್ ಎನ್. ಆರೋಪಿಸಿದ್ದಾರೆ.

ನಗರದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರಗೋಳನ್ನು ಕೇಳುವವರು ಯಾರೂ ಇಲ್ಲದಂತಾಗಿದೆ ಎಂದರು.

ಸರ್ಕಾರ ಆಡಳಿತ ನಡೆಸುವಲ್ಲಿ ಸಂಪೂರ್ಣ ವಿಫಲವಾಗಿದೆ. ಕಬ್ಬು ಬೆಳೆಗಾರರ ಗೋಳು ಅರಣ್ಯ ರೋಧನವಾಗಿದ್ದು, ಸಕ್ಕರೆ ಕಾರ್ಖಾನೆಗಳ ಮಾಲಿಕರ ಕೈಯಲ್ಲಿ ಸರ್ಕಾರ ಇದೆ. ಸಕಾಲದಲ್ಲಿ ಕಬ್ಬು ಬೆಳೆಗಾರರಿಗೆ ಹಣವನ್ನು ಪಾವತಿಸಿಲ್ಲ. ಆದರೆ ಜನಪ್ರತಿನಿಧಿಗಳ ಆದಾಯ ಮಾತ್ರ ಏರುತ್ತಲೇ ಇದೆ ಎಂದು ಆಪಾಧಿಸಿದರು.

ಕಾಂಗ್ರೆಸ್ ಸರ್ಕಾರ ರೈತರಿಗೆ ನೀಡಿದ ಭರವಸೆಗಳು ಹುಸಿಯಾಗಿದ್ದು, ಅನ್ನದಾತರನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ. ಮುಂಗಾರು ಮಳೆ ಸಮೃದ್ಧವಾಗಿದ್ದರೂ ಬೀಜ ಮತ್ತು ರಸಗೊಬ್ಬರವನ್ನು ರೈತರಿಗೆ ಒದಗಿಸಲು ಸರ್ಕಾರ ವಿಫಲವಾಗಿದೆ. ಕೃಷಿ ಸಚಿವರು ಸಮರ್ಪಕ ಗೊಬ್ಬರ ಪೂರೈಕೆಗೆ ಕ್ರಮ ಕೈಗೊಳ್ಳಬೇಕಾಗಿತ್ತು. ಬೇಜವಾಬ್ದಾರಿ ಉತ್ತರವನ್ನು ನೀಡುತ್ತಿದ್ದಾರೆ ಎಂದು ನಾಗೇಶ ಹೇಳಿದರು.

ಸರ್ಕಾರದ ಖಜಾನೆ ಖಾಲಿಯಾಗಿದ್ದು, ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸಲು ಸಾಧ್ಯವಾಗುತ್ತಿಲ್ಲ. ಅಲ್ಲದೆ ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳು ನಡೆಯುತ್ತಿದ್ದು, ಅದನ್ನು ತಡೆಗಟ್ಟುವಲ್ಲಿ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಬಾಗಲಕೋಟೆ ಜಿಲ್ಲೆಯಲ್ಲಿ 34 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ಸ್ಥಳೀಯ ಸಂಸ್ಥೆಯ ಚುನಾವಣೆಗಳನ್ನು ಸರ್ಕಾರ ತಕ್ಷಣವೇ ಮಾಡಬೇಕು. ರಾಜ್ಯದಲ್ಲಿ ಪ್ರಸ್ತುತ ಅಧಿಕೃತ ವಿರೋಧ ಪಕ್ಷಗಳೇ ಇಲ್ಲದಂತಾಗಿದ್ದು ಆಡಳಿತ ಕಾಂಗ್ರೆಸ್ ಪಕ್ಷವನ್ನು ಪ್ರಶ್ನಿಸುವವರು ಇಲ್ಲದಂತಾಗಿದೆ ಎಂದರು.

ಪಕ್ಷದ ರಾಷ್ಟ್ರೀಯ ಮಹಿಳಾ ಘಟಕದ ಅಧ್ಯಕ್ಷೆ ವಾಣಿ ಶೆಟ್ಟಿ ಮಾತನಾಡಿ, ಕಬ್ಬು ಬೆಳೆಗಾರರ ಸಂಕಷ್ಟಕ್ಕೆ ಸರ್ಕಾರವೇ ನೇರ ಹೊಣೆಯಾಗಿದೆ. ರಾಜಕಾರಣಿಗಳ ಕಪಿಮುಷ್ಠಿಯಲ್ಲಿ ಸಿಕ್ಕು ಸಕ್ಕರೆ ಕಾರ್ಖಾನೆಗಳು ನಲುಗುತ್ತಿವೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಲಕ್ಷ್ಮೀ ಗೌಡರ್, ಪ್ರಕಾಶ, ಮಂಜುನಾಥ ಇದ್ದರು.

# ಉತ್ತರಕಾಶಿ ಬಳಿ ಮೇಘಸ್ಫೋಟ: ಜಿಲ್ಲೆಯಿಂದ ಉತ್ತರಕಾಶಿ ಪ್ರವಾಸಕ್ಕೆ ತೆರಳಿ ಸಿಲುಕಿಕೊಂಡಿದ್ದಲ್ಲಿ ಮಾಹಿತಿ ನೀಡಲು ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಆ.06:ದಿನಾಂಕ: 05-08-2025ರಂದು ಉತ್ತರಾಖಂಡದ ಉತ್ತರಕಾಶಿ ಬಳಿ ಮೇಘಸ್ಫೋಟದಿಂದ ದಿಢೀರ್ ಪ್ರವಾಹ, ಭೂಕುಸಿತ ಸಂಭವಿಸಿ ಹಲವರು ಜನ ಮೃತಪಟ್ಟಿದ್ದು, ಹತ್ತಾರು ಜನ ಕಾಣೆಯಾಗಿದ್ದಾರೆ. ಆದ್ದರಿಂದ ಕಲಬುರಗಿ ಜಿಲ್ಲೆಯಿಂದ ಉತ್ತರಾಖಂಡದ ಉತ್ತರಕಾಶಿಗೆ ಪ್ರವಾಸಕ್ಕೆ ತೆರಳಿ ಮೇಲ್ಕಂಡ ಘಟನೆಯಲ್ಲಿ ಸಿಲುಕಿಕೊಂಡಿದ್ದಲ್ಲಿ ಅಂತಹವರುಗಳ ಮಾಹಿತಿಯನ್ನು ಸಂಬಂಧಿಸಿದವರು ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ 08472-278677 ಹಾಗೂ ಪೊಲೀಸ್ ಕಂಟ್ರೋಲ್ ಸಂಖ್ಯೆ 9480805500, 9480803500, 08472-263604, 228112ಗೆ ಕರೆ ಮಾಡಿ ಮಾಹಿತಿ ನೀಡಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

# ಮಸೀದಿಯಲ್ಲಿ ಬಾಲಕಿ ಮೇಲೆ ಅತ್ಯಾಚಾರ ಎಸಗಿದ್ದವನ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ:ಅ.6: 2023ರ ಅಕ್ಟೋಬರ್‌ನಲ್ಲಿ ಬೆಳಗಾವಿ ಜಿಲ್ಲೆಯ ಯರಗಟ್ಟಿ ಪಟ್ಟಣದ ಮಸೀದಿಯಲ್ಲಿ ಐದು ವರ್ಷದ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಪ್ರಕರಣ ಇತ್ತೀಚೆಗೆ ಬೆಳಕಿಗೆ ಬಂದಿದ್ದು, ಆರೋಪಿಯನ್ನು ತುಫೆಲಹ್ಮದ್ ದಾದಾಪೀರ್ ನಾಗರ್ಚಿ(22) ಯನ್ನು ಪೊಲೀಸರು ಬುಧವಾರ ಬಂಧಿಸಿದ್ದಾರೆ.

ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ತಮ್ಮ ಟ್ವಿಟರ್ ಹ್ಯಾಂಡಲ್‌ನಲ್ಲಿ ಮಸೀದಿ ಒಳಗಿನ ಸಿಸಿಟಿವಿ ದೃಶ್ಯಾವಳಿಯನ್ನು ಪೋಸ್ಟ್ ಮಾಡಿದ ನಂತರ ಅಪ್ರಾಪ್ತ ಬಾಲಕಿಯ ಮೇಲಿನ ಅತ್ಯಾಚಾರ ಘಟನೆ ಬೆಳಕಿಗೆ ಬಂದಿದೆ.

ಕೆರೆಹಳ್ಳಿ ಟ್ವಿಟರ್‌ನಲ್ಲಿ ಘಟನೆಯನ್ನು ಬಹಿರಂಗಪಡಿಸಿದ ತಕ್ಷಣ ಪೊಲೀಸ್ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ ಎಂದು ಬೆಳಗಾವಿ ಎಸ್‌ಪಿ ಭೀಮಾಶಂಕರ್ ಗುಳೇದ್ ಅವರು ಹೇಳಿದ್ದಾರೆ.

ಪೊಲೀಸರು ಬಾಲಕಿಯ ಪೋಷಕರನ್ನು ಭೇಟಿಯಾಗಿದ್ದು, ಅವರು ಘಟನೆಯ ಬಗ್ಗೆ ಪೊಲೀಸರನ್ನು ಸಂಪರ್ಕಿಸಿಲ್ಲ. ಪ್ರಕರಣದಲ್ಲಿ ಪೊಲೀಸರು ಟ್ವಿಟರ್‌ನಲ್ಲಿ ಪೋಸ್ಟ್ ಮಾಡಿದ ವಿಡಿಯೋ ಕ್ಲಿಪ್ ಅನ್ನು ದಾಖಲೆಯಾಗಿ ಬಳಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಪೊಲೀಸರು ತಕ್ಷಣ ಕ್ರಮ ಕೈಗೊಂಡು ಮುಧೋಳ ತಾಲ್ಲೂಕಿನ ಮಹಾಲಿಂಗಪುರ ಪಟ್ಟಣದಲ್ಲಿ ಆರೋಪಿಯನ್ನು ಬಂಧಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

# ಎಂಬಿಬಿಎಸ್ ಪದವಿಧರೆ ಕಾಂಚನಾರಿಂದ ಮಾಜಿ ಸಚಿವ ಪಾಟೀಲ್‌ಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಆ.6: ಪಟ್ಟಣದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ತಾಲೂಕಿನ ಕಲ್ಲೂರ ಗ್ರಾಮದ ಯುವ ಪ್ರತಿಭಾವಂತೆ, ಎಂಬಿಬಿಎಸ್ ಪದವಿಧರೆ ಕಾಂಚನಾ ಕೋನೇರಿ ಸನ್ಮಾನಿಸಿದರು.

ಬಳಿಕ ಎಂಬಿಬಿಎಸ್ ಪದವಿಧರೆ ಕಾಂಚನಾ ಮಾತನಾಡಿ, ಕಡು ಬಡತನದ ಮಧ್ಯೆ ಮುಂದಿನ ತರಗತಿಗಳ ವ್ಯಾಸಂಗದ ಚಿಂತೆ ಕಾಡುತ್ತಿರುವ ಸಮಯದಲ್ಲಿ ಭೂಸೇನಾ ನಿಗಮ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತದ್ದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ವೈಯಕ್ತಿಕವಾಗಿ ಸಹಾಯಧನ ನೀಡುವ ಮೂಲಕ ನನ್ನ ಶೈಕ್ಷಣಿಕ ಕ್ಷೇತ್ರದ ಪ್ರಗತಿಗೆ ಸಹಕಾರ ನೀಡಿದ ಪರಿಣಾಮವಾಗಿ ಇಂದು ನಾನು ಎಂಬಿಬಿಎಸ್ ಪದವಿ ಪಡೆದಿದ್ದೇನೆ ಎಂದು ಸಂತಸ ವ್ಯಕ್ತಪಡಿಸಿದರು.

> ಬಡತನವನ್ನು ಲೆಕ್ಕಿಸದೇ ನಿರಂತರ ಅಧ್ಯಯನ, ಕಠಿಣ ಪರಿಶ್ರಮದೊಂದಿಗೆ ಕಾಂಚನಾ ಕೋನೇರಿ ಎಂಬಿಬಿಎಸ್ ಪದವಿ ಪಡೆದು ಕಲ್ಲೂರ್ ಗ್ರಾಮಕ್ಕೆ ಮಾದರಿಯಾಗಿದ್ದಾಳೆ. ಮುಂದೆಯೂ ಓದುವ ಇಚ್ಛೆಯಿದ್ದರೆ ಅವಳ ಸ್ನಾತಕೋತ್ತರ ವ್ಯಾಸಂಗಕ್ಕೂ ವೈಯಕ್ತಿಕವಾಗಿ ಸಹಾಯಧನ ನೀಡಲಾಗುವುದು.
> **ರಾಜಶೇಖರ ಪಾಟೀಲ್ ಮಾಜಿ ಸಚಿವರು ಹುಮನಾಬಾದ್**

ಹಾಸನ್ ಇನ್ಸಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನಲ್ಲಿ ಎಂಬಿಬಿಎಸ್ ಪದವಿ ಪಡೆದು ಉತ್ತಮ ಸಾಧನೆ ಗೈದ ತಾಲೂಕಿನ ಕಲ್ಲೂರ ಗ್ರಾಮದ ಯುವ ಪ್ರತಿಭಾವಂತೆ ಕಾಂಚನಾ ಕೋನೇರಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ವಿಶೇಷವಾಗಿ ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಗ್ರಾಪಂ. ಸದಸ್ಯೆ ಅಶ್ವಿನಿ ಪಾಟೀಲ್, ಶಾಂತಯ್ಯಸ್ವಾಮಿ, ವೆಂಕಟ ಕೋನೇರಿ, ವಿಜಯಲಕ್ಷ್ಮಿ ಕೋನೇರಿ, ಶಿವಕಾಂತ ಬಟಾನಪೂರೆ, ಕಾಶಿನಾಥ ರೆಡ್ಡಿ, ಸಚೀನ ದಾಡಗಿ, ಉಮೇಶ ದಾಡಗಿ, ಅರುಣ ಮಾಳಗೊಂಡ ಸೇರಿ ಅನೇಕರಿದ್ದರು.

# ಭಾರತಕ್ಕೆ ಮತ್ತೊಂದು ಶಾಕ್ : ಆಮದುಗಳ ಮೇಲೆ ಶೇ.50 ಸುಂಕ ವಿಧಿಸಿದ ಟ್ರಂಪ್



ಮಲ್ಲಮ್ಮನುಡಿವಾರ್ತೆ ವಾಷಿಂಗ್ಟನ್:ಅ.6: ಭಾರತ ರಷ್ಯಾದಿಂದ ಕಚ್ಚಾ ತೈಲ ಖರೀದಿ ಮುಂದುವರಿಸಿದ್ದಕ್ಕೆ ಪ್ರತಿಯಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತಕ್ಕೆ ಶೇ.50 ಸುಂಕ ವಿಧಿಸಿ ಶಾಕ್ ಕೊಟ್ಟಿದ್ದಾರೆ. ಭಾರತಕ್ಕೆ ಹೆಚ್ಚುವರಿಯಾಗಿ ಶೇ.25 ಸುಂಕ ವಿಧಿಸುವ ಆದೇಶಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇದೀಗ ಸಹಿ ಹಾಕಿದ್ದಾರೆ. ಆದೇಶದ ಪ್ರಕಾರ, ಭಾರತದಿಂದ ಅಮೆರಿಕಕ್ಕೆ ಆಮದು ಮಾಡಿಕೊಳ್ಳುವ ಸರಕುಗಳು ಹೆಚ್ಚುವರಿಯಾಗಿ ಶೇ.25 ಆಮದು ಸುಂಕವನ್ನು ಎದುರಿಸಬೇಕಾಗುತ್ತದೆ.

ಭಾರತವು ನಮ್ಮ ಉತ್ತಮ ವ್ಯಾಪಾರ ಪಾಲುದಾರನಲ್ಲ. ಏಕೆಂದರೆ ಭಾರತ ನಮ್ಮೊಂದಿಗೆ ಬಹಳಷ್ಟು ವ್ಯವಹಾರ ಮಾಡುತ್ತಾರೆ. ಆದ್ರೆ ನಾವು ಅವರೊಂದಿಗೆ ವ್ಯಾಪಾರ ಮಾಡಲ್ಲ. ಆದ್ದರಿಂದ ನಾವು 25 ಪ್ರತಿಶತದಷ್ಟು ಇತ್ಯರ್ಥಪಡಿಸಿಕೊಂಡಿದ್ದೇವೆ. ಆದ್ರೆ ನಾವು ಹೇಳಿದ ಮೇಲೂ ರಷ್ಯಾದಿಂದ ನಿರಂತರವಾಗಿ ತೈಲ ಖರೀದಿ ಮಾಡಲಾಗುತ್ತಿದೆ. ಈ ಮೂಲಕ ಭಾರತ ರಷ್ಯಾದ ಯುದ್ಧದ ಯಂತ್ರಕ್ಕೆ ಇಂಧನ ತುಂಬುತ್ತಿದೆ. ಹಾಗಾಗಿ ಮುಂದಿನ 24 ಗಂಟೆಗಳಲ್ಲಿ ಆಮದುಗಳ ಮೇಲೆ ಸುಂಕವನ್ನು ಗಣನೀಯವಾಗಿ ಏರಿಕೆ ಮಾಡುವುದಾಗಿ ಟ್ರಂಪ್ ಬೆದರಿಕೆಯೊಡ್ಡಿದ್ದರು. ಅದರಂತೆ ಭಾರತದ ಮೇಲೆ ಶೇ.50 ಸುಂಕ ವಿಧಿಸಿ ಟ್ರಂಪ್ ಆದೇಶ ಹೊರಡಿಸಿದ್ದಾರೆ.

ಒಂದು ದಿನದ ಹಿಂದಷ್ಟೇ ಸುಂಕ ಗಣನೀಯ ಏರಿಕೆ ಕುರಿತು ಟ್ರಂಪ್ ಮಾತನಾಡಿದ್ದರು. ಭಾರತ ರಷ್ಯಾದಿಂದ ದೊಡ್ಡ ಪ್ರಮಾಣದಲ್ಲಿ ಕಚ್ಚಾ ತೈಲ ಆಮದು ಮಾಡಿಕೊಳ್ಳುತ್ತಿದೆ. ಈ ಮೂಲಕ ದೊಡ್ಡ ಪ್ರಮಾಣದಲ್ಲಿ ಲಾಭ ಮಾಡಿಕೊಳ್ಳುತ್ತಿದೆ. ಭಾರತವು ದೊಡ್ಡ ಪ್ರಮಾಣದಲ್ಲಿ ರಷ್ಯಾದ ತೈಲ ಮಾತ್ರ ಖರೀದಿಸುತ್ತಿಲ್ಲ, ಖರೀದಿಸಿದ ತೈಲವನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ, ದೊಡ್ಡ ಪ್ರಮಾಣದ ಲಾಭ ಮಾಡಿಕೊಳ್ಳುತ್ತಿದೆ. ರಷ್ಯಾದ ಯುದ್ಧ ಟ್ಯಾಂಕರ್‌ಗಳಿಂದ ಉಕ್ರೇನ್‌ನಲ್ಲಿ ಹಲವು ಜನ ಸಾಯುತ್ತಿದ್ದರೂ ಅವರು ಹೆದರುತ್ತಿಲ್ಲ. ಈ ಕಾರಣದಿಂದಲೇ, ಭಾರತದಿಂದ ಖರೀದಿಸುವ ಎಲ್ಲ ಸರಕುಗಳಿಗೂ ಸುಂಕವನ್ನ ಗಣನೀಯವಾಗಿ ಏರಿಕೆ ಮಾಡಲಾಗುವುದು ಎಂದು ಟ್ರಂಪ್ ಎಚ್ಚರಿಕೆ ನೀಡಿದ್ದರು. ಈ ಮೊದಲು ಆಗಸ್ಟ್ 1ರಿಂದ ಅನ್ವಯವಾಗುವಂತೆ 'ಭಾರತದಿಂದ ಆಮದು ಮಾಡಿಕೊಳ್ಳುವ ಎಲ್ಲ ಸರಕುಗಳಿಗೂ ಶೇ.25 ನಷ್ಟು ಸುಂಕ ವಿಧಿಸುವ ಆದೇಶಕ್ಕೆ ಟ್ರಂಪ್ ಸಹಿ ಹಾಕಿದ್ದರು.


ಕರ್ನಾಟಕ ಸರಕಾರ

**(ಅರಣ್ಯ ಇಲಾಖೆ)**

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು,**

**ಪ್ರಾದೇಶಿಕ ಅರಣ್ಯ ಉಪ-ವಿಭಾಗ, ರವರ ಕಛೇರಿ ಕಲಬುರಗಿ.**

ಸಂಖ್ಯೆ:ಸಅಸಂ/ಉವಿಕ/ಮ್ಯಾ-ಟೆಂಡರ್/ಸಿಆರ್- /2025-26 ದಿನಾಂಕ:04.08.2025

**:: ಅಲ್ಪಾವಧಿ ಟೆಂಡರ್ ಪ್ರಕಟಣೆ ::**

**(ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪೋರ್ಟಲ್ ನಡಿಯಲ್ಲಿ ಮಾತ್ರ )**

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ ಪ್ರಾದೇಶಿಕ ಅರಣ್ಯ ವಿಭಾಗ ಕಲಬುರಗಿ ರವರ ಕಛೇರಿಯಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ advance work & Raising of Monsoon Plantation ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪೋರ್ಟಲ್ ನಡಿಯಲ್ಲಿ 11 ಕಾಮಗಾರಿಗಳಿಗೆ **ಎರಡನೇ ಮತ್ತು ಮೂರನೇ ಬಾರಿಗೆ** ಟೆಂಡರ್ ಅಹ್ವಾನಿಸಲಾಗಿದ್ದು. ವಿವರ ಈ ಕೆಳಗಿನಂತಿವೆ. ಕಾಮಗಾರಿಯ ವಿವರ : **ಕಲಬುರಗಿ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ ಪ್ರತ್ಯಕವಾಗಿ ಟೆಂಡರ್ ಅಹ್ವಾನಿಸಲಾಗಿದೆ.** 1) ಟೆಂಡರ್‌ಗಿಟ್ಟ ಮೊತ್ತ : ಕನಿಷ್ಟ 920700.00, ಗರಿಷ್ಟ 1651550.00, 2) ಲೆಕ್ಕ ಶೀರ್ಷಿಕೆ: ವಿವಿಧ ಯೋಜನೆಗಳಡಿ **ಎರಡನೇ ಕರೆ:** 3) ತಾಂತ್ರಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ : **ದಿನಾಂಕ: 18.08.2025 ಅಪರಾಹ್ನ 1.30 ಗಂಟೆ ವರೆಗೆ,** 4) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ಕೊನೆಯ: **ದಿನಾಂಕ: 19.08.2025 ಅಪರಾಹ್ನ 01.30 ಗಂಟೆಯ ನಂತರ,** 5) ಆರ್ಥಿಕ ಬಿಡ್‌ಗಳನ್ನು ತೆರೆಯುವ ಕೊನೆಯ: **ದಿನಾಂಕ: 20.08.2025 ಅಪರಾಹ್ನ 01.30 ಗಂಟೆಯ ನಂತರ**

**ಮೂರನೇ ಕರೆ:** 6) ತಾಂತ್ರಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ : **ದಿನಾಂಕ: 30.08.2025 ಅಪರಾಹ್ನ 01.30 ಗಂಟೆಯ,** 7) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ಕೊನೆಯ : **ದಿನಾಂಕ: 01.09.2025 ಅಪರಾಹ್ನ 01.30 ಗಂಟೆಯ,** 8) ಆರ್ಥಿಕ ಬಿಡ್‌ಗಳನ್ನು ತೆರೆಯುವ ಕೊನೆಯ : **ದಿನಾಂಕ: 02.09.2025 ಅಪರಾಹ್ನ 01.30 ಗಂಟೆಯ,** 9) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ: ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಾದೇಶಿಕ ಅರಣ್ಯ ಉಪ- ವಿಭಾಗ ಕಲಬುರಗಿ ಎಸ್.ಬಿ.ಟೆಂಪಲ್ ರೋಡ ಕಲಬುರಗಿ. 10) ಅಂತರಜಾಲ ತಾಣದ ವಿಳಾಸ: https://kppp.karnataka.gov.in

**ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು**
**ಪ್ರಾದೇಶಿಕ ಅರಣ್ಯ ಉಪ-ವಿಭಾಗ, ಕಲಬುರಗಿ.**

ವಾ.ಸಾ.ಸಂ.ಇ/ಕಲಬುರಗಿ/366/ಕೆ.ಎಸ್.ಎಂ.ಸಿ.&ಎ/2025-26


**Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.**